ಬೆಂಗಳೂರು ಮಂಗಳವಾರ 22 ಸೆಪ್ಟೆಂಬರ್ 2026 I ಸಂಪುಟ 44 I ಸಂಚಿಕೆ 281 ಪುಟ 8 I ಬೆಲೆ 3.00
Sanjevani Kannada Daily I Bangalore I Tuesday I 22 September 2026 I Vol: 44 Issue 281 I Pages 8 I RNI No: 36667/82 I Rs. 3.00

# ಸಂಜೆವಾಣಿ

1982
ಬೆಂಗಳೂರು - ಹುಬ್ಬಳ್ಳಿ - ಕಲಬುರಗಿ - ಬಳ್ಳಾರಿ - ಮೈಸೂರು - ಮಂಗಳೂರು - ರಾಯಚೂರು - ದಾವಣಗೆರೆ - ಶಿವಮೊಗ್ಗ
www.sanjevani.com contact @sanjevani.com PH: 080 22868882

Excel Refrigeration Service
Refrigeration & Bakery Equipment
Bommasandra, Bangalore

ರೋಟ್ರಿ ರ್‍ಯಾಕ್ ಓವೆನ್‌ಗಳು
ಸ್ಪೆರಲ್ ಮಿಕ್ಸರ್ಸ್
ಪ್ಲಾನೆಟರಿ ಮಿಕ್ಸರ್ಸ್
ಇಂಪೋರ್ಟೆಡ್ ಓವೆನ್‌ಗಳು.
ಕಿಚನ್ ಫ್ರೀಜರ್‌ಗಳು
ಜ್ಯೂಸ್ ಮೆಷಿನ್‌ಗಳು
ವರ್ಟಿಕಲ್ ಕೇಕ್ ಡಿಸ್‌ಪ್ಲೇ.
Mob : 9902030007/9900021097

## 28 ಕೋಟಿ ಮೌಲ್ಯದ ಹೈಡ್ರೋಪೋನಿಕ್ ಗಾಂಜಾ ಜಪ್ತಿ



ಬೆಂಗಳೂರು,ಸೆ.22-ದೇವನಹಳ್ಳಿಯ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಕೆಐಎ) ಕಸ್ಟಮ್ಸ್ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿ,ಕೋಟ್ಯಂತರ ರೂ ಮೌಲ್ಯದ ಹೈಡ್ರೋಪೋನಿಕ್ ಗಾಂಜಾ ಹಾಗೂ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದಾರೆ. ಪ್ರತ್ಯೇಕ ಪ್ರಕರಣಗಳಲ್ಲಿ ಆರು ಮಂದಿ ಪ್ರಯಾಣಿಕರನ್ನು ಬಂಧಿಸಿ 28 ಕೋಟಿ ಮೌಲ್ಯದ ಹೈಡ್ರೋಪೋನಿಕ್ ಗಾಂಜಾ ಜಪ್ತಿ ಮಾಡಲಾಗಿದೆ.

ವಿಯೆಟ್ನಾಂ ಹಾಗೂ ಬ್ಯಾಂಕಾಕ್‌ನಿಂದ ಪ್ರಯಾಣಿಕರ ಲಗೇಜ್ ಬ್ಯಾಗ್‌ಗಳಲ್ಲಿ ಅಡಗಿಸಿ ತರಲಾಗುತ್ತಿದ್ದ ಒಟ್ಟು 80.11 ಕೆಜಿ ಹೈಡ್ರೋಪೋನಿಕ್ ಗಾಂಜಾವನ್ನು ಕಸ್ಟಮ್ಸ್ ಅಧಿಕಾರಿಗಳು ಪತ್ತೆಹಚ್ಚಿದ್ದಾರೆ. ಜಪ್ತಿಯಾಗಿರುವ ಗಾಂಜಾದ ಅಂದಾಜು ಮಾರುಕಟ್ಟೆ ಮೌಲ್ಯ 28 ಕೋಟಿ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಸಂಬಂಧ

ಪುಟ 2

## ಶ್ರೀಲಂಕಾ ವಿರುದ್ಧ ಭಾರತಕ್ಕೆ ಭರ್ಜರಿ ಜಯ

ನಿಸ್ತಿನ್, ಸೆ. 22- 2026ರ ಏಷ್ಯನ್ ಗೇಮ್ಸ್‌ನಲ್ಲಿ ಭಾರತ ಮೊದಲ ಚಿನ್ನದ ಪದಕವನ್ನು ಮಹಿಳಾ ಕ್ರಿಕೆಟ್‌ನಲ್ಲಿ ಗೆದ್ದುಕೊಂಡಿದೆ. ಇಂಡಿಯನ್ ವುಮನ್ಸ್ ನ್ಯಾಷನಲ್ ಕ್ರಿಕೆಟ್ ತಂಡವು ಫೈನಲ್‌ನಲ್ಲಿ ಶ್ರೀಲಂಕಾವನ್ನು 147 ರನ್‌ಗಳಿಂದ ಮಣಿಸಿ ಚಿನ್ನದ ಪದಕ ತನ್ನದಾಗಿಸಿಕೊಂಡಿತು.

ಮಂದಾನಾ–ಶಫಾಲಿ ಭರ್ಜರಿ ಆರಂಭ

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತಕ್ಕೆ ಸ್ಮೃತಿ ಮಂದಾನಾ ಮತ್ತು ಶಫಾಲಿ ವರ್ಮಾ ಸ್ಫೋಟಕ ಆರಂಭ ನೀಡಿದರು. ಇಬ್ಬರೂ ಸೇರಿ 99 ರನ್‌ಗಳ ಆರಂಭಿಕ ಜೊತೆಯಾಟ ಕಟ್ಟಿದರು. ಶಫಾಲಿ 29 ಎಸೆತಗಳಲ್ಲಿ 48 ರನ್ ಗಳಿಸಿ ಔಟಾದ ಬಳಿಕ ಮಂದಾನಾ ಇನ್ನಿಂಗ್ಸ್‌ಗೆ ವೇಗ ನೀಡಿದರು.

ಮಂದಾನಾ 45 ಎಸೆತಗಳಲ್ಲಿ 79 ರನ್ ಸಿಡಿಸಿ ಭಾರತದ ಬೃಹತ್ ಮೊತ್ತಕ್ಕೆ ಭದ್ರ ಅಡಿಪಾಯ ಹಾಕಿದರು. ನಂತರ ಬಂದ ರಿಚಾ

### ಏಷ್ಯನ್ ಕ್ರೀಡಾಕೂಟದಲ್ಲಿ ಮೊದಲ ಚಿನ್ನ

ಘೋಷ್ ಅಂತಿಮ ಹಂತದಲ್ಲಿ ಶ್ರೀಲಂಕಾ ಬೌಲರ್‌ಗಳ ಮೇಲೆ ಸವಾರಿ ಮಾಡಿದರು. ಅವರು ಕೇವಲ 22 ಎಸೆತಗಳಲ್ಲಿ ಅಜೇಯ 49 ರನ್ ಗಳಿಸಿದರು. ಇದರ ಪರಿಣಾಮ ಭಾರತ 20 ಓವರ್‌ಗಳಲ್ಲಿ

ಪುಟ 2



# 8 ಭ್ರಷ್ಟರು ಲೋಕಾ ಬಲೆಗೆ

## ರಾಜ್ಯದ ಹಲವೆಡೆ ಲೋಕಾ ದಾಳಿ : ಅಪಾರ ಪ್ರಮಾಣದ ಆಸ್ತಿ ಪಾಸ್ತಿ ಪತ್ತೆ

The Best Jewellery
• GOLD • SILVER • DIAMOND
BIS 916 HALLMARKED GOLD JEWELLERY
ಚಿನ್ನ ಮತ್ತು ಬೆಳ್ಳಿ ಖರೀದಿಸಲು ಪ್ರತಿಷ್ಠಿತ ಆಭರಣ ಶೋರೂಮ್.
T & C Apply
ನಿಮ್ಮ ಹಳೆಯ ಚಿನ್ನವನ್ನು ನಾವು ಆನ್‌ಲೈನ್ ದರದಲ್ಲಿ ಖರೀದಿಸುತ್ತೇವೆ.
Making Charges Starting from 3%
Benefits
*Pay flexible amounts for 10 months and purchase on 11th month. *50% off on making charges on all gold ornaments.
*This offer will be valid only on the total amount accumulated for 10 months.
#6, 1/1, 11th Main Road Gokula 1st Stage, Bombay Dyeing Road, Opp Comfort Inn Hotel, Yeshwanthpur, Bengaluru- 560 054. Call: 080-41146916 / +91-9686062916

ಬೆಂಗಳೂರು,ಸೆ.22- ಆದಾಯಕ್ಕಿಂತಲೂ ನೂರಾರು ಪಟ್ಟು ಅಕ್ರಮ ಆಸ್ತಿ ಗಳಿಕೆ, ಭ್ರಷ್ಟಾಚಾರ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಏಕಕಾಲದಲ್ಲಿ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು 8 ಮಂದಿ ಭ್ರಷ್ಟ ಅಧಿಕಾರಿಗಳನ್ನು ಬಲೆಗೆ ಕೆಡವಿ ಕೋಟ್ಯಂತರ ಮೌಲ್ಯದ ಅಕ್ರಮ ಆಸ್ತಿಪಾಸ್ತಿಗಳನ್ನು ಪತ್ತೆಹಚ್ಚಿದ್ದಾರೆ.

ಬಲೆಗೆಬಿದ್ದಿರುವ 8 ಮಂದಿ ಭ್ರಷ್ಟ ಸರ್ಕಾರಿ ಅಧಿಕಾರಿಗಳ ಕಚೇರಿ ಮನೆ ಸಂಬಂಧಿಕರ ಮನೆಗಳ ಇಂದು ಮುಂಜಾನೆಯಿಂದಲೇ ಎಸ್ ಪಿಗಳ ನೇತೃತ್ವದಲ್ಲಿ ಏಕಕಾಲದಲ್ಲಿ ದಾಲಿ ನಡೆಸಿ ಅಪಾರ ಪ್ರಮಾಣದ ನಗದು ಚಿನ್ನಾಭರಣಗಳು,ಐಷಾರಾಮಿ ವಸ್ತುಗಳು,

ಆಸ್ತಿಪಾಸ್ತಿಗಳ ದಾಖಲೆ ಪತ್ರಗಳನ್ನು ವಶಪಡಿಸಿಕೊಂಡು ಪರಿಶೀಲನೆ ಕೈಗೊಂಡಿದ್ದಾರೆ.

ಬೆಂಗಳೂರು, ಬೀದರ್,ಮಂಡ್ಯ, ಚಿಕ್ಕಬಳ್ಳಾಪುರ,ಕೊಡಗು ಜಿಲ್ಲೆಗಳಲ್ಲಿ ದಾಳಿ ನಡೆಸಿರುವ 8 ಮಂದಿ ಭ್ರಷ್ಟ ಅಧಿಕಾರಿಗಳ ಕಚೇರಿ ಮನೆಗಳ ಮೇಲಿನ ದಾಳಿಯೂ ಮುಂದುವರೆದಿದ್ದು,ಸಂಜೆ



### ದಾಳಿ ನಡೆದ ಅಧಿಕಾರಿಗಳ ವಿವರ

- ದರ್ಶನ್ ಗೌಡ – ಪ್ರಥಮ ದರ್ಜೆ ಸಹಾಯಕ, ಜಿಲ್ಲಾಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ.
- ರಂಗನಾಥ್ ಹೆಚ್.ಎಂ. – ನಿವೃತ್ತ ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ), ಬಿಬಿಎಂಪಿ, ಬೆಂಗಳೂರು.
- ಶ್ರೀದೇವಿ – ಜಿಲ್ಲಾ ನೋಂದಣಾಧಿಕಾರಿ, ಬೆಂಗಳೂರು.
- ಹೆಚ್.ಆರ್.ರಮೇಶ್ – ಪೌರಾಯುಕ್ತರು, ನಗರಸಭೆ, ಮಡಿಕೇರಿ.
- ಕಿರಣ್ ಕುಮಾರ್ ಬೈಂದೂರ್ – ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ), ಹೆಸ್ಕಾಂ, ಹುಬ್ಬಳ್ಳಿ–ಧಾರವಾಡ.
- ರಾಜೇಶ್ವರಿ – ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ), ಜೆಸ್ಕಾಂ, ಕಲಬುರಗಿ.
- ಮಾಣಿಕ್ ರಾವ್ – ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ, ಬೀದರ್.
- ಶಿವರಾಜು – ಹಾಸ್ಟೆಲ್ ಸೂಪರಿಂಟೆಂಡೆಂಟ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಂಡ್ಯ.

ವೇಳೆ ದಾಳಿಯಲ್ಲಿ ಪತ್ತೆಯಾಗಿರುವ ನಗದು ಚಿನ್ನಾಭರಣಗಳು, ಐಷಾರಾಮಿ ವಸ್ತುಗಳು, ವಿದೇಶಿ ಮದ್ಯಗಳು ಸೇರಿ ಅಪಾರ ಪ್ರಮಾಣದ ಆಸ್ತಿಪಾಸ್ತಿಗಳ ದಾಖಲೆ ಪತ್ರಗಳ ಒಟ್ಟಾರೆ ಮೌಲ್ಯ ಲಭ್ಯವಾಗಲಿದೆ.

ಲೋಕಾಯುಕ್ತ ಅಧಿಕಾರಿಗಳ ತಂಡಗಳು ವಿವಿಧ ಸ್ಥಳಗಳಲ್ಲಿ ದಾಖಲೆಗಳು, ಆಸ್ತಿ–ಪಾಸ್ತಿ ವಿವರಗಳು ಹಾಗೂ ಇತರೆ ಸಂಬಂಧಿತ ದಾಖಲೆಗಳನ್ನು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಲೋಕಾಯುಕ್ತ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

ಕೃಷಿ ಇಲಾಖೆಯ ನಿವೃತ್ತ ಆಡಳಿತಾಧಿಕಾರಿ ಮಾಣಿಕ್ ಶೆರಿಕಾರ್ ಅವರ ಬೀದರ್ ನಗರದ ಹಳ್ಳಿಕಾಲೋನಿ ನಿವಾಸ, ಹುಮ್ನಾಬಾದ್‌ನ ನಿವಾಸ ಮತ್ತು ಚಿಟಗುಪ್ಪ ತಾಲೂಕಿನ ಮುತ್ತಂಗಿಯ ಗ್ರಾಮದ ಬಳಿ ಇರುವ ಫಾರ್ಮ್ ಹೌಸ್ ಮೇಲೆ ಲೋಕಾಯುಕ್ತ ಡಿವೈಎಸ್ಪಿ ಹನುಮಂತ ರೆಡ್ಡಿ ನೇತೃತ್ವದ ತಂಡ ದಾಳಿ ನಡೆಸಿದೆ.

ಮೂರು ಕಡೆಗಳಲ್ಲಿ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳ ತಂಡ ತೀವ್ರ ತಪಾಸಣೆ ನಡೆಸಿದೆ.

ಪುಟ 2

## ಕೆಪಿಎಸ್‌ಸಿ ರದ್ದತಿಗೆ ಸಿಎಂ ಇಂಗಿತ

ಬೆಂಗಳೂರು, ಸೆ.22- ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನೇಮಕಾತಿ ಪ್ರಕ್ರಿಯೆಯಲ್ಲಿ ಪದೇಪದೇ ಅಕ್ರಮ ಹಾಗೂ ಭ್ರಷ್ಟಾಚಾರದ ಆರೋಪಗಳು ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ, ಆಯೋಗವನ್ನು ರದ್ದುಗೊಳಿಸುವುದು ಅಥವಾ ಸಂಪೂರ್ಣವಾಗಿ ಪುನಾರಚನೆ ಮಾಡುವ ಬಗ್ಗೆ ಸರ್ಕಾರ ಗಂಭೀರವಾಗಿ ಚಿಂತನೆ ನಡೆಸುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪಾರದರ್ಶಕತೆ ಮತ್ತು ಅರ್ಹತೆಗೆ ಆದ್ಯತೆ ನೀಡುವುದು ಸರ್ಕಾರದ ಉದ್ದೇಶ ಎಂದರು. ಪರೀಕ್ಷಾ ಅಕ್ರಮಗಳಿಂದ ಪ್ರಾಮಾಣಿಕವಾಗಿ ಪರೀಕ್ಷೆ ಬರೆಯುವ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತಿದ್ದು, ಇಂತಹ ಘಟನೆಗಳು ಮರುಕಳಿಸದಂತೆ ವ್ಯವಸ್ಥೆಯಲ್ಲಿ ಮೂಲಭೂತ ಬದಲಾವಣೆ ಅಗತ್ಯವಿದೆ ಎಂದು ಹೇಳಿದರು.

ಕೆಪಿಎಸ್‌ಸಿ ನೇಮಕಾತಿ ಅಕ್ರಮಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ಈಗಾಗಲೇ ಐವರು ಸದಸ್ಯರ ವಿಶೇಷ ತನಿಖಾ ತಂಡ (ರಚಿಸಿದ್ದು, ಡಿಜಿಪಿ ಅಲೋಕ್ ಕುಮಾರ್ ನೇತೃತ್ವದ ತಂಡಕ್ಕೆ ತನಿಖೆ ನಡೆಸುವಂತೆ ಸೂಚಿಸಿದೆ. ತನಿಖೆಯನ್ನು

ಪುಟ 2

## ಅಧಿವೇಶನ ವಿಸ್ತರಣೆ

ಬೆಂಗಳೂರು, ಸೆ. 22- ವಿಧಾನ ಮಂಡಲದ ಅಧಿವೇಶನವನ್ನು ಒಂದು ದಿನ ವಿಸ್ತರಿಸುವ ತೀರ್ಮಾನ ಕೈಗೊಳ್ಳಲಾಗಿದೆ.

ಡಾ. ಕೆ. ಕಸ್ತೂರಿ ರಂಗನ್ ವರದಿ, ಬರ ಪರಿಸ್ಥಿತಿಯ ಬಗ್ಗೆ ಚರ್ಚಿಸಲು ಮೂರು ದಿನಗಳ ಅಧಿವೇಶನವನ್ನು ಕರೆಯಲಾಗಿತ್ತು. ಕಸ್ತೂರಿ ರಂಗನ್ ವರದಿಯ ಚರ್ಚೆಯೇ ಒಂದೂವರೆ ದಿನಕ್ಕೂ ಹೆಚ್ಚು ಕಾಲ ತೆಗೆದುಕೊಂಡ ಕಾರಣ ಬರ ಪರಿಸ್ಥಿತಿಯ ಬಗ್ಗೆ ಹೆಚ್ಚಿನ ಚರ್ಚೆಗೆ ಅವಕಾಶ ಮಾಡಿಕೊಡಲು ವಿಧಾನ ಮಂಡಲದ ಅಧಿವೇಶನವನ್ನು ಒಂದು ದಿನ ಅಂದರೆ ಗುರುವಾರದ ವರೆಗೂ ವಿಸ್ತರಣೆ ಮಾಡಲಾಗಿದೆ.

ಮೊದಲಿನ ವೇಳಾಪಟ್ಟಿಯಂತೆ ನಾಳೆಗೆ ಅಧಿವೇಶನ ಕೊನೆಯಾಗಬೇಕಿತ್ತು. ಒಂದು ದಿನ ವಿಸ್ತರಣೆಯಾಗಿರುವುದರಿಂದ ಗುರುವಾರವೂ ಅಧಿವೇಶನ ಮುಕ್ತಾಯವಾಗಲಿದೆ.

## ಕಸ್ತೂರಿ ರಂಗನ್ ವರದಿಯಿಂದ ಪಾರಾಗಲು ಸುನೀಲ್ ಸಲಹೆ

ಬೆಂಗಳೂರು,ಸೆ.22- ಜನ ಸಂಸ್ಕೃತಿಯನ್ನು ನಾಶ ಮಾಡಿ ಪಶ್ಚಿಮಘಟ್ಟವನ್ನು ಉಳಿಸುತ್ತೇವೆ, ಪರಿಸರ ಕಾಪಾಡುತ್ತೇವೆ ಎಂಬುದು ಮೂರ್ಖತನದ ಪರಮಾವಧಿ. ಜನ ಸಂಸ್ಕೃತಿಯನ್ನು ಉಳಿಸಿ, ಪರಿಸರವನ್ನು ಕಾಪಾಡುವುದು ಬಹಳ ಮುಖ್ಯ ಎಂದು ಬಿಜೆಪಿಯ ಸುನೀಲ್‌ಕುಮಾರ್ ವಿಧಾನಸಭೆಯಲ್ಲಿಂದು ಹೇಳಿದರು.

ಡಾ. ಕೆ. ಕಸ್ತೂರಿ ರಂಗನ್ ವರದಿಯ ಮುಂದುವರೆದ ಚರ್ಚೆಗೆ ಸಂಬಂಧಿಸಿದಂತೆ 2ನೇ ದಿನವಾದ ಮುಂದುವರೆದ ಚರ್ಚೆಯಲ್ಲಿ ಮಾತನಾಡಿದ ಅವರು, ಪಶ್ಚಿಮಘಟ್ಟದ ಜನ ಪರಿಸರ, ಕಾಡು ಪ್ರಾಣಿಗಳು, ಜೀವವೈವಿಧ್ಯತೆಗಳ ಜತೆಯೇ ಬದುಕು ಕಟ್ಟಿಕೊಂಡಿದ್ದಾರೆ. ಅವರಿಗೆ ಭಾವನೆ, ಬದುಕು ಬೇರೆಯಲ್ಲ. ಈಗಾಗಲೇ ಅರಣ್ಯ ಕಾಯ್ದೆಗಳಿಂದ ಅಲ್ಲಿನ ಜನ ಬಹಳಷ್ಟು ತೊಂದರೆಗೆ ಒಳಗಾಗಿದ್ದಾರೆ. ಹೀಗಿರುವಾಗ ಮತ್ತೆ ಕಸ್ತೂರಿ ರಂಗನ್ ವರದಿಯ ಆತಂಕ ಎದುರಾಗಿದೆ. ಹಾಗಾಗಿ ಅಲ್ಲಿನ ಜನರ ಬದುಕು, ಭಾವನೆ ಎರಡನ್ನೂ ರಕ್ಷಣೆ ಮಾಡಬೇಕಿದೆ ಎಂದು ಹೇಳಿದರು.

ಪಶ್ಚಿಮಘಟ್ಟದ ಜನ ಉಳಿದವರಿಗಿಂತ ಪರಿಸರವನ್ನು ಉಳಿಸಿ ಬೆಳೆಸಿದ್ದಾರೆ. ಎಲ್ಲೋ ನಗರ ಪ್ರದೇಶಗಳಲ್ಲಿ ಕುಳಿತು ಪರಿಸರ ಉಳಿಸಿ ಎಂದು ಮಾತನಾಡುವವರಿಗಿಂತ ಪಶ್ಚಿಮಘಟ್ಟದ ಜನ ಪರಿಸರದ ಜತೆಯೇ ಬದುಕಿ ಅದನ್ನು ಉಳಿಸುವ ಕೆಲಸ ಮಾಡಿದ್ದಾರೆ ಎಂದರು.

ಪಶ್ಚಿಮಘಟ್ಟ ಕೆಲವರಿಗೆ ಸೆಲ್ಫಿ ಪಾಯಿಂಟ್ ಆಗಿರಬಹುದು. ಆದರೆ ನಮಗೆ ಅದು ಸೆಲ್ಫಿ ಪಾಯಿಂಟ್ ಅಲ್ಲ, ಬದುಕಿನ ಪಾಯಿಂಟ್ ಆಗಿದೆ ಎಂದರು.

ಕಸ್ತೂರಿ ರಂಗನ್ ವರದಿಯನ್ನು ತಿರಸ್ಕರಿಸಿ ಎಂದು ವಿಧಾನಸಭೆಯಲ್ಲಿ ನಿರ್ಣಯ ಮಾಡಿ ಕಳುಹಿಸಿದರೆ ಅದರಿಂದ ಪ್ರಯೋಜನವಾಗುವುದಿಲ್ಲ. ವೈಜ್ಞಾನಿಕವಾಗಿ ಈ ವರದಿಯನ್ನು ವಿಶ್ಲೇಷಣೆ ಮಾಡಿ ಪ್ರತಿ ಗ್ರಾಮದಲ್ಲೂ ಸರ್ವೆ ಮಾಡಿ ದಾಖಲೆಗಳ ಸಮೇತ ಆಕ್ಷೇಪಣೆಗಳನ್ನು ಸಲ್ಲಿಸಿದರೆ ಮಾತ್ರ ನಾವು ಕಸ್ತೂರಿ ರಂಗನ್ ವರದಿಯಿಂದ ಪಾರಾಗಬಹುದು ಎಂದರು. ಕೇರಳದಲ್ಲಿ ಪ್ರತಿ ಗ್ರಾಮದಲ್ಲೂ ಸರ್ವೆ

ಪುಟ 2

## ಕೆಪಿಎಸ್‌ಸಿ ಅಕ್ರಮ: ಸರ್ಕಾರಕ್ಕೆ ಸಿಐಡಿ ವರದಿ ಸಲ್ಲಿಕೆ

ಬೆಂಗಳೂರು, ಸೆ. 22- ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್‌ಸಿ) ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮದ ತನಿಖೆ ನಡೆಸಿರುವ ಸಿಐಡಿ, ಹಣ ವರ್ಗಾವಣೆ ಹಾಗೂ ಹುದ್ದೆಗಳ ಮಾರಾಟದ ಆರೋಪಗಳಿಗೆ ಸಂಬಂಧಿಸಿದ ಹಲವು ಮಹತ್ವದ ಮಾಹಿತಿಗಳನ್ನು ಸರ್ಕಾರಕ್ಕೆ ಸಲ್ಲಿಸಿರುವ ತನಿಖಾ ವರದಿಯಲ್ಲಿ ಉಲ್ಲೇಖಿಸಿದೆ.

ಪಶುವೈದ್ಯಾಧಿಕಾರಿ ಹುದ್ದೆ ಅಕ್ರಮಕ್ಕೆ ಸಂಬಂಧಿಸಿದಂತೆ ಸಿಐಡಿ ಒಟ್ಟು 92 ಲಕ್ಷ ಹಣವನ್ನು ಜಪ್ತಿ ಮಾಡಿದೆ. ಭಾಲ್ಕಿಯ ಓಂ ಲಕ್ಷ್ಮೀ ಸೌಹಾರ್ದ ಸಹಕಾರಿ ಬ್ಯಾಂಕ್ ಹಾಗೂ ಕೋಟಕ್ ಮಹೀಂದ್ರಾ ಬ್ಯಾಂಕ್ ಖಾತೆಗಳಿಗೆ 92 ಲಕ್ಷ ಜಮೆಯಾಗಿರುವುದು ತನಿಖೆಯಲ್ಲಿ ಪತ್ತೆಯಾಗಿದೆ.

ಮಧ್ಯವರ್ತಿ ಕನ್ನಾಳೆ ಸೂಚನೆಯಂತೆ ಐವರು ಅಭ್ಯರ್ಥಿಗಳು ಹಣ ವರ್ಗಾಯಿಸಿದ್ದರು ಎಂದು ವರದಿಯಲ್ಲಿ ತಿಳಿಸಲಾಗಿದೆ.

ಸಿದ್ದಾರ್ಥ್ 20 ಲಕ್ಷ, ವಿ. ಬಸವರಾಜ್ 27 ಲಕ್ಷ, ಮಹೇಂದ್ರ 25 ಲಕ್ಷ ಹಾಗೂ ನಿರಂಜನ್ 14 ಲಕ್ಷವನ್ನು ಬ್ಯಾಂಕ್ ಖಾತೆಗೆ ಜಮೆ ಮಾಡಿದ್ದರೆ, ಕಿರಣ್ ಗೌಡ 10 ಲಕ್ಷ, ಸಲೀಂ 30 ಲಕ್ಷ ಹಾಗೂ ಮೊಹಮದ್ ಸುಹೈಲ್ 20 ಲಕ್ಷವನ್ನು ನಗದು ರೂಪದಲ್ಲಿ ನೀಡಿದ್ದರು ಎಂದು ತನಿಖಾ ವರದಿಯಲ್ಲಿ ಉಲ್ಲೇಖಿಸಲಾಗಿದೆ.

**60–80 ಪ್ರಶ್ನೆಗಳ ಅಭ್ಯಾಸ:**

ಅಭ್ಯರ್ಥಿಗಳು, ಮಧ್ಯವರ್ತಿಗಳು ಹಾಗೂ

ಪುಟ 2

## 12 ಕೋಟಿ ನಕಲಿ ಔಷಧಿ ವಹಿವಾಟು : 8 ಮಂದಿ ಸೆರೆ

ಬೆಂಗಳೂರು, ಸೆ. 22- ನಕಲಿ ಔಷಧಿ ಮಾರಾಟ ಪ್ರಕರಣದ ತನಿಖೆ ತೀವ್ರಗೊಳಿಸಿರುವ ವಿಶೇಷ ತನಿಖಾ ತಂಡ ಫೆಬ್ರವರಿ 2025ರಿಂದ ಸುಮಾರು 12 ಕೋಟಿ ಮೌಲ್ಯದ ನಕಲಿ ಔಷಧಿಗಳನ್ನು ಮಾರಾಟ ಮಾಡಿರುವ ಜಾಲವನ್ನು ಪತ್ತೆಹಚ್ಚಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಟು ಮಂದಿಯನ್ನು ಬಂಧಿಸಲಾಗಿದ್ದು, ನಕಲಿ ಔಷಧಿ ಪೂರೈಕೆ ಜಾಲದ ಪ್ರಮುಖ ಆರೋಪಿ ಎನ್ನಲಾಗಿರುವ ವೀರೇಶ್ ಕುಮಾರ್ ಜೈನ್‌ನನ್ನು ಪೊಲೀಸರು ಬಂಧಿಸಿದ್ದಾರೆ.

ಕೃಪಾ ಹೆಲ್ತ್ ಕೇರ್ ಮೂಲಕ ನಕಲಿ ಔಷಧಿಗಳನ್ನು ಮಾರಾಟ ಮಾಡಲಾಗುತ್ತಿತ್ತು, ಪ್ರತಿಷ್ಠಿತ ಔಷಧ ಕಂಪನಿಯ ಫೈಜರ್ ಲೇಬಲ್ ಬಳಸಿ ನಕಲಿ ಔಷಧಿ ಮಾರಾಟ ಮಾಡಿರುವ ಆರೋಪವೂ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

**ಹಲವು ವರ್ಷಗಳಿಂದ ದಂಧೆ:**

ವೀರೇಶ್ ಕುಮಾರ್ ಜೈನ್ 2021ರಿಂದ ಔಷಧಿ ಮಳಿಗೆ ನಡೆಸುತ್ತಿದ್ದ ಎನ್ನಲಾಗಿದ್ದು, 2019ರಿಂದ ಆರ್. ಪ್ರಶಾಂತ್ ಎಂಬಾತನೊಂದಿಗೆ ಔಷಧಿ ವಿತರಣೆ ನಡೆಸುತ್ತಿದ್ದ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ. ನಕಲಿ ಔಷಧಿ ದಂಧೆ ಹಲವು ವರ್ಷಗಳಿಂದ ನಡೆಯುತ್ತಿತ್ತೇ ಎಂಬ ಬಗ್ಗೆಯೂ ಎಸ್‌ಐಟಿ ತನಿಖೆ ನಡೆಸುತ್ತಿದೆ.

ಪಾಪರೆಡ್ಡಿಪಾಳ್ಯದ ನಿವಾಸಿಯಾಗಿರುವ ಆರ್. ಪ್ರಶಾಂತ್ ಸದ್ಯ ಅಜರ್‌ಬೈಜಾನ್

ಪುಟ 2

## ಕಸ್ತೂರಿರಂಗನ್ ವರದಿ ಒಪ್ಪದಿರಲು ನಿರ್ಣಯ ಸಾಧ್ಯತೆ

ಬೆಂಗಳೂರು, ಸೆ. 22- ಪಶ್ಚಿಮಘಟ್ಟಕ್ಕೆ ಸಂಬಂಧಿಸಿದ ಡಾ.ಕೆ. ಕಸ್ತೂರಿ ರಂಗನ್ ವರದಿಯ ಜಾರಿಯನ್ನು ಒಪ್ಪದಿರುವ ನಿರ್ಣಯವನ್ನು ವಿಧಾನಮಂಡಲದ ಉಭಯ ಸದನಗಳಲ್ಲಿ ರಾಜ್ಯ ಸರ್ಕಾರ ಕೈಗೊಳ್ಳಲಿದೆ.

ಪಶ್ಚಿಮಘಟ್ಟ ಭಾಗದ ಜನರ ಬದುಕಿಗೆ ಮಾರಕ ಎನಿಸಿರುವ ಡಾ. ಕಸ್ತೂರಿ ರಂಗನ್ ವರದಿ ಹಾಗೂ ಬರ ಪರಿಸ್ಥಿತಿ ಬಗ್ಗೆ ಚರ್ಚಿಸಲು ಕರೆಯಲಾಗಿದ್ದ ವಿಶೇಷ ಅಧಿವೇಶನದಲ್ಲಿ ರಾಜ್ಯ ಸರ್ಕಾರ ಕಸ್ತೂರಿ ರಂಗನ್ ವರದಿಯನ್ನು ಒಪ್ಪದಿರುವ ನಿರ್ಣಯವನ್ನು ಮಂಡಿಸಲಿದ್ದು, ಅದಕ್ಕೆ ಸದನ ಸರ್ವಾನುಮತದಿಂದ ಅನುಮೋದನೆ ನೀಡಲಿದೆ.

ಕಸ್ತೂರಿ ರಂಗನ್ ವರದಿ ಸಂಬಂಧ ವಿಧಾನಸಬೆಯಲ್ಲಿ ನಿನ್ನೆಯಿಂದ ಚರ್ಚೆ ನಡೆದಿದ್ದು, ಇಂದು ಮಧ್ಯಾಹ್ನದವರೆಗೂ ಚರ್ಚೆ ನಡೆದು ಸದನವನ್ನು ಭೋಜನ ವಿರಾಮಕ್ಕೆ ಮುಂದೂಡಿ, ಭೋಜನ ವಿರಾಮದ ನಂತರ ರಾಜ್ಯ ಸರ್ಕಾರ ಸದನದಲ್ಲಿ ಕಸ್ತೂರಿ ರಂಗನ್

ಪುಟ 2

## 200 ತಾಲೂಕು ಬರಪೀಡಿತ: 35 ಸಾವಿರ ಕೋಟಿ ನಷ್ಟ: ಡಿಸಿಎಂ

ಬೆಂಗಳೂರು,ಸೆ.22- ರಾಜ್ಯದಲ್ಲಿ ಮುಂಗಾರು ಮಳೆಯ ತೀವ್ರ ಕೊರತೆಯಿಂದ 200 ತಾಲೂಕುಗಳು ಬರದಿಂದ ತತ್ತರಿಸಿದ್ದು, ಸುಮಾರು 39 ಸಾವಿರ ಕೋಟಿ ನಷ್ಟ ಉಂಟಾಗಿದೆ ಎಂದು ಉಪಮುಖ್ಯಮಂತ್ರಿ ಸಚಿವ ಡಾ.ಜಿ.ಪರಮೇಶ್ವರ್ ಅವರು ಮೇಲ್ಮನೆಯಲ್ಲಿ ತಿಳಿಸಿದ್ದಾರೆ

ಈಗಾಗಲೇ ಘೋಷಿಸಿರುವ ಬರಪೀಡಿತ ತಾಲೂಕುಗಳ ಜೊತೆ ಹೆಚ್ಚುವರಿಯಾಗಿ ಮತ್ತೆ 53 ತಾಲೂಕುಗಳನ್ನು ಸೇರ್ಪಡೆಗೊಳಿಸುತ್ತಿದ್ದು, ಇಲ್ಲಿಯವರೆಗೆ 177 ತಾಲೂಕುಗಳನ್ನು ಬರ ಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿದೆ ಎಂದು ತಿಳಿಸಿದರು.

ವಿಧಾನಮಂಡಲದ ವಿಶೇಷ ಅಧಿವೇಶನದ ಅಂಗವಾಗಿ ನಡೆದ ಚರ್ಚೆಗೂ ಮುನ್ನ ರಾಜ್ಯದ ಬರ ಪರಿಸ್ಥಿತಿ ಕುರಿತು ಮಾಹಿತಿ ನೀಡಿದ ಪರಮೇಶ್ವರ್, ಹಂತ ಹಂತವಾಗಿ ಮತ್ತಷ್ಟು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆ ಮಾಡುವ ಪ್ರಕ್ರಿಯೆ ಮುಂದುವರಿದಿದ್ದು, ಇಂದು 53 ತಾಲೂಕುಗಳನ್ನು ಹೆಚ್ಚುವರಿಯಾಗಿ ಘೋಷಿಸುವುದಾಗಿ ಸರ್ಕಾರ ತಿಳಿಸಿದೆ. ಇದರಿಂದ ಒಟ್ಟು ಬರಪೀಡಿತ ತಾಲೂಕುಗಳ ಸಂಖ್ಯೆ ಸುಮಾರು 177ಕ್ಕೆ ಏರಿಕೆಯಾಗಲಿದೆ ಎಂದು ಹೇಳಿದರು.

ಕೆಲವು ದಿನಗಳಲ್ಲಿ ಇನ್ನೂ 25 ರಿಂದ 30 ತಾಲ್ಲೂಕುಗಳನ್ನು ಬರ ಪೀಡಿತ ಪ್ರದೇಶ

ಪುಟ 2

ಚಿನಿವಾರಪೇಟೆ - ಮುಂಬೈ, ಸೆಪ್ಟೆಂಬರ್ 22: ಚಿನ್ನ: ಅಪರಂಜಿ - 24 ಕ್ಯಾರೆಟ್ 10 ಗ್ರಾಂ I 1,54,420 I 22 ಕ್ಯಾರೆಟ್ - 10 ಗ್ರಾಂ 1,41,550 I ಬೆಳ್ಳಿ: 1 ಕೆ.ಜಿ. - 3,20,000

ಸಂಜೆವಾಣಿ

ಬೆಂಗಳೂರು । ಜಾಹೀರಾತಿಗಾಗಿ ಸಂಪರ್ಕಿಸಿ - 94498 71825
contact@sanjevani.com

(ಒಂದನೇ ಪುಟದಿಂದ)

# ಕಸ್ತೂರಿ ರಂಗನ್ ವರದಿ

ನಡೆಸಿ ಯಾವ ಜಾಗ ಯಾವುದಕ್ಕೆ ಬಳಕೆಯಾಗಿದೆ ಎಂಬುದನ್ನು ವಿವರಿಸಿ, ಅಲ್ಲಿನ ಸರ್ಕಾರ 13 ಸಾವಿರ ಚದರ ಮೀಟರ್ ಇದ್ದ ಪರಿಸರ ಸೂಕ್ಷ್ಮ ವಲಯವನ್ನು 9 ಸಾವಿರ ಚದರ ಮೀಟರ್‌ಗೆ ಇಳಿಸಿಕೊಂಡಿದೆ. ನಾವು ಸಹ ನಮ್ಮದೇ ಆದ ಮಾದರಿಯನ್ನು ಬಳಸಿಕೊಂಡು ವೈಜ್ಞಾನಿಕವಾಗಿ ಹಸಿರು ನ್ಯಾಯ ಪೀಠಕ್ಕೆ ಮನವಿ ಮಾಡಿದರೆ ಮಾತ್ರ ಕಸ್ತೂರಿ ರಂಗನ್ ವರದಿಯಿಂದ ಆಗುವ ತೊಂದರೆಗಳಿಂದ ಪಾರಾಗಲು ಸಾಧ್ಯ ಎಂದರು.

ವಿಧಾನಸಭೆಯಲ್ಲಿ ಒಂದು ನಿರ್ಣಯ ಮಾಡಿ ಕಳುಹಿಸಿದರೆ ಅದು ಕಸದ ಬುಟ್ಟಿ ಸೇರುತ್ತದೆ. ಹಸಿರು ನ್ಯಾಯ ಪೀಠ ಅದನ್ನು ಪರಿಗಣಿಸಲ್ಲ. ಹಾಗಾಗಿ ಕಾಲಾವಕಾಶ ತೆಗೆದುಕೊಂಡು ಪ್ರತಿ ಗ್ರಾಮಗಳ ಸರ್ವೆ ನಡೆಸಿ ವೈಜ್ಞಾನಿಕವಾಗಿ ನಮ್ಮ ಆಕ್ಷೇಪಣೆಗಳು ಏನಿವೆ, ಏಕಿವೆ ಎಂಬುದನ್ನು ಕೊಟ್ಟಾಗ ಮಾತ್ರ ಅನುಕೂಲವಾಗುತ್ತದೆ ಎಂದು ಹೇಳಿದರು.

ಈ ಹಿಂದೆ 2014 ರಲ್ಲಿ ಅಂದಿನ ಕಾಂಗ್ರೆಸ್ ಸರ್ಕಾರವೇ ಕಸ್ತೂರಿ ರಂಗನ್ ವರದಿಗೆ ಸಂಬಂಧಿಸಿದಂತೆ ಯಾವ ಅಂಶಗಳನ್ನು ಒಪ್ಪಿದ್ದೇವೆ, ಯಾವುದನ್ನು ಒಪ್ಪಿಲ್ಲ ಎಂಬುದನ್ನು ಕಳುಹಿಸಿದೆ. ಈಗ ಅದನ್ನು ಗಮನದಲ್ಲಿಟ್ಟುಕೊಂಡು ಹೊಸದಾಗಿ ಸರ್ವೆ ನಡೆಸಿ ಕಸ್ತೂರಿ ರಂಗನ್ ವರದಿ ಆಕ್ಷೇಪಣೆ ಸಲ್ಲಿಸುವುದು ಸೂಕ್ತ ಎಂದರು.

ಈ ತಿಂಗಳ 26 ರೊಳಗೆ ಕೇಂದ್ರಕ್ಕೆ ನಾವು ಆಕ್ಷೇಪಣೆ ಸಲ್ಲಿಸಬೇಕಿದೆ. ಅದು ತರಾತುರಿಯಲ್ಲಿ ಆಗಲ್ಲ. 6 ತಿಂಗಳು ಅಥವಾ 1 ವರ್ಷದ ವರೆಗೂ ಕಾಲಾವಕಾಶ ಕೋರಿ ಅತಿ ಸೂಕ್ಷ್ಮ ಪ್ರದೇಶದಲ್ಲಿ ಬರುವ ಗ್ರಾಮಗಳ ಸಮೀಕ್ಷೆ ನಡೆಸಿ ವೈಜ್ಞಾನಿಕವಾಗಿ ಎಲ್ಲವನ್ನು ಮಾಡಬೇಕು ಎಂದು ಅವರು ಒತ್ತಾಯಿಸಿದರು.

ಪರಿಸರ ಉಳಿಸುವ ಜತೆಗೆ ಜನ ಸಂಸ್ಕೃತಿಯನ್ನು ಉಳಿಸಿ ಎಂದು ಅವರು ಸರ್ಕಾರವನ್ನು ಆಗ್ರಹಿಸಿದರು.

**ವರದಿ ತಿರಸ್ಕರಿಸಿ**

ಇದೇ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಕಾಂಗ್ರೆಸ್ ಸದಸ್ಯ ರಾಜೇಗೌಡ ಅವರು, ಕಸ್ತೂರಿ ರಂಗನ್ ವರದಿಯನ್ನು ತಿರಸ್ಕರಿಸಬೇಕು. ಇದು ಮಲೆನಾಡಿನ ಭಾಗದ ಜನರಿಗೆ ಮರಣ ಶಾಸನವಾಗಲಿದೆ ಎಂದು ಹೇಳಿದರು.

ಡಾ. ಕೆ. ಕಸ್ತೂರಿರಂಗನ್ ವರದಿಯನ್ನು 7 ಬಾರಿ ತಿರಸ್ಕರಿಸಿದರೂ ಮತ್ತೆ ಮತ್ತೆ ಹೇರುವ ಹುನ್ನಾರ ನಡೆದಿದೆ. ಇದು ಸರ್ವಾಧಿಕಾರಿ ಧೋರಣೆ ಎಂದು ಟೀಕಿಸಿದರು.

ಇದೇ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಶಿವರಾಮ್ ಹೆಬ್ಬಾರ್ ಸಹ ಈ ವರದಿ ಜಾರಿಗೆ ನಮ್ಮ ವಿರೋಧವಿದೆ. ಯಾವುದೇ ಕಾರಣಕ್ಕೂ ಈ ವರದಿ ಜಾರಿಯಾಗಬಾರದು ಎಂದು ಹೇಳಿದರು.

# ನಕಲಿ ಔಷಧಿ ವಹಿವಾಟು

ನಲ್ಲಿರುವ ಮಾಹಿತಿ ಪೊಲೀಸರಿಗೆ ಲಭ್ಯವಾಗಿದೆ. ಆತನ ವಿರುದ್ಧ ರೆಡ್ ಕಾರ್ನರ್ ನೋಟಿಸ್ ಜಾರಿಗೊಳಿಸುವ ಪ್ರಕ್ರಿಯೆ ಆರಂಭಿಸಲು ಪೊಲೀಸರು ಸಿದ್ಧತೆ ನಡೆಸಿದ್ದಾರೆ.

**ಖಾತೆಗಳ ಫೊರೆನ್ಸಿಕ್ ಆಡಿಟ್:**

ಆರೋಪಿಗಳ ಬ್ಯಾಂಕ್ ಖಾತೆಗಳು, ಹಣಕಾಸು ವ್ಯವಹಾರಗಳು ಹಾಗೂ ಮತ್ತಿತರ ದಾಖಲೆಗಳ ಫೊರೆನ್ಸಿಕ್ ಆಡಿಟ್ ನಡೆಸಲಾಗುತ್ತಿದೆ. ನಕಲಿ ಔಷಧಿಗಳ ಪೂರೈಕೆ ಜಾಲದ ವ್ಯಾಪ್ತಿ, ಹಣದ ವಹಿವಾಟು ಹಾಗೂ ಇದರಲ್ಲಿ ಮತ್ತಷ್ಟು ಮಂದಿ ಭಾಗಿಯಾಗಿದ್ದಾರೆಯೇ ಎಂಬುದನ್ನು ಪತ್ತೆಹಚ್ಚಲು ತನಿಖೆ ಮುಂದುವರಿದಿದೆ.

**ರಾಮನಗರ ಬಳಿ ದಾಳಿ:**

ಆಗಸ್ಟ್ 18ರಂದು ರಾಮನಗರ ಸಮೀಪ ಔಷಧ ಇಲಾಖೆ ಅಧಿಕಾರಿಗಳೊಂದಿಗೆ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ದಾಳಿ ನಡೆಸಿದ್ದರು.

ಪ್ರಕರಣದ ತನಿಖೆ ಮುಂದುವರಿದಿದ್ದು, ನಕಲಿ ಔಷಧಿ ಜಾಲಕ್ಕೆ ಸಂಬಂಧಿಸಿದ ಮತ್ತಷ್ಟು ಮಾಹಿತಿಗಳು ಹೊರಬರುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# 8 ಭ್ರಷ್ಟರು ಲೋಕಾ ಬಲೆಗೆ



ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಎಇಇ) ರಾಜೇಶ್ವರಿ ಅವರ ಕಚೇರಿ ಕಲಬುರಗಿ ನಗರದ ಮಹಾಲಕ್ಷ್ಮಿ ಲೇಔಟ್‌ನಲ್ಲಿರುವ ರಾಜೇಶ್ವರಿ ಅವರ ನಿವಾಸ ಹಾಗೂ ಖಾದ್ರಿ ಚೌಕ್‌ನಲ್ಲಿರುವ ಮತ್ತೊಂದು ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಇದರ ಜತೆಗೆ ಜೆಸ್ಕಾಂ ಕಚೇರಿಯ ಮೇಲೂ ಅಧಿಕಾರಿಗಳು ದಾಳಿ ನಡೆಸಿದ್ದು, ದಾಖಲೆಗಳು ಹಾಗೂ ಆಸ್ತಿ ವಿವರಗಳನ್ನು ಪರಿಶೀಲಿಸುತ್ತಿದ್ದಾರೆ.

ಒಂದೇ ಸಮಯದಲ್ಲಿ ಎರಡು ಮನೆಗಳು ಹಾಗೂ ಕಚೇರಿ ಮೇಲೆ ದಾಳಿ ನಡೆಸಿರುವ ಅಧಿಕಾರಿಗಳು, ಆದಾಯದ ಮೂಲಗಳು, ಆಸ್ತಿ-ಪಾಸ್ತಿ, ಹಣಕಾಸು ವ್ಯವಹಾರಗಳು ಸೇರಿದಂತೆ ವಿವಿಧ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ ಎಂದು ತಿಳಿದು ಬಂದಿದೆ.

**ಕಲಬುರಗಿಯಲ್ಲೂ ದಾಳಿ**

ಜೆಸ್ಕಾಂ ಎಇಇ ರಾಜೇಶ್ವರಿ ಅವರ ಎರಡು ಮನೆ ಹಾಗೂ ಕಛೇರಿ ಮೇಲೆ ಇಂದು ಬೆಳಿಗ್ಗೆ ಏಕಕಾಲದಲ್ಲಿ ಲೋಕಾಯುಕ್ತ ದಾಳಿ ನಡೆದಿದೆ.

ಕಲಬುರಗಿ ನಗರದ ಮಹಾಲಕ್ಷ್ಮಿ ಲೇಔಟ್‌ನಲ್ಲಿರುವ ಮನೆ, ಖಾದ್ರಿ ಚೌಕ್‌ನಲ್ಲಿಯ ಇನ್ನೊಂದು ಮನೆ ಹಾಗೂ ಕಲಬುರಗಿಯ ಅವರ ಜೆಸ್ಕಾಂ

ಕಛೇರಿಯ ಮೇಲೂ ಲೋಕಾ ಅಧಿಕಾರಿಗಳು ದಾಳಿ ನಡೆಸಿದ್ದಾರೆ

ಆದಾಯಕ್ಕಿಂತ ಹೆಚ್ಚು ಆಸ್ತಿಗಳಿಕೆ ಆರೋಪದ ಮೇಲೆ ಲೋಕಾಯುಕ್ತ ಅಧಿಕಾರಿಗಳ ದಾಳಿ ನಡೆದಿದೆ.

ಬೆಳಿಗ್ಗೆ ವಾಕಿಂಗ್ ಹೋಗಿದ್ದ ಅಧಿಕಾರಿ ಮನೆಗೆ ಬರುವುದರೊಳಗೆ ಲೋಕಾಯುಕ್ತರು ದಾಳಿ ನಡೆಸಿ ಶಾಕ್ ನೀಡಿದ್ದಾರೆ.

# ಕೆಪಿಎಸ್‌ಸಿ ರದ್ಧತಿಗೆ ಸಿಎಂ ಇಂಗಿತ

100 ದಿನಗಳಲ್ಲಿ ಪೂರ್ಣಗೊಳಿಸಿ ವರದಿ ಸಲ್ಲಿಸುವಂತೆ ನ್ಯಾಯಾಲಯ ಗಡುವು ನೀಡಿದೆ.

ಇತ್ತೀಚಿನ ಆರೋಪಗಳು ಕೆಪಿಎಸ್‌ಸಿ ಅಧ್ಯಕ್ಷರು ಹಾಗೂ ಪರೀಕ್ಷಾ ನಿಯಂತ್ರಕರ ಕಚೇರಿಯ ಕಾರ್ಯವೈಖರಿಯ ಬಗ್ಗೆಯೂ ಪ್ರಶ್ನೆಗಳನ್ನು ಹುಟ್ಟುಹಾಕಿವೆ. ಕೆಪಿಎಸ್‌ಸಿ ನೇಮಕಾತಿ ವ್ಯವಸ್ಥೆಯಲ್ಲಿನ ಪಾರದರ್ಶಕತೆ ಮತ್ತು ಹೊಣೆಗಾರಿಕೆಯ ಕುರಿತು ಚರ್ಚೆ ತೀವ್ರಗೊಂಡಿದೆ.

**ಕಠಿಣ ಕಾನೂನಿಗೆ ಸಿದ್ಧತೆ**

ಪರೀಕ್ಷಾ ಅಕ್ರಮ, ಪ್ರಶ್ನೆಪತ್ರಿಕೆ ಸೋರಿಕೆ, ಅಕ್ರಮವಾಗಿ ಅಭ್ಯರ್ಥಿಗಳಿಗೆ ನೆರವು ನೀಡುವುದು ಸೇರಿದಂತೆ ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಅಕ್ರಮ ನಡೆದರೆ ಕಠಿಣ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಕಾನೂನು ರೂಪಿಸುವ ಬಗ್ಗೆಯೂ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಶಿವಕುಮಾರ್ ಹೇಳಿದ್ದಾರೆ.

ಅರ್ಹ ಅಭ್ಯರ್ಥಿಗಳ ಹಿತ ಕಾಪಾಡುವುದು, ನೇಮಕಾತಿ ಪ್ರಕ್ರಿಯೆಯಲ್ಲಿ ವಿಶ್ವಾಸ ಪುನಃಸ್ಥಾಪಿಸುವುದು ಮತ್ತು ಅಕ್ರಮಗಳಿಗೆ ಕಡಿವಾಣ ಹಾಕುವುದು ಸರ್ಕಾರದ ಮುಂದಿರುವ ಪ್ರಮುಖ ಸವಾಲಾಗಿದೆ. ಕೆಪಿಎಸ್‌ಸಿಯನ್ನು ರದ್ದುಗೊಳಿಸುವುದೇ ಅಥವಾ ಅದರ ರಚನೆ ಹಾಗೂ ಕಾರ್ಯವೈಖರಿಯಲ್ಲಿ ಸಮಗ್ರ ಬದಲಾವಣೆ ತರುವುದೇ ಎಂಬುದರ ಬಗ್ಗೆ ಸರ್ಕಾರದ ಮುಂದಿನ ನಿರ್ಧಾರ ಕುತೂಹಲ ಮೂಡಿಸಿದೆ.

# ಕಸ್ತೂರಿರಂಗನ್ ವರದಿ

ವರದಿಯನ್ನು ಒಪ್ಪದಿರುವ ನಿರ್ಣಯವನ್ನು ಮಂಡಿಸಿ, ಅದಕ್ಕೆ ಒಪ್ಪಿಗೆ ಪಡೆಯಲಿದೆ.

ಇಂದು ಬೆಳಗ್ಗೆಯೇ ವಿಧಾನಸಭೆಯಲ್ಲಿ ಈ ನಿರ್ಣಯವನ್ನು ಮಂಡಿಸಿ ಒಪ್ಪಿಗೆ ಪಡೆಯಲು ಸರ್ಕಾರ ಮುಂದಾಗಿತ್ತು. ಆದರೆ ಈ ವರದಿ ಬಗ್ಗೆ ಹಲವು ಸದಸ್ಯರು ಮಾತನಾಡಲು ಬಯಸಿದ್ದರಿಂದ ಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಅವರು ಸದಸ್ಯರಿಗೆ ಮಾತನಾಡಲು ಅವಕಾಶ ಮಾಡಿಕೊಟ್ಟರು. ಭೋಜನ ವಿರಾಮದವರೆಗೂ ಹಲವು ಸದಸ್ಯರು ಕಸ್ತೂರಿ ರಂಗನ್ ವರದಿಯ ಸಾಧಕ ಬಾಧಕಗಳ ಬಗ್ಗೆ ಬೆಳಕು ಚೆಲ್ಲಿದರು. ನಂತರ ಸದನವನ್ನು ಭೋಜನ ವಿರಾಮಕ್ಕೆ ಮುಂದೂಡಲಾಯಿತು.

ಭೋಜನ ವಿರಾಮದ ನಂತರ ಸದನ ಮತ್ತೆ ಸಮಾವೇಶಗೊಂಡಾಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕಸ್ತೂರಿ ರಂಗನ್ ವರದಿನಯ್ನು ಒಪ್ಪದ ರಾಜ್ಯದ ನಿಲುವಿನ ನಿರ್ಣಯವನ್ನು ಮಂಡಿಸಲಿದ್ದು, ಅದಕ್ಕೆ ಸದನ ಸರ್ವಾನುಮತದ ಒಪ್ಪಿಗೆ ನೀಡಲಿದೆ.

ಸಂಜೆವಾಣಿ ಶಾಪರ್ ಗೈಡ್
SANJEVANI SHOPPER GUIDE
For Details Contact
Mo: 9449871825
Ph: 22868882 22866213

ಬೇಕಾಗಿದ್ದಾರೆ
ಮೈಸೂರಿನಲ್ಲಿ ಟ್ಯಾಂಕ್ ಸಂಪ್ ಕ್ಲೀನಿಂಗ್ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ. ಊಟ ವಸತಿ ವ್ಯವಸ್ಥೆ ಇದೆ.
M : 9743409275

ಅತಿ ಕಡಿಮೆ ದರದಲ್ಲಿ ಜಾಹೀರಾತು ನೀಡಿ
ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ:
ಮ್ಯಾನೇಜರ್
ಜಾಹೀರಾತು ವಿಭಾಗ
ಸಂಜೆವಾಣಿ
ಫೋನ್:
22868882, 22866213

# ಹೈಡ್ರೋಪೋನಿಕ್ ಗಾಂಜಾ ಜಪ್ತಿ

ಬ್ಯಾಂಕಾಕ್‌ನಿಂದ ಆಗಮಿಸಿದ್ದ ಪ್ರಯಾಣಿಕರು ಸೇರಿದಂತೆ ಪ್ರತ್ಯೇಕ ನಾಲ್ಕು ಪ್ರಕರಣಗಳಲ್ಲಿ ಐವರು ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಗಳ ವಿರುದ್ಧ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಲಾಗಿದೆ.

**1.75 ಕೋಟಿ ಮೌಲ್ಯದ ಚಿನ್ನ ವಶ:**

ಮತ್ತೊಂದು ಕಾರ್ಯಾಚರಣೆಯಲ್ಲಿ ಅಬುಧಾಬಿ ಹಾಗೂ ಕೌಲಾಲಂಪುರದಿಂದ ಕೆಐಎಗೆ ಆಗಮಿಸಿದ್ದ ಪ್ರಯಾಣಿಕರಿಂದ 1.2 ಕೆಜಿ ಅಕ್ರಮ ಚಿನ್ನಾಭರಣವನ್ನು ಕಸ್ಟಮ್ಸ್ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಇದರ ಮೌಲ್ಯ ಸುಮಾರು 1.75 ಕೋಟಿ ಎಂದು ಅಂದಾಜಿಸಲಾಗಿದೆ.

ದಾಖಲೆಗಳಿಲ್ಲದೆ ಚಿನ್ನ ಸಾಗಿಸುತ್ತಿದ್ದ ಪ್ರಯಾಣಿಕರನ್ನು ಬಂಧಿಸಲಾಗಿದ್ದು, ಕಸ್ಟಮ್ಸ್ ಅಧಿಕಾರಿಗಳು ತನಿಖೆ ಮುಂದುವರಿಸಿದ್ದಾರೆ.

# ಕೆಪಿಎಸ್‌ಸಿ ಅಕ್ರಮ

ಕನ್ನಾಳೆ ನಡುವೆ ವಾಟ್ಸಾಪ್ ಮೂಲಕ ಸಂವಹನ ನಡೆದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಪರೀಕ್ಷೆಗೂ ಮುನ್ನ ಗ್ಯಾಂಗ್ ಅಭ್ಯರ್ಥಿಗಳಿಗೆ ಸುಮಾರು 60ರಿಂದ 80 ಪ್ರಶ್ನೆಗಳನ್ನು ನೀಡಿತ್ತು ಎನ್ನಲಾಗಿದೆ. ಐವರು ಅಭ್ಯರ್ಥಿಗಳಿಗೆ ಪ್ರಶ್ನೆಗಳಿಗೆ ಉತ್ತರಿಸುವ ಅಭ್ಯಾಸವನ್ನೂ ಮಾಡಿಸಲಾಗಿತ್ತು ಎಂದು ಸಿಐಡಿ ವರದಿ ಹೇಳಿದೆ.

ಕನ್ನಾಳೆ ಮಧ್ಯವರ್ತಿ ಪವನ್ ಮೂಲಕ ಅಭ್ಯರ್ಥಿಗಳನ್ನು ಸಂಪರ್ಕಿಸಿದ್ದ ಎನ್ನಲಾಗಿದೆ. ಸಿದ್ದಾರ್ಥ್, ರಾಜ್ ಮೊಹಮದ್, ಬಸವರಾಜ್, ಮಹೇಂದ್ರ ಹಾಗೂ ನಿರಂಜನ್ ಅವರೊಂದಿಗೆ ಸಂಪರ್ಕ ಹೊಂದಿದ್ದರೆ, ವಿನೋದ್, ಕಿರಣ್ ಗೌಡ ಹಾಗೂ ಚೈತ್ರಾ ನೇರವಾಗಿ ಸಂಪರ್ಕದಲ್ಲಿದ್ದರು ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ಒಟ್ಟು 40 ಅಭ್ಯರ್ಥಿಗಳನ್ನು ವಿಚಾರಣೆ ನಡೆಸಿದೆ.

**ವಜ್ರದ ಹಾರ ಜಪ್ತಿ:**

ಅಕ್ರಮ ನೇಮಕಾತಿ ಪ್ರಕರಣದ ತನಿಖೆ ವೇಳೆ ಸುಮಾರು 22 ಲಕ್ಷ ಮೌಲ್ಯದ ವಜ್ರದ ಹಾರವನ್ನೂ ಸಿಐಡಿ ಜಪ್ತಿ ಮಾಡಿದೆ. ಗ್ಯಾನೇಂದ್ರ ತನ್ನ ಸ್ನೇಹಿತೆಗಾಗಿ ಚಿನ್ನಾಭರಣ ಖರೀದಿಸಿದ್ದ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಇನ್ನು ಮಧ್ಯವರ್ತಿ ಬಸವರಾಜ್‌ನಿಂದ 5.76 ಲಕ್ಷ ಹಣವನ್ನು ಸಿಐಡಿ ಜಪ್ತಿ ಮಾಡಿದೆ. ಕನ್ನಾಳೆ ಹಾಗೂ ಅವರ ಪತ್ನಿಯ ಬ್ಯಾಂಕ್ ಖಾತೆಗಳಲ್ಲಿದ್ದ 71.18 ಲಕ್ಷ ಹಣವನ್ನು ಫ್ರೀಜ್ ಮಾಡಲಾಗಿದೆ.

**ಎಸ್‌ಐಟಿ ತನಿಖೆ ಆರಂಭ**

ಕೆಪಿಎಸ್‌ಸಿ ನೇಮಕಾತಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಜಿಪಿ ಅಲೋಕ್ ಕುಮಾರ್ ನೇತೃತ್ವದಲ್ಲಿ ಎಸ್‌ಐಟಿ ತನಿಖೆ ಆರಂಭವಾಗಿದೆ. ಇಂದು ಅಥವಾ ನಾಳೆ ತನಿಖಾ ತಂಡದ ಸಭೆ ನಡೆಯುವ ಸಾಧ್ಯತೆ ಇದ್ದು, ನೇಮಕಾತಿ ಅಕ್ರಮಕ್ಕೆ ಸಂಬಂಧಿಸಿದ ಕಡತಗಳು, ಸಿಐಡಿ ತನಿಖಾ ದಾಖಲೆಗಳು ಹಾಗೂ ಸಾಕ್ಷ್ಯಗಳನ್ನು ಎಸ್‌ಐಟಿ ಪರಿಶೀಲಿಸಲಿದೆ.

ಈ ಹಿಂದೆ ಸಿಐಡಿ ವಿಚಾರಣೆ ಎದುರಿಸಿರುವ ಅಭ್ಯರ್ಥಿಗಳು ಸೇರಿದಂತೆ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲರಿಗೂ ಎಸ್‌ಐಟಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡುವ ಸಾಧ್ಯತೆ ಇದೆ. ಅಭ್ಯರ್ಥಿಗಳು, ಮಧ್ಯವರ್ತಿಗಳು, ಕೆಪಿಎಸ್‌ಸಿ ಸಿಬ್ಬಂದಿ ಹಾಗೂ ಕೆಪಿಎಸ್‌ಸಿ ಸದಸ್ಯರನ್ನೂ ಎಸ್‌ಐಟಿ ವಿಚಾರಣೆ ನಡೆಸುವ ಸಾಧ್ಯತೆಯಿದೆ.

**ಎಸ್‌ಐಟಿಗೆ ಠಾಣಾ ಮಾನ್ಯತೆ:**

ಕೆಪಿಎಸ್‌ಸಿ ನೇಮಕಾತಿ ಅಕ್ರಮದ ಕುರಿತು ಹೈಕೋರ್ಟ್ ಎಸ್‌ಐಟಿ ರಚಿಸಲು ಆದೇಶಿಸಿದ್ದು, ಎಸ್‌ಐಟಿಗೆ ಪೊಲೀಸ್ ಠಾಣೆಯ ಮಾನ್ಯತೆ ನೀಡುವ ಬಗ್ಗೆಯೂ ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಈ ಹಿನ್ನೆಲೆಯಲ್ಲಿ ಎಸ್‌ಐಟಿಗೆ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಲು ಅವಕಾಶ ದೊರೆತಿದೆ.

ಎಸ್‌ಐಟಿಗೆ ಪೊಲೀಸ್ ಠಾಣೆಯ ಮಾನ್ಯತೆ ಇಲ್ಲ ಎಂಬ ವಿಚಾರ ಈ ಹಿಂದೆ ನ್ಯಾಯಾಲಯದಲ್ಲಿ ಚರ್ಚೆಯಾಗಿತ್ತು. ಇದೀಗ ಹೈಕೋರ್ಟ್‌ನ ಆದೇಶದ ಹಿನ್ನೆಲೆಯಲ್ಲಿ ಎಸ್‌ಐಟಿ ಹೊಸದಾಗಿ ತನಿಖಾ ಪ್ರಕ್ರಿಯೆ ಆರಂಭಿಸಲಿದೆ. ತನಿಖೆ ವೇಳೆ ಆರೋಪಿಗಳ ವಿಚಾರಣೆ ಅಗತ್ಯವೆಂದು ಕಂಡುಬಂದರೆ, ಅವರನ್ನು ಮತ್ತೆ ಕಸ್ಟಡಿಗೆ ಪಡೆದು ವಿಚಾರಣೆ ನಡೆಸುವ ಸಾಧ್ಯತೆಯೂ ಇದೆ.

# ಭಾರತಕ್ಕೆ ಭರ್ಜರಿ ಜಯ

216 ರನ್ ಗಳಿಸಿತು. ಇದು ಏಷ್ಯನ್ ಗೇಮ್ಸ್ ಮಹಿಳಾ ಕ್ರಿಕೆಟ್‌ನಲ್ಲಿ ದಾಖಲಾದ ಅತ್ಯಧಿಕ ಮೊತ್ತವಾಗಿದೆ.

ಈ ಪಂದ್ಯದಲ್ಲಿ ಸ್ಮೃತಿ ಮಂದಾನಾ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ 11,000 ರನ್ ಪೂರೈಸಿದ ಮೊದಲ ಮಹಿಳಾ ಕ್ರಿಕೆಟಿಗ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಇತ್ತೀಚೆಗೆ ಅವರು ಮಿಥಾಲಿ ರಾಜ್ ಅವರ 10,868 ರನ್‌ಗಳ ದಾಖಲೆಯನ್ನು ಹಿಂದಿಕ್ಕಿ ಮೂರು ಮಾದರಿಗಳಲ್ಲಿ ಅತಿ ಹೆಚ್ಚು ಅಂತರರಾಷ್ಟ್ರೀಯ ರನ್ ಗಳಿಸಿದ ಮಹಿಳಾ ಆಟಗಾರ್ತಿಯಾಗಿದ್ದರು.

**ಶ್ರೀಲಂಕಾ ಧೂಳಿಪಟ**

ಭಾರತದ ಬೃಹತ್ ಮೊತ್ತದ ಬೆನ್ನುಹತ್ತಿದ ಶ್ರೀಲಂಕಾ, ಟೀಂ ಇಂಡಿಯಾ ಬೌಲಿಂಗ್ ದಾಳಿ ಧೂಳಿಪಟವಾಯಿತು. 15.4 ಓವರ್‌ಗಳಲ್ಲಿ 69 ರನ್‌ಗಳಿಗೆ ಸರ್ವಪತನ ಕಂಡು ಹೀನಾಯ ಸೋಲಿಗೆ ಶರಣಾಯಿತು.

ಶ್ರೀಲಂಕಾ ಪರ ನಾಯಕಿ ಚಾಮರಿ ಅಥಾಪತು 29 ರನ್ ಗಳಿಸಿದ್ದನ್ನು ಹೊರತುಪಡಿಸಿ, ಉಳಿದ ಬ್ಯಾಟರ್‌ಗಳು ಬೇಗನೆ ವಿಕೆಟ್ ಒಪ್ಪಿಸಿ ಪೆವಿಲಿಯನ್‌ಗೆ ಮರಳಿದರು. ಭಾರತದ ಪರ ದೀಪ್ತಿ ಶರ್ಮ 3, ಶಫಾಲಿ ವರ್ಮ, ಶ್ರೇಯಾಂಕ ಪಾಟೀಲ್, ಶ್ರೀ ಚಾರಣಿ ತಲಾ ಎರಡು ವಿಕೆಟ್ ಪಡೆದರು.

**ಚಿನ್ನದ ಪದಕ ಉಳಿಸಿಕೊಂಡ ಭಾರತ**

ಬ್ಯಾಟಿಂಗ್‌ನಲ್ಲಿ ಮಂದಾನಾ, ಶಫಾಲಿ ಹಾಗೂ ರಿಚಾ ಘೋಷ್‌ರ ಸ್ಫೋಟಕ ಆಟ ಮತ್ತು ಬೌಲಿಂಗ್‌ನಲ್ಲಿ ಸ್ಪಿನ್ನರ್‌ಗಳ ಪ್ರಭಾವಿ ಪ್ರದರ್ಶನದಿಂದ ಭಾರತ ಏಕಪಕ್ಷೀಯ ಗೆಲುವು ದಾಖಲಿಸಿತು. ಈ ಗೆಲುವಿನೊಂದಿಗೆ ಭಾರತ ಏಷ್ಯನ್ ಗೇಮ್ಸ್‌ನಲ್ಲಿ ಮಹಿಳಾ ಕ್ರಿಕೆಟ್‌ನ ಚಿನ್ನದ ಪದಕವನ್ನು ಉಳಿಸಿಕೊಂಡಿದೆ.

## ನಾಗರಹೊಳೆ ಪ್ರವಾಸಿಗರಿಗೆ ಹುಲಿರಾಯನ ದರ್ಶನ

ಮೈಸೂರು.ಸೆ.22-ನಾಗರಹೊಳೆ ಸಫಾರಿಗೆ ತೆರಳಿದ್ದ ಪ್ರವಾಸಿಗರಿಗೆ ಬೆಳ್ಳಂಬೆಳಗ್ಗೆ ಹುಲಿಯ ದರ್ಶನವಾಗಿದ್ದು, ಅಪರೂಪದ ದೃಶ್ಯ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಎಚ್.ಡಿ. ಕೋಟೆ ತಾಲ್ಲೂಕಿನ ದಮ್ಮನಕಟ್ಟೆ ಸಫಾರಿ ಮಾರ್ಗದಲ್ಲಿ ಹುಲಿಯೊಂದು ರಸ್ತೆ ಬದಿಯ ಗುಂಡಿಯಲ್ಲಿ ಸಂಗ್ರಹವಾಗಿದ್ದ ನೀರಿನಲ್ಲಿ ಹಾಯಾಗಿ ಮಲಗಿರುವುದು ಪ್ರವಾಸಿಗರ ಕಣ್ಣಿಗೆ ಬಿದ್ದಿದೆ.

# 200 ತಾಲೂಕು ಬರಪೀಡಿತ

ಗಳೆಂದು ಘೋಷಣೆ ಮಾಡಲಾಗುವುದು ಅಲ್ಲಿಗೆ 200 ತಾಲ್ಲೂಕು ಗಳು ಬರ ಪೀಡಿತ ಪ್ರದೇಶಗಳೆಂದು ಘೋಷಣೆಯಾಗಲಿದೆ ಎಂದು ತಿಳಿಸಿದರು

**ರಾಜಕೀಯ ಒತ್ತಡವಿಲ್ಲ:**

ಬರಪೀಡಿತ ತಾಲೂಕುಗಳ ಘೋಷಣೆಯನ್ನು ರಾಜಕೀಯ ಒತ್ತಡ ಅಥವಾ ಯಾವುದೇ ವ್ಯಕ್ತಿಯ ರಾಜೀನಾಮೆ ಬೆದರಿಕೆಯನ್ನು ಆಧರಿಸಿ ಮಾಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಕೇಂದ್ರ ಸರ್ಕಾರದ 2020ರ ಬರ ನಿರ್ವಹಣಾ ಕೈಪಿಡಿಯಲ್ಲಿ ನಿಗದಿಪಡಿಸಿರುವ ಮಾನದಂಡಗಳು, ಮಳೆ ಕೊರತೆ, ಒಣಹವೆಯ ಅವಧಿ, ಬಿತ್ತನೆ ಪ್ರಮಾಣ, ಬೆಳೆ ಪರಿಸ್ಥಿತಿ, ಮಣ್ಣಿನ ತೇವಾಂಶ, ಅಂತರ್ಜಲ ಹಾಗೂ ಜಲಾಶಯಗಳ ನೀರಿನ ಲಭ್ಯತೆ ಸೇರಿದಂತೆ ವೈಜ್ಞಾನಿಕ ಅಂಶಗಳ ಆಧಾರದ ಮೇಲೆಯೇ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗುತ್ತಿದೆ ಎಂದು ಹೇಳಿದರು.

**101 ತಾಲ್ಲೂಕು ಬರಪೀಡಿತ:**

ಆಗಸ್ಟ್‌ನಲ್ಲಿ ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ಅವುಗಳಲ್ಲಿ 89 ತಾಲೂಕುಗಳು ತೀವ್ರ ಬರಪೀಡಿತ ಹಾಗೂ 12 ತಾಲೂಕುಗಳು ಮಧ್ಯಮ ಬರಪೀಡಿತ ಎಂದು ವರ್ಗೀಕರಿಸಲಾಗಿತ್ತು. ಬಳಿಕ ಸೆಪ್ಟೆಂಬರ್‌ನಲ್ಲಿ ಮತ್ತೊಂದು 23 ತಾಲ್ಲೂಕುಗಳನ್ನು ಸೇರಿಸಲಾಗಿದ್ದು, ಒಟ್ಟು ಸಂಖ್ಯೆ 124ಕ್ಕೆ ಏರಿದೆ. ಈ 23 ತಾಲ್ಲೂಕುಗಳ ಪೈಕಿ 21 ತೀವ್ರ ಹಾಗೂ ಎರಡು ಮಧ್ಯಮ ಬರಪೀಡಿತ ತಾಲ್ಲೂಕುಗಳಾಗಿವೆ.

ಇದೀಗ ಮೂರನೇ ಹಂತದ ಪರಿಶೀಲನೆ ಬಳಿಕ ಮತ್ತಷ್ಟು ತಾಲ್ಲೂಕುಗಳನ್ನು ಪಟ್ಟಿಗೆ ಸೇರಿಸುವುದಾಗಿ ಸರ್ಕಾರ ತಿಳಿಸಿದೆ. ಸೆಪ್ಟೆಂಬರ್ 20ರ ವೇಳೆಗೆ ಪರಮೇಶ್ವರ್ ಅವರು ರಾಜ್ಯದಲ್ಲಿ 200ಕ್ಕೂ ಹೆಚ್ಚು ತಾಲ್ಲೂಕುಗಳು ಅಂತಿಮವಾಗಿ ಬರಪೀಡಿತ ಪಟ್ಟಿಗೆ ಸೇರುವ ಸಾಧ್ಯತೆ ಇದೆ ಎಂದು ಹೇಳಿದ್ದರು. ಹೀಗಾಗಿ ಇಂದಿನ ಘೋಷಣೆ ಅಂತಿಮ ಪಟ್ಟಿಯಾಗದೆ, ಬರದ ಪರಿಸ್ಥಿತಿಯ ಆಧಾರದ ಮೇಲೆ ಮುಂದಿನ ಹಂತಗಳಲ್ಲೂ ಪರಿಶೀಲನೆ ಮುಂದುವರಿಯುವ ಸಾಧ್ಯತೆಯಿದೆ ಎಂದು ಹೇಳಿದರು.

**18 ಸಾವಿರ ಕೋಟಿ ವರದಿ:**

ಮೊದಲ ಹಂತದಲ್ಲಿ ಬರಪೀಡಿತ ಎಂದು ಗುರುತಿಸಲಾದ 101 ತಾಲ್ಲೂಕುಗಳಲ್ಲಿ ಬೆಳೆ ಹಾಗೂ ಸಂಬಂಧಿತ ಆರ್ಥಿಕ ನಷ್ಟವನ್ನು ಸುಮಾರು 18 ಸಾವಿರ ಕೋಟಿ ಎಂದು ಅಂದಾಜಿಸಲಾಗಿದೆ. ಈ ಆಧಾರದ ಮೇಲೆ ಕೇಂದ್ರದಿಂದ ಸುಮಾರು 3,500 ಕೋಟಿ ಪರಿಹಾರ ಕೋರಿ ರಾಜ್ಯ ಸರ್ಕಾರ ಮನವಿ ಸಲ್ಲಿಸಿದೆ. ಮುಂದಿನ ಹಂತಗಳಲ್ಲಿ ಸೇರ್ಪಡೆಯಾಗುವ ತಾಲೂಕುಗಳ ನಷ್ಟದ ವಿವರಗಳನ್ನು ಒಳಗೊಂಡಂತೆ ಹೆಚ್ಚುವರಿ ಮನವಿಗಳನ್ನು ಸಲ್ಲಿಸುವುದಾಗಿ ಸರ್ಕಾರ ಈಗಾಗಲೇ ತಿಳಿಸಿದೆ ಎಂದು ಹೇಳಿದರು.

ಹಿಂದಿನ ಬರದ ಸಂದರ್ಭದಲ್ಲೂ ಕರ್ನಾಟಕವು ದೊಡ್ಡ ಪ್ರಮಾಣದ ಪರಿಹಾರಕ್ಕೆ ಮನವಿ ಸಲ್ಲಿಸಿತ್ತು. ಆದರೆ ನಿರೀಕ್ಷಿತ ಪ್ರಮಾಣದ ನೆರವು ದೊರೆಯಲಿಲ್ಲ ಎಂದು ಪರಮೇಶ್ವರ್ ತಿಳಿಸಿದರು.

**ಬೆದರಿಕೆಗೆ ಬಗ್ಗಲ್ಲ:**

ಹಿಂದಿನ ಬಾರಿ ಹಿಂದಿನ ಬಾರಿ ರಾಜ್ಯವು ಸುಮಾರು 39 ಸಾವಿರ ಕೋಟಿ ನಷ್ಟವಾಗಿದೆ ಎಂದು ಅಂದಾಜಿಸಿ 18 ಸಾವಿರ ಕೋಟಿ ರೂ. ಪರಿಹಾರ ಕೇಳಿದ್ದರೂ, ಸುಮಾರು 3,400, 3,500 ಕೋಟಿ ರೂ. ಮಾತ್ರ ದೊರೆತಿತ್ತು ಎಂದು ಸರ್ಕಾರದ ಹೇಳಿಕೆಗಳನ್ನು ವರದಿಗಳು ದಾಖಲಿಸಿವೆ. ರಾಜೀನಾಮೆ ಬೆದರಿಕೆಗೆ ತಾಲೂಕು ಘೋಷಣೆ ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಗದಗ ಸೇರಿಸಲಾಯಿತೇ ಎಂಬ ಪ್ರಶ್ನೆಯನ್ನು ಬಿಜೆಪಿ ಸದಸ್ಯ ಸಿ.ಟಿ. ರವಿ ಎತ್ತಿದರು. ಹೊಸಪಟ್ಟಿಯಲ್ಲಿ ಗದಗವೂ ಸೇರುವುದಾಗಿ ಪರಮೇಶ್ವರ್ ಉತ್ತರಿಸಿದರು.

ಇದೇ ವೇಳೆ, ಕೆಲವರು ತಮ್ಮ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸದಿದ್ದರೆ ರಾಜೀನಾಮೆ ನೀಡುವುದಾಗಿ ಹೇಳುತ್ತಿರುವ ಹಿನ್ನೆಲೆಯಲ್ಲಿ, ರಾಜೀನಾಮೆ ಒತ್ತಡಕ್ಕೆ ಮಣಿದು ಬರ ಘೋಷಣೆ ಮಾಡಲು ಸಾಧ್ಯವಿಲ್ಲ ಎಂದು ಪರಮೇಶ್ವರ್ ಸ್ಪಷ್ಟಪಡಿಸಿದರು.




# ಗೆಲುವಿನ ಸವಿಯನ್ನು ಅರಿಯಲು ಸೋಲಿನ ಅನುಭವವೂ ಅಗತ್ಯ

ಬೆಂಗಳೂರು, ಸೆ. 22- "ಗೆಲುವಿನ ಸವಿಯನ್ನು ಅರಿಯಲು ಸೋಲಿನ ಅನುಭವವೂ ಅಗತ್ಯ. ನೀವು ಇನ್ನು 10 ವರ್ಷಗಳ ನಂತರ ಏನಾಗಬೇಕೆಂದು ಬಯಸುತ್ತೀರೋ, ಅದನ್ನು ಇಂದೇ ಕಲ್ಪಿಸಿಕೊಳ್ಳಿ. ಆ ಗುರಿಯತ್ತ ನಿರಂತರವಾಗಿ ಸಾಗುತ್ತಿರಿ," ಎಂದು ಮಾಜಿ ವಿಧಾನಸಭಾ ಸದಸ್ಯೆ ಹಾಗೂ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಸೌಮ್ಯ ರೆಡ್ಡಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸುರಾನ ಕಾಲೇಜಿನ ಸೌತ್ ಎಂಡ್ ಕ್ಯಾಂಪಸ್‌ನಲ್ಲಿ ನಡೆದ 'ಮಲ್ಟಿವರ್ಸ್ ಎಕ್ಸ್‌ಪೋ 2026' ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿ ಜೀವನದಲ್ಲೇ ಗುರಿ, ಪರಿಶ್ರಮ ಮತ್ತು ಸೋಲನ್ನು ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಅಂತರರಾಷ್ಟ್ರೀಯ ಚಿತ್ರಕಲಾವಿದ ಹಾಗೂ ಸಾಹಿತಿ ಡಾ. ಎಂ.ಎಸ್. ಮೂರ್ತಿ, "ವಿದ್ಯಾರ್ಥಿಗಳ ಸರ್ವತೋಮುಖ ವ್ಯಕ್ತಿತ್ವ ಬೆಳವಣಿಗೆಗೆ ಇಂತಹ ಅನುಭವಾಧಾರಿತ ಕಾರ್ಯಕ್ರಮಗಳು ಅತ್ಯಂತ ಅಗತ್ಯ," ಎಂದು ಹೇಳಿದರು.

'ಮಲ್ಟಿವರ್ಸ್ ಎಕ್ಸ್‌ಪೋ 2026' ಅನ್ನು ವಿದ್ಯಾರ್ಥಿಗಳ ಸೃಜನಶೀಲತೆ, ನಾಯಕತ್ವ, ತಂಡದ ಕೆಲಸ ಮತ್ತು ಪ್ರತಿಭೆಯನ್ನು ಅನಾವರಣಗೊಳಿಸುವ ಅಂತರ ಕಾಲೇಜು ವೇದಿಕೆಯಾಗಿಸಿ ರೂಪಿಸಲಾಗಿತ್ತು. ಬಿಎ, ಬಿಎಸ್‌ಸಿ, ಬಿಕಾಂ, ಬಿಬಿಎ, ಬಿಸಿಎ, ಎಂಎ, ಎಂಎಸ್‌ಸಿ ಹಾಗೂ ಎಂಕಾಂ ವಿಭಾಗಗಳು ವಿವಿಧ ಸ್ಪರ್ಧೆಗಳು, ಆಟಗಳು, ಮನರಂಜನಾ ಕಾರ್ಯಕ್ರಮಗಳು, ವಸ್ತು ಪ್ರದರ್ಶನಗಳು ಮತ್ತು ಕರಕುಶಲ ಪ್ರದರ್ಶನಗಳನ್ನು ಆಯೋಜಿಸಿದ್ದವು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲೆ ಡಾ. ವೀಣಾ ಕೆ.ಎನ್., ಪಿಯುಸಿ ಪ್ರಾಂಶುಪಾಲ ಪ್ರೊ. ಚಂದ್ರಶೇಖರಪ್ಪ, ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೆರೆಗಳ ಅಭಿವೃದ್ಧಿ: ಸಿಇಒಗಳಿಗೆ ಖಂಡ್ರೆ ಸೂಚನೆ

ಬೆಂಗಳೂರು, ಸೆ. 22- ರಾಜ್ಯದ 7 ಜಿಲ್ಲೆಗಳ 500 ಕೆರೆಗಳ ಪುನಶ್ಚೇತನಕ್ಕೆ ವಿಶ್ವಬ್ಯಾಂಕ್ ನೆರವಿನ ಯೋಜನೆಯಡಿ 150 ಕೋಟಿ ರೂ. ಸಮಗ್ರ ಯೋಜನಾ ವರದಿ ಸಿದ್ಧವಾಗಿದ್ದು, ಸಮರೋಪಾದಿಯಲ್ಲಿ ಕೆರೆ ಅಭಿವೃದ್ಧಿ ಮಾಡುವಂತೆ ಸಂಬಂಧಿತ ಸಿಇಒಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಎಲ್ಲ ಜಿಲ್ಲೆಗಳ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ವಿಡಿಯೋ ಕಾನ್ಫರೆನ್ಸ್ ನಡೆಸಿದ ಅವರು, ವಿಶ್ವಬ್ಯಾಂಕ್ ನೆರವಿನ ಜೊತೆಗೆ ವಿಬಿಜಿ ರಾಮ್ ಜಿ ಸಹಯೋಗದಲ್ಲಿ ಈ ಕೆರೆಗಳ ಹೂಳು ತೆಗೆಯುವುದು, ಏರಿ ದುರಸ್ತಿ, ಏರಿ ಎತ್ತರಿಸುವುದು, ಸೌಂದರ್ಯೀಕರಣ, ನಾಲೆಗಳ ದುರಸ್ತಿ ಮಾಡುವಂತೆ ನಿರ್ದೇಶನ ನೀಡಿದರು.

ಈಗ ಮಳೆ ಇಲ್ಲದ ಕಾರಣ ಕೆರೆಗಳು ಬತ್ತಿ ಹೋಗಿದ್ದು, ಕೆರೆ, ಕಾಲುವೆ ಪುನಶ್ಚೇತನಕ್ಕೆ ಸೂಕ್ತ ಸಮಯವಾಗಿದೆ. ಹಿಂಗಾರು ಮಳೆಯಾದರೆ ಈ ಕೆರೆಗಳಿಗೆ ನೀರು ಬರುತ್ತದೆ. ಮುಂದಿನ ಬೇಸಿಗೆಯಲ್ಲಿ ಎದುರಾಗಬಹುದಾದ ನೀರಿನ ಸಮಸ್ಯೆಗೆ ಪರಿಹಾರ ದೊರಕುತ್ತದೆ. ಭೂಮಿಯ ತೇವಾಂಶ ಮತ್ತು ಅಂತರ್ಜಲ ಮಟ್ಟವೂ ಹೆಚ್ಚುತ್ತದೆ. ಹೀಗಾಗಿ ತತ್‌ಕ್ಷಣವೇ ಕಾರ್ಯಪ್ರವೃತ್ತರಾಗಬೇಕು ಎಂದು ತಿಳಿಸಿದರು.

ವಿಶ್ವಬ್ಯಾಂಕ್ ಯೋಜನೆಯಡಿ ಬೆಂಗಳೂರು ಗ್ರಾಮಾಂತರ -68, ಬೆಂಗಳೂರು ನಗರ -67, ಬೀದರ್-44, ಚಿಕ್ಕಬಳ್ಳಾಪುರ -90, ಕಲ್ಬುರ್ಗಿ-49, ತುಮಕೂರು -96 ಮತ್ತು ಕೋಲಾರ ಜಿಲ್ಲೆಯ-86 ಕೆರೆಗಳ ಪುನಶ್ಚೇತನಕ್ಕೆ ಯೋಜನೆ ರೂಪಿಸಲಾಗಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.

**ಕಲುಷಿತ ನೀರು ಪೂರೈಸಿದರೆ ಕ್ರಮ :**

ಎಲ್ಲ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರು ಪೂರೈಕೆ ಆಗುತ್ತಿರುವುದನ್ನು ಸಿಇಒಗಳು ಮತ್ತು ಪಿಡಿಒಗಳು ಖಚಿತಪಡಿಸಿಕೊಳ್ಳಬೇಕು. ನಿಯಮಿತವಾಗಿ ನೀರಿನ ಪರೀಕ್ಷೆ ಮಾಡಬೇಕು. ಕಲುಷಿತ ನೀರಿನ ದೂರು ಬಂದರೆ ಕೂಡಲೇ ಜಲ ಮೂಲದಿಂದ ಹಿಡಿದು ಮನೆಯ ನಲ್ಲಿಯವರೆಗೆ ಪ್ರತಿಯೊಂದು ಹಂತದಲ್ಲೂ ಪರಿಶೀಲನೆ ನಡೆಸಿ, ತ್ಯಾಜ್ಯ ನೀರು ಸೇರದಂತೆ ಕ್ರಮವಹಿಸಬೇಕು ಎಂದು ಸೂಚಿಸಿದರು.

**ವಿಬಿಜಿ ರಾಮ್ ಜಿ ಕಾಮಗಾರಿಗೆ ವೇಗ ನೀಡಿ:**

ಬೆಂಗಳೂರು, ಬೆಳಗಾವಿ, ಉತ್ತರ ಕನ್ನಡ, ಧಾರವಾಡ, ಕೊಡಗು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ವಿಬಿಜಿ ರಾಮ್ ಜಿ ಅಡಿ ಮಾನವ ದಿನ ಸೃಜನೆ ಕಡಿಮೆ ಪ್ರಮಾಣದಲ್ಲಿದೆ. ಪ್ರಸ್ತುತ ರಾಜ್ಯ ವಸತಿ ಯೋಜನೆಗಳನ್ನೂ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ವ್ಯಾಪ್ತಿಗೆ ಸೇರಿಸಿರುವ ಹಿನ್ನೆಲೆಯಲ್ಲಿ ಎಲ್ಲ ನಗರ ಪಟ್ಟಣದಲ್ಲೂ ಉದ್ಯೋಗ ನೀಡಲು ಅವಕಾಶವಿದೆ. ಇದನ್ನು ಬಳಸಿಕೊಂಡು ರಾಜ್ಯದ ಯಾವುದೇ ಭಾಗದಿಂದ ಯಾರೊಬ್ಬರೂ ಗುಳೆ ಹೋಗದಂತೆ ತಡೆಯಬೇಕು ಎಂದು ಈಶ್ವರ ಖಂಡ್ರೆ ಹೇಳಿದರು.

**15 ದಿನದೊಳಗೆ ಕೂಲಿ ಹಣ ಪಾವತಿ ಮಾಡಿ :**

ವಿಬಿಜಿ ರಾಮ್ ಜಿ ಅಡಿ ಕೆಲಸ ಮಾಡಿದ ಕಾರ್ಮಿಕರಿಗೆ ತಿಂಗಳಾದರೂ ಕೂಲಿ ಹಣ ಪಾವತಿಸದಿದ್ದರೆ ಅವರು ಕೆಲಸಕ್ಕೆ ಬರುವುದಿಲ್ಲ, ಆಗ ಯೋಜನೆಯ ಉದ್ದೇಶವೇ ವಿಫಲವಾಗುತ್ತದೆ. 15 ದಿನಗಳ ಒಳಗಾಗಿ ಕೂಲಿ ಪಾವತಿಗೆ ಕ್ರಮ ಕೈಗೊಳ್ಳಬೇಕು. ಸಿಇಒಗಳು ಪಿಡಿಒಗಳಿಗೆ ಮತ್ತು ಖಜಾನೆ ಅಧಿಕಾರಿಗಳಿಗೆ ಈ ಬಗ್ಗೆ ಸ್ಪಷ್ಟ ನಿರ್ದೇಶನ ನೀಡಬೇಕು ಎಂದು ತಿಳಿಸಿದರು.

ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ ಸೇರಿದಂತೆ ಹಿರಿಯ ಅಧಿಕಾರಿಗಳು, ಸಿಇಒಗಳು ಸಭೆಯಲ್ಲಿ ಭಾಗಿಯಾಗಿದ್ದರು.

Sanjevani - Printed and Published by B.T.Amuthan on behalf of M/s Karnataka News Publications (P) Ltd. Printed at Dinasudar Printing Division, 11/2, Queen's Road, Bangalore, Karnataka - 560052.
Published at M/s Karnataka News Publications (P) Ltd. 11/2, Queen's Road, Bangalore, Karnataka - 560052. Editor: B.T. Amuthan. RNI No.36667/82

# ಅಧಿಕಾರಿಗಳ ನಿರ್ಲಕ್ಷ್ಯ: ಶಿಥಿಲ ಕಟ್ಟಡಗಳ ನೆರಳಲ್ಲಿ ಸರ್ಕಾರಿ ಶಾಲೆ ಮಕ್ಕಳು

ಬೆಂಗಳೂರು, ಸೆ.22–ಒಂದೂವರೆ ಶತಮಾನದ ಇತಿಹಾಸ ಹೊಂದಿರುವ ಸರ್ಕಾರಿ ಶಾಲೆಯೊಂದು ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಅವ್ಯವಸ್ಥೆಯ ತಾಣವಾಗಿ ಮಾರ್ಪಟ್ಟಿದ್ದು, ಶಿಥಿಲ ಕಟ್ಟಡಗಳ ನೆರಳಲ್ಲೇ ಮಕ್ಕಳು ವಿದ್ಯಾಭ್ಯಾಸ ಮಾಡುವಂತಾಗಿದೆ.

ಲಾಲ್‌ಬಾಗ್ ವ್ಯಾಪ್ತಿಯ ದೊಡ್ಡಮಾವಳ್ಳಿಯ ನಮ್ಮೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಳೆಯ ಕಟ್ಟಡಗಳು ಇದೀಗ ಪಾಳುಬಿದ್ದ ಕೊಂಪೆಯಂತಾಗಿವೆ. ಸುಮಾರು 47 ವರ್ಷಗಳ ಹಿಂದೆ ನಿರ್ಮಿಸಲಾಗಿರುವ ಎರಡು ಕಟ್ಟಡಗಳು ಸಂಪೂರ್ಣ ಶಿಥಿಲಾವಸ್ಥೆಗೆ ತಲುಪಿದ್ದು, ಯಾವ ಕ್ಷಣದಲ್ಲಿ ಬೇಕಾದರೂ ಕುಸಿಯುವ ಆತಂಕ ಎದುರಾಗಿದೆ.

ಶಾಲಾ ಆವರಣದಲ್ಲಿರುವ ಈ ಕಟ್ಟಡಗಳ ಸುತ್ತಲೂ ಗಿಡಗಂಟಿಗಳು ಬೆಳೆದು ನಿಂತಿದ್ದು, ಸ್ವಚ್ಛತೆಯ ಕೊರತೆಯಿಂದ ಗಬ್ಬು ವಾಸನೆ ಬೀರುತ್ತಿದೆ. ಕಟ್ಟಡಗಳ ಗೋಡೆಗಳು ಹಾಗೂ ಮೇಲ್ಛಾವಣಿಯ ಸ್ಥಿತಿಯೂ ಆತಂಕ ಮೂಡಿಸುವಂತಿದೆ. ಇದೇ ಆವರಣದಲ್ಲಿರುವ ಮತ್ತೊಂದು ಕಟ್ಟಡದಲ್ಲಿ 80ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.

**ಮಕ್ಕಳ ಓಡಾಟಕ್ಕೂ ಅಪಾಯ:**

ಶಿಥಿಲ ಕಟ್ಟಡಗಳ ಪಕ್ಕದಲ್ಲೇ ವಿದ್ಯಾರ್ಥಿಗಳು ಪ್ರತಿನಿತ್ಯ ಓಡಾಡುತ್ತಿದ್ದು, ತರಗತಿಗಳಿಗೆ ತೆರಳುವ ಸಂದರ್ಭದಲ್ಲಿ ಮಕ್ಕಳು ಅಪಾಯದ ನಡುವೆಯೇ ಸಂಚರಿಸಬೇಕಾಗಿದೆ. ಕಟ್ಟಡದ ಯಾವುದೇ ಭಾಗ ಕುಸಿದರೆ ಅನಾಹುತ ಸಂಭವಿಸುವ ಸಾಧ್ಯತೆ ಇರುವುದರಿಂದ ಪೋಷಕರು ಆತಂಕ ವ್ಯಕ್ತಪಡಿಸಿದ್ದಾರೆ.

ಮಕ್ಕಳ ಸುರಕ್ಷತೆ ಮತ್ತು ಆರೋಗ್ಯದ ದೃಷ್ಟಿಯಿಂದ ಕೂಡಲೇ ಶಿಥಿಲ ಕಟ್ಟಡಗಳನ್ನು ತೆರವುಗೊಳಿಸಿ, ಶಾಲಾ ಆವರಣವನ್ನು ಸ್ವಚ್ಛಗೊಳಿಸಬೇಕು ಎಂದು ಪೋಷಕರು ಆಗ್ರಹಿಸಿದ್ದಾರೆ.

**ನಾಲ್ಕು ತಿಂಗಳ ಹಿಂದೆಯೇ ತೆರವಿಗೆ ಆದೇಶ:**

ಶಿಥಿಲಗೊಂಡಿರುವ ಕಟ್ಟಡಗಳನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳು ನಾಲ್ಕು ತಿಂಗಳ ಹಿಂದೆಯೇ ಆದೇಶ ನೀಡಿದ್ದರೂ, ಇದುವರೆಗೂ ಕಟ್ಟಡ ತೆರವು ಕಾರ್ಯಕ್ಕೆ ಮುಂದಾಗಿಲ್ಲ ಎಂಬ ಆರೋಪ ಕೇಳಿಬಂದಿದೆ. ಆದೇಶ ಜಾರಿಯಾಗಿದ್ದರೂ ಕಾಮಗಾರಿ ಆರಂಭವಾಗದಿರುವುದು ಅಧಿಕಾರಿಗಳ ಕಾರ್ಯವೈಖರಿ ಬಗ್ಗೆ ಪ್ರಶ್ನೆ ಮೂಡಿಸಿದೆ.

ಮಕ್ಕಳ ಜೀವಕ್ಕೆ ಅಪಾಯ ಎದುರಾದ ಬಳಿಕ ಕ್ರಮ ಕೈಗೊಳ್ಳುವುದಕ್ಕಿಂತ ಮುನ್ನವೇ ಮುನ್ನೆಚ್ಚರಿಕೆ ವಹಿಸಬೇಕಾಗಿತ್ತು. ಆದರೆ ಅಧಿಕಾರಿಗಳ ವಿಳಂಬದಿಂದಾಗಿ ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕದಲ್ಲೇ ದಿನ ಕಳೆಯುವಂತಾಗಿದೆ.

**ದಾನ ನೀಡಿದ ಜಾಗದಲ್ಲೇ ದುಸ್ಥಿತಿ**

ಈ ಶಾಲೆ ಪಟೇಲ್ ಕೆಂಪಯ್ಯ ಅವರು ದಾನವಾಗಿ ನೀಡಿದ ಜಾಗದಲ್ಲಿ ನಿರ್ಮಾಣಗೊಂಡಿದ್ದು, ಶಾಲೆಯ ಇಂದಿನ ದುಸ್ಥಿತಿ ಕಂಡು ಅವರ ಸಂಬಂಧಿಕರು ಕೂಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಾರ್ವಜನಿಕ ಶಿಕ್ಷಣಕ್ಕೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ದಾನವಾಗಿ ನೀಡಿದ ಜಾಗದಲ್ಲಿರುವ ಶಾಲೆ ಇಂತಹ ದುಸ್ಥಿತಿಗೆ ತಲುಪಿರುವುದು ಬೇಸರದ ಸಂಗತಿ. ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ, ಶಿಥಿಲ ಕಟ್ಟಡಗಳನ್ನು ತೆರವುಗೊಳಿಸಿ ಮಕ್ಕಳಿಗೆ ಸುರಕ್ಷಿತ ವಾತಾವರಣ ಕಲ್ಪಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಅಧಿಕಾರಿಗಳ ಚೆಲ್ಲಾಟ ಮತ್ತು ನಿರ್ಲಕ್ಷ್ಯಕ್ಕೆ ಶಾಲಾ ಮಕ್ಕಳು ಸಂಕಷ್ಟ ಅನುಭವಿಸುವಂತಾಗಬಾರದು. ಯಾವುದೇ ಅನಾಹುತ ಸಂಭವಿಸುವ ಮುನ್ನವೇ ಸಂಬಂಧಪಟ್ಟ ಇಲಾಖೆಗಳು ಎಚ್ಚೆತ್ತುಕೊಂಡು ಕಟ್ಟಡ ತೆರವು ಹಾಗೂ ಶಾಲಾ ಆವರಣದ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕಿದೆ.

# ಕರಾವಳಿ, ಒಳನಾಡಲ್ಲಿ ಮಳೆ ನಿರೀಕ್ಷೆ

ಬೆಂಗಳೂರು, ಸೆ.22–ರಾಜ್ಯದ ವಿವಿಧ ಭಾಗಗಳಲ್ಲಿ ಮುಂಗಾರು ಚುರುಕುಗೊಂಡಿದ್ದು, ಇಂದು (ಸೆಪ್ಟೆಂಬರ್ 22) ಕರಾವಳಿ, ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರು ಕೇಂದ್ರ ಮುನ್ಸೂಚನೆ ನೀಡಿದೆ.

ಮಳೆಯ ಸಮಯದಲ್ಲಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯಿದ್ದು, ಮುನ್ನೆಚ್ಚರಿಕೆಯಾಗಿ ದಕ್ಷಿಣ ಕನ್ನಡ ಜಿಲ್ಲೆಗೆ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ. ಇಲ್ಲಿನ ಒಂದೆರಡು ಕಡೆಗಳಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗಲಿದೆ. ಇನ್ನು ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಬಹುತೇಕ ಭಾಗಗಳಲ್ಲಿ ಹಗುರದಿಂದ ಸಾಧಾರಣ ಪ್ರಮಾಣದ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡಿನ ಬಾಗಲಕೋಟೆ, ಗದಗ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳಲ್ಲಿಯೂ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ನಿರೀಕ್ಷೆಯಿದೆ. ಇದರೊಂದಿಗೆ ಬೆಳಗಾವಿ, ಬೀದರ್, ಧಾರವಾಡ, ಹಾವೇರಿ, ಕಲಬುರಗಿ, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳ ಹಲವು ಪ್ರದೇಶಗಳಲ್ಲಿ ಸಾಧಾರಣ ಮಳೆಯಾಗಲಿದೆ.

ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಕೋಲಾರ, ಮಂಡ್ಯ, ಮೈಸೂರು, ರಾಮನಗರ ಹಾಗೂ ತುಮಕೂರು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.



# ಬೈಕ್ ಅಪಘಾತ ದಂಪತಿ ಸ್ಥಳದಲ್ಲೇ ಸಾವು

ಧಾರವಾಡ,ಸೆ.22–ಹುಬ್ಬಳ್ಳಿ-ಗದಗ ಬೈಪಾಸ್ ರಸ್ತೆಯಲ್ಲಿ ಕೊರಿಯರ್ ವಾಹನಕ್ಕೆ ಡಿಕ್ಕಿ ಹೊಡೆದ ಬೈಕ್ ನಲ್ಲಿದ್ದ ದಂಪತಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಸಂಭವಿಸಿದೆ.

ಜಯರಾಜನಗರದ ರಜನಿ ತಿಕಲಾ ಹಾಗೂ ಸುಕುಮಾರ ತಿಕಲಾ ಮೃತಪಟ್ಟ ದಂಪತಿ.

ರಜನಿ ತಿಕಲಾ ಹುಬ್ಬಳ್ಳಿಯ ಖಾಸಗಿ ಆಸ್ಪತ್ರೆಯಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದರು.

ನಿನ್ನೆ ರಾತ್ರಿ ವೇಳೆ ಕೆಲಸ ಮುಗಿಸಿಕೊಂಡು ರಜನಿಯನ್ನು ಪತಿ ಸುಕುಮಾರ ಬೈಕ್‌ನಲ್ಲಿ ಮನೆಗೆ ಕರೆದೊಯ್ಯುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ.

ಎದುರಿನಿಂದ ಬಂದ ಕೊರಿಯರ್ ಗೂಡ್ಸ್ ವಾಹನ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ದಂಪತಿ ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಪಘಾತದ ಮಾಹಿತಿ ತಿಳಿದ ಕೂಡಲೇ ಸ್ಥಳಕ್ಕೆ ಪೂರ್ವ ಸಂಚಾರಿ ಠಾಣೆ ಪೊಲೀಸರ ಭೇಟಿ ನೀಡಿ, ಘಟನಾ ಸ್ಥಳದಲ್ಲಿ ಪರಿಶೀಲನೆ ನಡೆಸಿದ್ದಾರೆ.

ಅಪಘಾತದ ನಿಖರ ಕಾರಣದ ಕುರಿತು ತನಿಖೆ ನಡೆದಿದ್ದು, ಕೊರಿಯರ್ ವಾಹನ ಹಾಗೂ ಚಾಲಕನ ಕುರಿತು ಪೊಲೀಸರು ಮಾಹಿತಿ ಕಲೆಹಾಕುತ್ತಿದ್ದಾರೆ. ಘಟನೆ ಕುರಿತು ಪೂರ್ವ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕ್ರಷರ್ ಮಾಲೀಕರ ಒಗ್ಗಟ್ಟಿನ ಹೋರಾಟ: ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕ್ವಾರಿಕ್ರಷರ್ ಬಂದ್, ಗಣಿ ಇಲಾಖೆಗೆ ಖಡಕ್ ಎಚ್ಚರಿಕೆ

ಬೆಂಗಳೂರು, ಸೆ.21: ಕಲ್ಲು ಗಣಿಗಾರಿಕೆಗೆ ಸಂಬಂಧಿಸಿದಂತೆ ಎರಡು ಕಡೆ ರಾಜಧನ ವಸೂಲಿ ಮಾಡುವ ಕ್ರಮ ಹಾಗೂ ಕ್ರಷರ್ ಮಾಲೀಕರಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನೀಡಿರುವ ನೋಟಿಸ್‌ಗಳನ್ನು ವಿರೋಧಿಸಿ ಕರ್ನಾಟಕ ರಾಜ್ಯ ಕಲ್ಲು ಗಣಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಒಕ್ಕೂಟದ ನೇತೃತ್ವದಲ್ಲಿ ಸೆಪ್ಟೆಂಬರ್ 18ರಿಂದ ರಾಜ್ಯಾದ್ಯಂತ ಕಲ್ಲು ಕ್ವಾರಿ, ಜಲ್ಲಿ ಕ್ರಷರ್ ಮತ್ತು ಎಂ.ಸ್ಯಾಂಡ್ ಘಟಕಗಳ ಬಂದ್ ಮುಂದುವರಿದಿದೆ.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿರುವ ಕ್ರಷರ್‌ಗಳು ಬಂದ್‌ಗೆ ಬೆಂಬಲ ಸೂಚಿಸಿದ್ದು, ಕಲ್ಲು ಕ್ವಾರಿ, ಜಲ್ಲಿ ಕ್ರಷರ್ ಹಾಗೂ ಎಂ.ಸ್ಯಾಂಡ್ ಘಟಕಗಳ ಕಾರ್ಯಾಚರಣೆ ಸ್ಥಗಿತಗೊಂಡಿದೆ. ಒಕ್ಕೂಟದ ಪ್ರಮುಖ ಬೇಡಿಕೆಗಳನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಸರ್ಕಾರ ಕೂಡಲೇ ಪರಿಗಣಿಸಿ ಸ್ಪಷ್ಟವಾದ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಡಿ. ಸಿದ್ಧರಾಜು, "ಎರಡು ಕಡೆ ರಾಜಧನ ವಸೂಲಿ ಮಾಡುವ ಕ್ರಮವನ್ನು ಕೂಡಲೇ ಕೈಬಿಡಬೇಕು. ಈಗಾಗಲೇ ರಾಜಧನ ಪಾವತಿಯಾಗಿದ್ದರೂ ಮತ್ತೊಮ್ಮೆ ಗಣಿಗುತ್ತಿಗೆದಾರರಿಂದ ರಾಜಧನ ವಸೂಲಿ ಮಾಡುತ್ತಿರುವುದು ಉದ್ಯಮದ ಮೇಲೆ ಅನಗತ್ಯ ಆರ್ಥಿಕ ಹೊರೆ ಉಂಟುಮಾಡುತ್ತಿದೆ. ಇದರ ಜೊತೆಗೆ ಕ್ರಷರ್ ಮಾಲೀಕರಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನೀಡುತ್ತಿರುವ ನೋಟಿಸ್‌ಗಳನ್ನು ಕೂಡಲೇ ಹಿಂಪಡೆಯಬೇಕು," ಎಂದು ಒತ್ತಾಯಿಸಿದರು.

"ಸೆಪ್ಟೆಂಬರ್ 18ರಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕಲ್ಲು ಕ್ವಾರಿ, ಜಲ್ಲಿ ಕ್ರಷರ್ ಹಾಗೂ ಎಂ.ಸ್ಯಾಂಡ್ ಘಟಕಗಳನ್ನು ಬಂದ್ ಮಾಡಲಾಗಿದೆ. ನಮ್ಮ ಬೇಡಿಕೆಗಳು ಈಡೇರುವವರೆಗೆ ಈ ಹೋರಾಟ ಮುಂದುವರಿಯಲಿದೆ. ರಾಜಧನ ಸಂಗ್ರಹದ ಕುರಿತು ಸರ್ಕಾರ ಸ್ಪಷ್ಟ ಆದೇಶ ಹೊರಡಿಸಿ, ಅದನ್ನು ರಾಜ್ಯಪತ್ರದಲ್ಲಿ ಪ್ರಕಟಿಸುವವರೆಗೆ ಬಂದ್ ಹಿಂಪಡೆಯುವ ಪ್ರಶ್ನೆಯೇ ಇಲ್ಲ," ಎಂದು ಅವರು ಸ್ಪಷ್ಟಪಡಿಸಿದರು.

ನಿರ್ಮಾಣ ಕಾಮಗಾರಿಗಳಿಗೆ ಅಗತ್ಯವಾಗಿರುವ ಜಲ್ಲಿ ಮತ್ತು ಎಂ.ಸ್ಯಾಂಡ್ ಪೂರೈಕೆ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ನಿರ್ಮಾಣ ಕ್ಷೇತ್ರದ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ರಾಜ್ಯದ ಎಲ್ಲಾ ಜಿಲ್ಲಾ ಘಟಕಗಳು ಬಂದ್‌ಗೆ ಸಂಪೂರ್ಣ ಬೆಂಬಲ ನೀಡಿವೆ. ಕರ್ನಾಟಕ ಪಟ್ಟಾ ಲ್ಯಾಂಡ್ ಕ್ವಾರಿ ಅಂಡ್ ಜಲ್ಲಿ ಸ್ಟೋನ್ ಕ್ರಷರ್ ಓನರ್ಸ್ ಅಸೋಸಿಯೇಷನ್ ಕೂಡ ಹೋರಾಟಕ್ಕೆ ಬೆಂಬಲ ಸೂಚಿಸಿದೆ ಎಂದು ಒಕ್ಕೂಟ ತಿಳಿಸಿದೆ.

"ನಮ್ಮ ಪ್ರಮುಖ ಬೇಡಿಕೆಗಳನ್ನು ಈಡೇರಿಸದೆ ಹೋರಾಟವನ್ನು ನಿರ್ಲಕ್ಷಿಸಿದರೆ, ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ಅಗತ್ಯವಿದ್ದಲ್ಲಿ ಸರ್ಕಾರದ ವಿರುದ್ಧ ಕಾನೂನು ಹೋರಾಟವನ್ನೂ ನಡೆಸಲಾಗುವುದು. ಬೇಡಿಕೆ ಈಡೇರುವವರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಬಂದ್ ಮತ್ತು ಹೋರಾಟ ಮುಂದುವರಿಯಲಿದೆ," ಎಂದು ಡಿ. ಸಿದ್ಧರಾಜು ಎಚ್ಚರಿಸಿದರು.

ಒಕ್ಕೂಟದ ಉಪಾಧ್ಯಕ್ಷರಾದ ವಾಗೀಶ್, ಅಬ್ದುಲ್ ಮಜಿದ್, ಮನೋಜ್ ಶೆಟ್ಟರ್, ಪಂಚಮಿ ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ಸಿ.ಎಸ್. ಭಾಸ್ಕರ್, ಉಪ ಕಾರ್ಯದರ್ಶಿ ಡಿ.ಆರ್. ಮಹೇಶ್, ಸಂಘಟನಾ ಕಾರ್ಯದರ್ಶಿ ಕೆ.ವಿ. ಚೌಧರಿ, ಕೋಶಾಧಿಕಾರಿ ಉಮಾಶಂಕರಯ್ಯ, ವಿ.ಎಸ್. ಪಾಟೀಲ್ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.




# ನಿಂತಿದ್ದ ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿ; ಯೋಧ ಸಾವು



ಬೆಂಗಳೂರು,ಸೆ.22–ನಿಂತಿದ್ದ ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿ ಹೊಡೆದು ರಜೆಯ ಮೇಲೆ ಊರಿಗೆ ಬಂದಿದ್ದ ಐಟಿಬಿಪಿ ಯೋಧ ಮೃತಪಟ್ಟ ಘಟನೆ ಕನಕಪುರ ಬೈಪಾಸ್ ರಸ್ತೆಯ ಗಡಸಳ್ಳಿ ಬಳಿ ತಡರಾತ್ರಿ ನಡೆದಿದೆ.

ಕನಕಪುರ ತಾಲೂಕಿನ ಶಿವನಹಳ್ಳಿ ನಿವಾಸಿ ಚನ್ನವೀರೇಗೌಡ(45) ಮೃತಪಟ್ಟ ಯೋಧ. ಇಂಡೋ–ಟಿಬೆಟಿಯನ್ ಬಾರ್ಡರ್ ಪೊಲೀಸ್ ಪಡೆಯ ಯೋಧರಾಗಿದ್ದ ಚನ್ನವೀರೇಗೌಡ, ಮೊನ್ನೆಯಷ್ಟೇ ರಜೆಯ ಮೇಲೆ ಸ್ವಗ್ರಾಮಕ್ಕೆ ಬಂದಿದ್ದರು.

ಅಪಘಾತದ ತೀವ್ರತೆಗೆ ತಡರಾತ್ರಿ ಯೋಧ ತಮ್ಮ ಮಗನೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ, ಗಡಸಳ್ಳಿ ಬಳಿ ರಸ್ತೆ ಬದಿ ನಿಂತಿದ್ದ ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿಯಾಗಿದೆ. ಚನ್ನವೀರೇಗೌಡಗೆ ಗಂಭೀರ ಗಾಯಗಳಾಗಿದ್ದು, ಕೂಡಲೇ ಕನಕಪುರ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದೆ. ಆದರೆ ಆಸ್ಪತ್ರೆಯಲ್ಲಿ ಯೋಧನಿಗೆ ಸೂಕ್ತ ಚಿಕಿತ್ಸೆ ಸಿಗದೇ ಮೃತಪಟ್ಟಿದ್ದಾರೆ ಎಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ.

ಸಿಬ್ಬಂದಿಯ ನಿರ್ಲಕ್ಷ್ಯವೇ ಸಾವಿಗೆ ಕಾರಣವೆಂದು ಆಸ್ಪತ್ರೆ ಸಿಬ್ಬಂದಿ ವಿರುದ್ಧ ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ಥಳಕ್ಕೆ ಕನಕಪುರ ಸಂಚಾರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ವೈ-ಟಾಪಿಂಗ್ ಕಾಮಗಾರಿ: ವಾಹನ ಸವಾರರ ಪರದಾಟ

ಬೆಂಗಳೂರು.ಸೆ.22–ಬೆಂಗಳೂರಿನ ನಾಗವಾರ ಮುಖ್ಯ ರಸ್ತೆ ಟ್ಯಾನರಿ ರೋಡ್‌ನ ಕೆ.ಜಿ.ಹಳ್ಳಿಯಲ್ಲಿ ನಡೆಯುತ್ತಿರುವ ವೈ–ಟಾಪಿಂಗ್ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವುದರಿಂದ ಪ್ರತಿನಿತ್ಯ ವಾಹನ ಸವಾರರು ತೀವ್ರ ಸಂಚಾರ ದಟ್ಟಣೆ ಎದುರಿಸುವಂತಾಗಿದೆ.

ಕಾಮಗಾರಿ ನಡೆಯುತ್ತಿರುವ ಸ್ಥಳದಲ್ಲಿ ಸಮರ್ಪಕವಾಗಿ ಟ್ರಾಫಿಕ್ ಪೊಲೀಸರನ್ನು ನಿಯೋಜಿಸದಿದ್ದರೆ, ಗಂಟೆಗಟ್ಟಲೆ ವಾಹನಗಳು ಸಾಲುಗಟ್ಟಿ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗೆ ಎರಡು ಬಿಎಂಟಿಸಿ ಬಸ್‌ಗಳು ಏಕಕಾಲದಲ್ಲಿ ರಸ್ತೆ ದಾಟುವ ಸಂದರ್ಭದಲ್ಲಿ ಎರಡೂ ಬದಿಗಳಲ್ಲಿ ಸಂಚಾರಕ್ಕೆ ಅಡಚಣೆ ಉಂಟಾಗಿ, ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡ ಘಟನೆ ಕೂಡ ನಡೆದಿದೆ. ಈ ವೇಳೆ ಬಸ್ ಸಿಬ್ಬಂದಿ, ವಾಹನ ಸವಾರರು ಹಾಗೂ ಟ್ರಾಫಿಕ್ ಪೊಲೀಸರ ನಡುವೆ ಮಾತಿನ ಚಕಮಕಿ ನಡೆದಿರುವುದಾಗಿ ಸ್ಥಳೀಯರು ತಿಳಿಸಿದ್ದಾರೆ.

ವಿಶೇಷವಾಗಿ ಬಿಎಂಟಿಸಿಯ ಎಲೆಕ್ಟ್ರಿಕ್ ಬಸ್‌ಗಳ ಸಂಚಾರದ ಕುರಿತು ಸಾರ್ವಜನಿಕರಿಂದ ಹಲವು ಆರೋಪಗಳು ಕೇಳಿಬರುತ್ತಿವೆ. ಕೆಲವು ಚಾಲಕರ ಚಾಲನಾ ಕೌಶಲ್ಯದ ಬಗ್ಗೆಯೂ ಸಾರ್ವಜನಿಕರು ಪ್ರಶ್ನೆಗಳನ್ನು ಎತ್ತಿದ್ದಾರೆ. ಎಲೆಕ್ಟ್ರಿಕ್ ಬಸ್‌ಗಳ ಚಾಲಕರ ವಿರುದ್ಧ ಒಂದಲ್ಲ ಒಂದು ರೀತಿಯ ಆರೋಪಗಳು ಕೇಳಿಬರುತ್ತಿರುವುದಾಗಿ ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕಾಮಗಾರಿ ಮತ್ತು ಸಂಚಾರ ದಟ್ಟಣೆಯಿಂದಾಗಿ ಕೆಲ ಸಮಯ ಗಂಟೆಗಟ್ಟಲೆ ವಾಹನಗಳು ಸಿಲುಕಿಕೊಳ್ಳುತ್ತಿದ್ದು, ಇದರಿಂದ ಬಸ್ ಚಾಲಕರು ಹಾಗೂ ವಾಹನ ಸವಾರರ ನಡುವೆ ಆಕ್ರೋಶದ ವಾತಾವರಣ ನಿರ್ಮಾಣವಾಗುತ್ತಿದೆ.

ಕಾಮಗಾರಿ ನಡೆಯುತ್ತಿರುವ ಸಂದರ್ಭದಲ್ಲಿ ಸಂಚಾರ ನಿರ್ವಹಣೆಗೆ ಅಗತ್ಯ ಸಿಬ್ಬಂದಿಯನ್ನು ನಿಯೋಜಿಸದೆ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂಬ ಆರೋಪವೂ ಸಾರ್ವಜನಿಕರಿಂದ ಕೇಳಿಬಂದಿದೆ. ಪ್ರತಿನಿತ್ಯ ಇದೇ ರೀತಿಯ ಸಮಸ್ಯೆ ಎದುರಾಗುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ವೈ–ಟಾಪಿಂಗ್ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವುದರ ಜೊತೆಗೆ, ಕಾಮಗಾರಿ ಮುಗಿಯುವವರೆಗೆ ಸ್ಥಳದಲ್ಲಿ ಹೆಚ್ಚುವರಿ ಟ್ರಾಫಿಕ್ ಸಿಬ್ಬಂದಿಯನ್ನು ನಿಯೋಜಿಸಿ ಸಂಚಾರ ಸುಗಮಗೊಳಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಮಳೆಗೆ ಉರುಳಿದ ಬೃಹತ್ ಮರ

ಬೆಂಗಳೂರು.ಸೆ.22–ರಾಜಾಜಿನಗರದ ಮಂಜುನಾಥ ನಗರದಲ್ಲಿ ಸತತವಾಗಿ ಸುರಿದ ಮಳೆಗೆ ಬೃಹತ್ ಮರವೊಂದು ಧರೆಗೆ ಉರುಳಿದೆ. ಮೋದಿ ಆಸ್ಪತ್ರೆ ಸಮೀಪ ಘಟನೆ ನಡೆದಿದೆ.

ಮರ ಉರುಳಿ ರಸ್ತೆ ಬದಿಯಲ್ಲಿದ್ದ ಪಿಂಗಾಣಿ ಹಾಗೂ ಬಳೆ ಅಂಗಡಿಗಳ ಮೇಲೆ ಬಿದ್ದ ಪರಿಣಾಮ ಅಂಗಡಿಗಳಿಗೆ ಭಾರೀ ಹಾನಿಯಾಗಿದೆ. ಅಂಗಡಿಯಲ್ಲಿದ್ದ ವಸ್ತುಗಳು ಹಾನಿಗೊಳಗಾಗಿದ್ದು, ಮನೆಯ ಕಾಪೌಂಡ್ ಹಾಗೂ ಗ್ರಿಲ್‌ಗೂ ಹಾನಿಯಾಗಿದೆ.

ಮರ ಬಿದ್ದ ಪರಿಣಾಮ ಕೆಲಕಾಲ ರಸ್ತೆ ಸಂಚಾರಕ್ಕೆ ಅಡ್ಡಿಯಾಗಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರು ತೊಂದರೆ ಅನುಭವಿಸಿದರು.

ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಬಳಿಕ ಮರವನ್ನು ತೆರವುಗೊಳಿಸಿ ರಸ್ತೆ ಬದಿಗೆ ಸ್ಥಳಾಂತರಿಸಲಾಗಿದ್ದು, ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

ಮರ ತೆರವು ಕಾರ್ಯಾಚರಣೆ ವಿಚಾರವಾಗಿ ಸ್ಥಳೀಯರು ಜಿಬಿಎ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಕಾಲೇಜು ವಿದ್ಯಾರ್ಥಿನಿ ಆತ್ಮಹತ್ಯೆ

ಪಾವಗಡ, ಸೆ. 22– ನೇಣು ಬಿಗಿದುಕೊಂಡು ಕಾಲೇಜು ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲ್ಲೂಕಿನ ಆರ್. ಹೊಸಕೋಟೆ ಗ್ರಾಮದಲ್ಲಿ ನಡೆದಿದೆ.

ಆರ್.ಹೊಸಕೋಟೆ ಗ್ರಾಮದ ಶಿವಣ್ಣ ಮತ್ತು ಗೀತಾ ದಂಪತಿಗಳ ಪುತ್ರಿ ಲಿಖಿತ ಎಂಬಾಕೆಯೇ ಆತ್ಮಹತ್ಯೆಗೆ ಶರಣಾಗಿರುವ ದುರ್ದೈವಿ ವಿದ್ಯಾರ್ಥಿನಿ. ಪಟ್ಟಣದ ಎಸ್.ಎಸ್.ಕೆ. ಕಾಲೇಜಿನಲ್ಲಿ ಅಭ್ಯಾಸ ಮಾಡುತ್ತಿದ್ದರು ಎನ್ನಲಾಗಿದೆ.

ಮನೆಯಲ್ಲಿ ಸ್ನಾನ ಮಾಡಲು ತೆರಳಿದ ಯುವತಿ ಎಷ್ಟು ಹೊತ್ತಾದರೂ ಬಾರದೆ ಇದ್ದರಿಂದ ಅನುಮಾನಗೊಂಡ ತಾಯಿ ಬಾಗಿಲು ತೆಗೆದು ನೋಡಿದಾಗ ಈ ಕೃತ್ಯ ಬಯಲಾಗಿದೆ. ತಕ್ಷಣ ಪಾವಗಡ



ಆಸ್ಪತ್ರೆಗೆ ರವಾನಿಸಿದರಾದರೂ ಅಷ್ಟರಲ್ಲಿ ವಿದ್ಯಾರ್ಥಿನಿ ಕೊನೆಯುಸಿರೆಳೆದಿದ್ದಾರೆ ಎಂದು ವೈದ್ಯರು ಖಚಿತಪಡಿಸಿದ್ದಾರೆ.

ಈ ಸಂಬಂಧ ಪಾವಗಡ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಸಿಡಿಲು ಬಡಿದು ಮಹಿಳೆಯಿರಿಬ್ಬರ

ಕಲಬುರಗಿ,ಸೆ.22: ಸಿಡಿಲು ಬಡಿದು ಕಮಲಾಪುರ ತಾಲ್ಲೂಕಿನ ನಾಗೂರು ಗ್ರಾಮದ ಜಮೀನೊಂದರಲ್ಲಿ ಇಬ್ಬರು ಮಹಿಳೆಯರು ಸಾವಿಗೀಡಾಗಿದ್ದಾರೆ.

ಜಮೀನಿನ ಮಾಲೀಕರಾದ ಲಕ್ಷ್ಮಿ ಗುತ್ತೇದಾರ್ (45) ಮತ್ತು ರೈತ ಕಾರ್ಮಿಕರಾದ ಸೈಜಾದ್ ಬಿ (60) ಸ್ಥಳದಲ್ಲೇ ಮೃತಪಟಿದ್ದಾರೆ.

ಅವರು ಜಮೀನಿನಲ್ಲಿ ಊಟದ ವಿರಾಮದಲ್ಲಿ ಮರದ ಕೆಳಗೆ ಕುಳಿತು ಆಹಾರ ಸೇವಿಸುತ್ತಿದ್ದಾಗ ಸಿಡಿಲು ಬಡಿದಿದೆ.

ಕಮಲಾಪುರ ತಹಶೀಲ್ದಾರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕಮಲಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.




ನಗರದ ವಿಶ್ವೇಶ್ವರಯ್ಯ ಬಡಾವಣೆಯ ದೊಡ್ಡ ಬಸ್ತಿಯಲ್ಲಿರುವ ಛಲವಾದಿ ಭವನದಲ್ಲಿ ಛಲವಾದಿ ಮಹಾಸಭಾದ 2025–26ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ರಾಜ್ಯ ಅಧ್ಯಕ್ಷೆ ವಾಣಿ ಶಿವರಾಮುರವರು ಉದ್ಘಾಟಿಸಿದರು. ಛಲವಾದಿ ಗುರುಪೀಠದ ಮಹಾಸ್ವಾಮೀಜಿ ಬಸವ ನಾಗೀದೇವ ಶರಣರು, ಕೆಂಗೇರಿ ವಿಭಾಗದ ಪೊಲೀಸ್ ಉಪ ಆಯುಕ್ತೆ ಸತ್ಯವತಿ, ಉಪಾಧ್ಯಕ್ಷ ಬಸವರಾಜು, ಖಜಾಂಚಿ ಮೈಕೋ ರಾಜು, ನಿರ್ದೇಶಕರಾದ ಸಿದ್ದರಾಜ.ಸಿ., ನಾಗೇಶ್, ಬಿ. ಮಹದೇವಯ್ಯ, ಶಿವಪ್ಪ, ಮತ್ತಿತರರು ಉಪಸ್ಥಿತರಿದ್ದರು.

# ಸೆ. 24 ಸಂದೇಶ್ ಯುವ ವೇದಿಕೆ ವಾರ್ಷಿಕೋತ್ಸವ

ಬೆಂಗಳೂರು,ಸೆ. 22: ಕಲೆ, ಸಾಹಿತ್ಯ, ಧಾರ್ಮಿಕ, ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಗಣ್ಯರನ್ನು ಗೌರವಿಸುವ ಉದ್ದೇಶದಿಂದ ಸಂದೇಶ್ ಯುವ ವೇದಿಕೆಯ 34ನೇ ವಾರ್ಷಿಕೋತ್ಸವದ ಅಂಗವಾಗಿ ಅಭಿನಂದನಾ ಸಮಾರಂಭವನ್ನು ಸೆ. 24ರಂದು ಸಂಜೆ 5 ಗಂಟೆಗೆ ಬೆಂಗಳೂರಿನ ಕನ್ನಡ ಭವನದ ನಯನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸಮಾರಂಭದಲ್ಲಿ ಖ್ಯಾತ ಸಮಾಜ ಸೇವಕರು, ಸಾಹಿತಿಗಳು, ಪ್ರತಿಭಾವಂತ ಅಧಿಕಾರಿಗಳು, ಮಾಜಿ ಸೈನಿಕರು ಹಾಗೂ ಕಲಾವಿದರಿಗೆ ಸಂದೇಶ್ ಪ್ರಶಸ್ತಿ–2026 ಪ್ರದಾನ ಮಾಡಿ ಗೌರವಿಸಲಾಗುವುದು.

ಕಾರ್ಯಕ್ರಮಕ್ಕೆ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ವಿಜಯನಗರ ಶಾಖಾ ಮಠದ ಪೀಠಾಧ್ಯಕ್ಷ ಸೌಮ್ಯನಾಥ ಸ್ವಾಮೀಜಿ, ಬೇಲಿಮಠದ ಪೀಠಾಧ್ಯಕ್ಷ ಶಿವರುದ್ರ ಸ್ವಾಮೀಜಿ ಹಾಗೂ ಸಿದ್ಧರೂಢ ಮಿಷನ್ ಆಶ್ರಮದ ಅಧ್ಯಕ್ಷ ಡಾ. ಆರೂಢ ಭಾರತೀ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕ ಎಂ. ಕೃಷ್ಣಪ್ಪ ಹಾಗೂ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರಿಯಕೃಷ್ಣ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ. ಸೋಮಶೇಖರ, ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಗೌರವ ಪ್ರಧಾನ ಕಾರ್ಯದರ್ಶಿ ಡಾ. ವೂಡೇ ಪಿ. ಕೃಷ್ಣ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷೆ ಶುಭ ಧನಂಜಯ್, ಹಿನ್ನೆಲೆ ಗಾಯಕಿ ಡಾ.ಪ್ರಿಯದರ್ಶಿನಿ, ಚಲನಚಿತ್ರ ನಿರ್ಮಾಪಕ ಡಾ. ಜಿ. ವೈ. ಪದ್ಮನಾಗರಾಜು, ಮಾಜಿ ಸೈನಿಕ ಕೆ.ಎಸ್.ವಿಠಲಾಕ್ಷ , ಹಾಸ್ಯ ನಟ ಮೈಸೂರು ರಮಾನಂದ್, ಚಲನಚಿತ್ರ ಕಲಾವಿದ ಎಂ.ಎನ್. ಗುರುಸ್ವಾಮಿಗೆ ವಿವಿಧ ಪ್ರಶಸ್ತಿಗಳನ್ನು ಪ್ರಧಾನ ಮಾಡಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಸಂಸದ ಪಿ.ಸಿ. ಮೋಹನ್, ಮಾಜಿ ಸಚಿವೆ ಲೀಲಾದೇವಿ ಆರ್. ಪ್ರಸಾದ್, ಸಪ್ತಗಿರಿ ರಾಮಚಂದ್ರಗೌಡ, ಸ್ವಾಮಿಸಾ ಎಲ್. ಖೋಡೆ, ಸತ್ಯನಾರಾಯಣ ವಿ. ಡಮಾಮ್ ಹಾಗೂ ರಾಮಚಂದ್ರ ಕಬಾಡಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಲಿದ್ದಾರೆ.

ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಸಂದೇಶ್ ಯುವ ವೇದಿಕೆಯ ಅಧ್ಯಕ್ಷ ಕೆ. ಸೋಮಶೇಖರ, ಕಾರ್ಯದರ್ಶಿಗಳಾದ ಎಲ್. ವೇಣುಗೋಪಾಲ್ ಹಾಗೂ ಎಸ್. ಪ್ರೇಮ್ ಕುಮಾರ್ ಮನವಿ ಮಾಡಿದ್ದಾರೆ.



ಶ್ರೀ ವಾಯುಪುತ್ರ ಗೆಳೆಯರ ಬಳಗದ ವತಿಯಿಂದ ಗೊಲ್ಲರಹಟ್ಟಿಯ ಶ್ರೀದೇವಿನಗರ 2ನೇ ಕ್ರಾಸ್ ನಲ್ಲಿ 10ನೇ ವರ್ಷದ ಅದ್ದೂರಿ ಗಣೇಶೋತ್ಸವವನ್ನು ಆಚರಿಸಲಾಯಿತು. ಅರ್ಜುನ್, ಪುರುಷೋತ್ತಮ್, ಹರ್ಷ, ಉದಯ, ನಂದನ್, ಜೀವನ್, ಧ್ರುವ, ಆಕಾಶ್, ಚೇತು, ದರ್ಶನ್, ಪಾಂಚಾಲ ಅವರು ಗಣೇಶ ವಿಸರ್ಜನೆ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

# ಸಾಲದ ಕಿರುಕುಳ: ಕಾರ್ಯದರ್ಶಿ ಆತ್ಮಹತ್ಯೆ

ರಾಯಚೂರು,ಸೆ.22–ಮಸ್ಕಿಯ ಮೆದಿಕಿನಾಳ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯದರ್ಶಿ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಬಸವರಾಜ್ (40) ಆತ್ಮಹತ್ಯೆ ಮಾಡಿಕೊಂಡ ಕಾರ್ಯದರ್ಶಿಯಾಗಿದ್ದು, ಸಾಲದ ಹಣ ಹಾಗೂ ಬಡ್ಡಿ ಪಾವತಿಸುವಂತೆ ಕಿರುಕುಳ ನೀಡಲಾಗುತ್ತಿತ್ತು ಎಂಬ ಆರೋಪದ ಹಿನ್ನೆಲೆಯಲ್ಲಿ ಬಸವರಾಜ್ ಆತ್ಮಹತ್ಯೆಗೆ ಶರಣಾಗಿದ್ದಾರೆಂಬುದಾಗಿ ತಿಳಿದು ಬಂದಿದೆ.

ಬಸವರಾಜ್ ತಮ್ಮ ಜಮೀನಿನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆಗೂ ಮುನ್ನ ಅವರು ಡೆತ್‌ನೋಟ್ ಬರೆದಿಟ್ಟಿದ್ದು, ಅದರಲ್ಲಿ ಸಾಲದ ವ್ಯವಹಾರ ಹಾಗೂ ತಮಗೆ ನೀಡಲಾಗುತ್ತಿದ್ದ ಕಿರುಕುಳದ ಕುರಿತು ಉಲ್ಲೇಖಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಸುಮಾರು 70 ಲಕ್ಷದಷ್ಟು ಸಾಲವನ್ನು ಶೇ.6ರ ಬಡ್ಡಿಯೊಂದಿಗೆ ಮರುಪಾವತಿಸುವಂತೆ ಕೆಲವರು ನಿರಂತರವಾಗಿ ಒತ್ತಡ ಹೇರುತ್ತಿದ್ದರು ಎಂದು ಕುಟುಂಬದವರು ಆರೋಪಿಸಿದ್ದಾರೆ. ಸಾಲದ ಮೊತ್ತದ ಜತೆಗೆ ಬಡ್ಡಿ ಹಾಗೂ ಚಕ್ರಬಡ್ಡಿ ಪಾವತಿಸುವಂತೆ ಕಿರುಕುಳ ನೀಡಲಾಗುತ್ತಿತ್ತು ಎಂಬ ಆರೋಪವೂ ಕೇಳಿಬಂದಿದೆ.

ಪಿಎಸಿಎಸ್ ಬ್ಯಾಂಕ್ ಅಧ್ಯಕ್ಷ ಮಧುಲಿಂಗರಾಜ ಧಣಿ, ಸದಸ್ಯರಾದ ಯಲ್ಲಪ್ಪ ಕೋಸಗಿ, ಮುದ್ದಿನಗೌಡ, ಚನಪ್ಪಪರಡ್ಡಿ, ರಾಜಣ್ಣಗಿಡ್ಡ ಸೇರಿದಂತೆ ಕೆಲವರಿಂದ ಸಾಲ ಪಡೆದಿದ್ದರು ಎನ್ನಲಾಗಿದೆ. ಮತ್ತೊಂದೆಡೆ, ಬಸವರಾಜ್ ಕೆಲವರಿಗೆ ನೀಡಿದ್ದ ಹಣವನ್ನು ವಾಪಸ್ ಕೇಳಿದಾಗ ಹಣ ನೀಡದೆ, ಹಣ ಕೊಟ್ಟಿರುವುದಕ್ಕೆ ಸಾಕ್ಷ್ಯವಿಲ್ಲ ಎಂದು ಹೇಳಿ ಕಿರುಕುಳ ನೀಡಲಾಗುತ್ತಿತ್ತು ಎಂಬ ಆರೋಪವೂ ಇದೆ.

ಇದಲ್ಲದೆ, ಪಿಎಸಿಎಸ್ ಬ್ಯಾಂಕ್‌ನ ಮಸ್ಕಿ ಘಟಕದ ಮ್ಯಾನೇಜರ್ ನಾಗರತ್ನ ಕೆಲಸ ಕೊಡಿಸುವುದಾಗಿ ಹಣ ಪಡೆದಿದ್ದರು. ಹಣ ವಾಪಸ್ ಕೇಳಿದ ಸಂದರ್ಭದಲ್ಲಿ ಕಿರುಕುಳ ನೀಡಿದ್ದರು ಎಂಬ ಆರೋಪವೂ ಕುಟುಂಬದವರಿಂದ ಕೇಳಿಬಂದಿದೆ.

ಘಟನೆ ಕುರಿತು ಮಾಹಿತಿ ತಿಳಿದ ಮಸ್ಕಿ ಠಾಣೆ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿದುಬಂದಿದೆ.

ಆತ್ಮಹತ್ಯೆಗೆ ನಿಖರ ಕಾರಣ ಹಾಗೂ ಡೆತ್‌ನೋಟ್‌ನಲ್ಲಿರುವ ಅಂಶಗಳ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಸಾವಿನಲ್ಲಿ ಒಂದಾದ ಸಹೋದರರು

ಕೊಪ್ಪಳ.ಸೆ.22–ಜಿಲ್ಲೆಯ ಕುಷ್ಟಗಿ ತಾಲೂಕಿನ ಹನುಮಸಾಗರ ಪಟ್ಟಣದಲ್ಲಿ ಅಣ್ಣ–ತಮ್ಮ ಇಬ್ಬರು 24 ಗಂಟೆಯೊಳಗೆ ಮೃತಪಟ್ಟಿರುವ ದುಃಖದ ಘಟನೆ ನಡೆದಿದೆ.

ಹನುಮಸಾಗರದ ಡಾಲಾಯತ್ ಕುಟುಂಬದಲ್ಲಿ ಈ ಘಟನೆ ಸಂಭವಿಸಿದೆ. ಸೋಮವಾರ ಸಂಜೆ ಖಾಜೇಸಾಬ ಡಾಲಾಯತ್ (65) ಹೃದಯಾಘಾತದಿಂದ ಮೃತಪಟ್ಟಿದ್ದರು. ತಮ್ಮನ ಅಂತ್ಯಕ್ರಿಯೆ ನಡೆಯುವ ಮುನ್ನವೇ ಇಂದು ಬೆಳಗ್ಗೆ ಅಣ್ಣ ಪೀರಸಾಬ ಡಾಲಾಯತ್ (89) ಅನಾರೋಗ್ಯದಿಂದ ಮೃತಪಟ್ಟಿದ್ದಾರೆ.

ಹೀಗಾಗಿ ಕೇವಲ 24 ಗಂಟೆಯೊಳಗೆ ಅಣ್ಣ–ತಮ್ಮ ಇಬ್ಬರೂ ಸಾವನ್ನಪ್ಪಿದ್ದು, ಕುಟುಂಬಸ್ಥರು ಹಾಗೂ ಬಂಧುಗಳಲ್ಲಿ ದುಃಖ ಮಡುಗಟ್ಟಿದೆ. ಇಬ್ಬರ ಅಂತ್ಯಕ್ರಿಯೆಯನ್ನು ಏಕಕಾಲದಲ್ಲಿ ನೆರವೇರಿಸಲು ಕುಟುಂಬಸ್ಥರು ಸಿದ್ಧತೆ ನಡೆಸಿದ್ದಾರೆ.

# ಎಂಎಸ್‌ಎಂಇ ಸಮಸ್ಯೆ: ಸಚಿವ ಕಾಶಪ್ಪರಿಗೆ ಕಾಸಿಯಾ ಮನವಿ ಸಲ್ಲಿಕೆ




ಬೆಂಗಳೂರು, ಸೆ.22– ರಾಜ್ಯಾದ್ಯಂತ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳನ್ನು ಒಳಗೊಂಡ ಸಮಗ್ರ ಮನವಿ ಪತ್ರವನ್ನು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘವು (ಕಾಸಿಯಾ), ಬೆಂಗಳೂರಿನ ವಿಕಾಸಸೌಧದಲ್ಲಿ ನಡೆದ ರಾಜ್ಯಮಟ್ಟದ ಸಮಾಲೋಚನಾ ಸಭೆಯಲ್ಲಿ ರಾಜ್ಯ ಸರ್ಕಾರಕ್ಕೆ ಸಲ್ಲಿಸಿತು.

ಸಭೆಯ ಅಧ್ಯಕ್ಷತೆಯನ್ನು ರಾಜ್ಯ ಸರ್ಕಾರದ ಸಣ್ಣ ಕೈಗಾರಿಕೆಗಳು ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾದ ವಿಜಯಾನಂದ ಕಾಶಪ್ಪನವರ್ ವಹಿಸಿದ್ದರು.

ಕೈಗಾರಿಕಾ ಘಟಕಗಳಿಗೆ ಮಂಜೂರಾಗಿರುವ ಬಂಡವಾಳ ಸಹಾಯಧನ ಮತ್ತು ಪ್ರೋತ್ಸಾಹಧನ ಬಿಡುಗಡೆ ಮಾಡುವಲ್ಲಿ ಉಂಟಾಗುತ್ತಿರುವ ದೀರ್ಘ ವಿಳಂಬದ ಬಗ್ಗೆ ಕಾಸಿಯಾ ತೀವ್ರ ಕಳವಳ ವ್ಯಕ್ತಪಡಿಸಿದೆ.

ಕೆಲವು ಪ್ರಕರಣಗಳಲ್ಲಿ ಸಹಾಯಧನ ಬಿಡುಗಡೆಯು ನಾಲ್ಕರಿಂದ ಐದು ವರ್ಷಗಳವರೆಗೆ ವಿಳಂಬವಾಗುತ್ತಿದೆ. ಇದರಿಂದ ಎಂಎಸ್‌ಎಂಇಗಳು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ಉತ್ಪಾದನೆ, ಉದ್ಯೋಗ ಸೃಷ್ಟಿ, ಹೂಡಿಕೆ ಮತ್ತು ಕಾರ್ಯನಿರತ ಬಂಡವಾಳದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತಿದೆ ಎಂದು ಕಾಸಿಯಾ ಉಲ್ಲೇಖಿಸಿದೆ.

ಬೆಂಗಳೂರು, ಹುಬ್ಬಳ್ಳಿ, ಬೆಳಗಾವಿ, ಮಂಗಳೂರು, ಮೈಸೂರು, ಕಲಬುರಗಿ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳು ಮತ್ತು ಕೈಗಾರಿಕಾ ಪ್ರದೇಶಗಳ ಎಂಎಸ್‌ಎಂಇ ಸಂಘಗಳಿಂದ ಸ್ವೀಕರಿಸಲಾದ ಸ್ಥಳೀಯ ಹಾಗೂ ಕೈಗಾರಿಕಾ ಪ್ರದೇಶವಾರು ಸಮಸ್ಯೆಗಳನ್ನೂ ಕಾಸಿಯಾ ಅಧ್ಯಕ್ಷ ನಿಂಗಣ್ಣ ಬಿರಾದರ್ ಸರ್ಕಾರದ ಗಮನಕ್ಕೆ ತಂದರು.

ಸರ್ಕಾರದ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಎಂಎಸ್‌ಎಂಇ ನಿರ್ದೇಶಕರು ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ (ಕೆಎಸ್‌ಎಸ್‌ಐಡಿಸಿ) ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕಾಸಿಯಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವಿಧಾನ ಪರಿಷತ್‌ನ 4 ಕ್ಷೇತ್ರಗಳಿಗೆ ದ್ವೈವಾರ್ಷಿಕ ಚುನಾವಣೆ

# ಅ.23ರಂದು ಮತದಾನ: 27ಕ್ಕೆ ಫಲಿತಾಂಶ ಪ್ರಕಟ

ಬೆಂಗಳೂರು, ಸೆ.22: ಕರ್ನಾಟಕ ವಿಧಾನಪರಿಷತ್‌ನ ಎರಡು ಪದವೀಧರ ಹಾಗೂ ಎರಡು ಶಿಕ್ಷಕರ ಕ್ಷೇತ್ರಗಳಿಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆಗೆ ಭಾರತ ಚುನಾವಣಾ ಆಯೋಗ ಮಂಗಳವಾರ ವೇಳಾಪಟ್ಟಿ ಪ್ರಕಟಿಸಿದೆ. ಇದರೊಂದಿಗೆ ನಾಲ್ಕೂ ಕ್ಷೇತ್ರಗಳಲ್ಲಿ ಚುನಾವಣಾ ಕಾವು ಆರಂಭವಾಗಿದ್ದು, ತಕ್ಷಣದಿಂದಲೇ ಮಾದರಿ ನೀತಿಸಂಹಿತೆ ಜಾರಿಗೆ ಬಂದಿದೆ.

ಕರ್ನಾಟಕ ಆಗ್ನೇಯ ಪದವೀಧರ, ಪಶ್ಚಿಮ ಪದವೀಧರ, ಈಶಾನ್ಯ ಶಿಕ್ಷಕರ ಹಾಗೂ ಬೆಂಗಳೂರು ಶಿಕ್ಷಕರ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಈ ನಾಲ್ಕು ಕ್ಷೇತ್ರಗಳ ಹಾಲಿ ಸದಸ್ಯರಾದ ಚಿದಾನಂದ ಎಂ. ಗೌಡ, ಎಸ್.ವಿ. ಸಂಕನೂರು, ಶಶೀಲ್ ಜಿ. ನಮೋಶಿ ಹಾಗೂ ಪುಟ್ಟಣ್ಣ ಅವರ ಅಧಿಕಾರಾವಧಿ ನವೆಂಬರ್ 11ರಂದು ಪೂರ್ಣಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ನಿಗದಿತ ಅವಧಿಯಲ್ಲಿ ಚುನಾವಣೆ ನಡೆಸಲು ವೇಳಾಪಟ್ಟಿ ಪ್ರಕಟಿಸಿದೆ.

ಅ.6ಕ್ಕೆ ನಾಮಪತ್ರ ಸಲ್ಲಿಕೆಗೆ ಗಡುವು

ಚುನಾವಣಾ ಪ್ರಕ್ರಿಯೆ ಸೆಪ್ಟೆಂಬರ್ 29ರಂದು ಅಧಿಸೂಚನೆ ಹೊರಡಿಸುವುದರೊಂದಿಗೆ ಅಧಿಕೃತವಾಗಿ ಆರಂಭವಾಗಲಿದೆ. ಅಭ್ಯರ್ಥಿಗಳು ಅಕ್ಟೋಬರ್ 6ರವರೆಗೆ ನಾಮಪತ್ರ ಸಲ್ಲಿಸಬಹುದು. ಅಕ್ಟೋಬರ್ 7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಅಕ್ಟೋಬರ್ 9 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

ಅಕ್ಟೋಬರ್ 23ರಂದು ಬೆಳಿಗ್ಗೆಯಿಂದ ಮತದಾನ ನಡೆಯಲಿದ್ದು, ಅಕ್ಟೋಬರ್ 27ರಂದು ಮತ ಎಣಿಕೆ ಕೈಗೊಂಡು ಫಲಿತಾಂಶ ಪ್ರಕಟಿಸಲಾಗುತ್ತದೆ.

ನಾಲ್ಕು ಕ್ಷೇತ್ರಗಳ ವಿವರ

**ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರ:**

ಈ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷ ಶಶಿ ಹುಲಿಕುಂಟೆ ಮಠ್ ಅವರನ್ನು ಅಭ್ಯರ್ಥಿಯನ್ನಾಗಿ ಘೋಷಿಸಿದೆ. ಹಾಲಿ ಸದಸ್ಯ ಚಿದಾನಂದ ಎಂ. ಗೌಡ ಅವರ ಅಧಿಕಾರಾವಧಿ ನವೆಂಬರ್ 11ರಂದು ಅಂತ್ಯಗೊಳ್ಳಲಿದೆ.

**ಪಶ್ಚಿಮ ಪದವೀಧರ ಕ್ಷೇತ್ರ:**

ಕಾಂಗ್ರೆಸ್‌ನಿಂದ ಮೋಹನ್ ಲಿಂಬಿಕಾಯಿ ಕಣಕ್ಕಿಳಿಯಲಿದ್ದಾರೆ. ಹಾಲಿ ಸದಸ್ಯ ಎಸ್.ವಿ. ಸಂಕನೂರು ಅವರ ಅವಧಿಯೂ ಇದೇ ದಿನ ಕೊನೆಗೊಳ್ಳಲಿದೆ.

**ಈಶಾನ್ಯ ಶಿಕ್ಷಕರ ಕ್ಷೇತ್ರ:**

ಕಾಂಗ್ರೆಸ್ ಶರಣಪ್ಪ ಮತ್ತೂರು ಅವರನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದೆ. ಈ ಕ್ಷೇತ್ರವನ್ನು ಪ್ರಸ್ತುತ ಶಶೀಲ್ ಜಿ. ನಮೋಶಿ ಪ್ರತಿನಿಧಿಸುತ್ತಿದ್ದಾರೆ.

**ಬೆಂಗಳೂರು ಶಿಕ್ಷಕರ ಕ್ಷೇತ್ರ:**

ಹಾಲಿ ಸದಸ್ಯ ಪುಟ್ಟಣ್ಣ ಅವರನ್ನೇ ಕಾಂಗ್ರೆಸ್ ಮತ್ತೊಮ್ಮೆ ಅಭ್ಯರ್ಥಿಯನ್ನಾಗಿ ಘೋಷಿಸಿದೆ. ಈ ಕ್ಷೇತ್ರವನ್ನು ಬಿಜೆಪಿ?ಜೆಡಿಎಸ್ ಮೈತ್ರಿಕೂಟದ ಹಿನ್ನೆಲೆಯಲ್ಲಿ ಜೆಡಿಎಸ್‌ಗೆ ಬಿಟ್ಟುಕೊಡಲಾಗಿದೆ.




ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರಿಕೆ

ನಾಲ್ಕು ಕ್ಷೇತ್ರಗಳ ಪೈಕಿ ಬಿಜೆಪಿ ಮೂರು ಕ್ಷೇತ್ರಗಳಿಗೆ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ. ಬೆಂಗಳೂರು ಶಿಕ್ಷಕರ ಕ್ಷೇತ್ರವನ್ನು ಮೈತ್ರಿ ಪಕ್ಷವಾದ ಜೆಡಿಎಸ್‌ಗೆ ಬಿಟ್ಟುಕೊಟ್ಟಿದೆ. ಈ ಮೂಲಕ ವಿಧಾನಪರಿಷತ್ ಚುನಾವಣೆಯಲ್ಲೂ ಬಿಜೆಪಿ?ಜೆಡಿಎಸ್ ಮೈತ್ರಿ ಮುಂದುವರಿದಿದೆ.

ಕಾಂಗ್ರೆಸ್ ಈಗಾಗಲೇ ನಾಲ್ಕೂ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹಿನ್ನೆಲೆಯಲ್ಲಿ ಎರಡೂ ಮೈತ್ರಿಕೂಟಗಳು ಚುನಾವಣಾ ಸಿದ್ಧತೆಯಲ್ಲಿ ತೊಡಗಿವೆ. ಉಳಿದ ಪಕ್ಷಗಳು ಹಾಗೂ ಪಕ್ಷೇತರ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆಯ ಬಳಿಕ ನಾಲ್ಕೂ ಕ್ಷೇತ್ರಗಳ ಅಂತಿಮ ಕಣದ ಸ್ಪಷ್ಟ ಚಿತ್ರಣ ದೊರೆಯಲಿದೆ.

**ಚುನಾವಣಾ ವೇಳಾಪಟ್ಟಿ**

| ಚುನಾವಣಾ ಪ್ರಕ್ರಿಯೆ | ದಿನಾಂಕ |
| --- | --- |
| ಅಧಿಸೂಚನೆ ಪ್ರಕಟ | ಸೆ.29, 2026 |
| ನಾಮಪತ್ರ ಸಲ್ಲಿಕೆಗೆ ಕೊನೇ ದಿನ | ಅ.6, 2026 |
| ನಾಮಪತ್ರ ಪರಿಶೀಲನೆ | ಅ.7, 2026 |
| ನಾಮಪತ್ರ ಹಿಂಪಡೆಯಲು ಕೊನೇ ದಿನ | ಅ.9, 2026 |
| ಮತದಾನ | ಅ.23, 2026 |
| ಮತ ಎಣಿಕೆ/ಫಲಿತಾಂಶ | ಅ.27, 2026 |

ಚುನಾವಣಾ ವೇಳಾಪಟ್ಟಿ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ನಾಲ್ಕೂ ಕ್ಷೇತ್ರಗಳಲ್ಲಿ ಪ್ರಚಾರ, ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಹಾಗೂ ಮತದಾರರ ಸಂಪರ್ಕ ಚಟುವಟಿಕೆಗಳು ಮುಂದಿನ ದಿನಗಳಲ್ಲಿ ಚುರುಕುಗೊಳ್ಳುವ ನಿರೀಕ್ಷೆಯಿದೆ.

ನಾಲ್ಕು ಕ್ಷೇತ್ರಗಳ ಪೈಕಿ ಬಿಜೆಪಿ ಮೂರು ಕ್ಷೇತ್ರಗಳಿಗೆ ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ. ಬೆಂಗಳೂರು ಶಿಕ್ಷಕರ ಕ್ಷೇತ್ರವನ್ನು ಮೈತ್ರಿ ಪಕ್ಷವಾದ ಜೆಡಿಎಸ್‌ಗೆ ಬಿಟ್ಟುಕೊಟ್ಟಿದೆ. ಈ ಮೂಲಕ ವಿಧಾನಪರಿಷತ್ ಚುನಾವಣೆಯಲ್ಲೂ ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರಿದಿದೆ.

ಕಾಂಗ್ರೆಸ್ ಈಗಾಗಲೇ ನಾಲ್ಕೂ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹಿನ್ನೆಲೆಯಲ್ಲಿ ಎರಡೂ ಮೈತ್ರಿಕೂಟಗಳು ಚುನಾವಣಾ ಸಿದ್ಧತೆಯಲ್ಲಿ ತೊಡಗಿವೆ. ಉಳಿದ ಪಕ್ಷಗಳು ಹಾಗೂ ಪಕ್ಷೇತರ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆಯ ಬಳಿಕ ನಾಲ್ಕೂ ಕ್ಷೇತ್ರಗಳ ಅಂತಿಮ ಕಣದ ಸ್ಪಷ್ಟ ಚಿತ್ರಣ ದೊರೆಯಲಿದೆ.

# ‘ಹಾರ್ನ್ ಡೋಂಟ್ ಮಾಡಿ’ ಅಭಿಯಾನ




ಬೆಂಗಳೂರು, ಸೆ.22: ವಾಹನ ದಟ್ಟಣೆಯ ನಡುವೆ ಅನಗತ್ಯವಾಗಿ ಹಾರ್ನ್ ಮಾಡುವ ಅಭ್ಯಾಸಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಸ್ಪರ್ಶ್ ಆಸ್ಪತ್ರೆ ‘ಹಾರ್ನ್ ಡೋಂಟ್ ಮಾಡಿ’ ಎಂಬ ಬೆಂಗಳೂರು–ಕೇಂದ್ರಿತ ಜಾಗೃತಿ ಅಭಿಯಾನ ಆರಂಭಿಸಿದೆ.

ವಿಶ್ವ ಹೃದಯ ದಿನದ ಅಂಗವಾಗಿ ಆರಂಭಿಸಿರುವ ಈ ಅಭಿಯಾನವು, ಟ್ರಾಫಿಕ್‌ನಲ್ಲಿ ಹಾರ್ನ್ ಮಾಡಿದರೂ ವಾಹನಗಳು ಮುಂದೆ ಸಾಗದ ಸಂದರ್ಭದಲ್ಲಿ ಕೇವಲ ಅಭ್ಯಾಸ ಅಥವಾ ಅಸಹನೆಯಿಂದ ಹಾರ್ನ್ ಮಾಡುವುದನ್ನು ತಪ್ಪಿಸುವಂತೆ ವಾಹನ ಸವಾರರಲ್ಲಿ ಜಾಗೃತಿ ಮೂಡಿಸಲಿದೆ.

“ಪ್ರತಿಯೊಂದು ಹಾರ್ನ್ ನಿಜವಾಗಿಯೂ ಅಗತ್ಯವೇ ಎಂಬುದನ್ನು ಒಮ್ಮೆ ಯೋಚಿಸುವಂತೆ ಜನರನ್ನು ಪ್ರೇರೇಪಿಸುವುದು ಅಭಿಯಾನದ ಉದ್ದೇಶ. ಸಣ್ಣ ಬದಲಾವಣೆಗಳು ಪ್ರಶಾಂತ ಮತ್ತು ಆರೋಗ್ಯಕರ ವಾತಾವರಣ ನಿರ್ಮಿಸಲು ನೆರವಾಗುತ್ತವೆ” ಎಂದು ಸ್ಪರ್ಶ್ ಆಸ್ಪತ್ರೆ ಸಮೂಹದ ಸಂಸ್ಥಾಪಕ ಹಾಗೂ ಅಧ್ಯಕ್ಷ ಡಾ. ಶರಣ್ ಶಿವರಾಜ್ ಪಾಟೀಲ್ ಹೇಳಿದರು.

ಹೃದಯರೋಗ ತಜ್ಞ ಡಾ. ರಂಜನ್ ಶೆಟ್ಟಿ ಮಾತನಾಡಿ, ಅನಗತ್ಯ ಹಾಗೂ ಪದೇಪದೇ ಕೇಳುವ ದೊಡ್ಡ ಶಬ್ದಗಳು ದೇಹದಲ್ಲಿ ಒತ್ತಡದ ಪ್ರತಿಕ್ರಿಯೆ ಹೆಚ್ಚಿಸಬಹುದು.

ದೀರ್ಘಕಾಲದ ಒತ್ತಡವು ಹೃದಯದ ಆರೋಗ್ಯದ ಮೇಲೆ ಪರಿಣಾಮ ಬೀರುವ ಹಲವು ಅಂಶಗಳಲ್ಲಿ ಒಂದಾಗಿದೆ ಎಂದು ತಿಳಿಸಿದರು.

ಅಭಿಯಾನದಡಿ ಸಾರ್ವಜನಿಕ ಸಹಿ ಸಂಗ್ರಹ, ರೇಡಿಯೋ, ಸಾಮಾಜಿಕ ಜಾಲತಾಣ, ಸಮುದಾಯ ಕಾರ್ಯಕ್ರಮಗಳು, ಸಂಚಾರ ಸಮೀಕ್ಷೆಗಳು ಹಾಗೂ ವೈದ್ಯರ ನೇತೃತ್ವದ ಚರ್ಚೆಗಳನ್ನು ಆಯೋಜಿಸಲಾಗುತ್ತಿದೆ.

ಸುರಕ್ಷತೆಗೆ ಅಗತ್ಯವಿದ್ದಾಗ ಮಾತ್ರ ಹಾರ್ನ್ ಬಳಸಿ; ಟ್ರಾಫಿಕ್‌ನಲ್ಲಿನ ಅಭ್ಯಾಸದ ಪ್ರತಿಕ್ರಿಯೆಯಾಗಿ ಬಳಸಬೇಡಿ ಎಂಬ ಸಂದೇಶವನ್ನು ಅಭಿಯಾನ ನೀಡಿದೆ

# 350 ಕೋಟಿ ಕ್ಲಬ್ ಗೆ ಹನುಮಾನ್ ಅಂಶ



ಮುಂಬೈ, ಸೆ.22–‘ಹನುಮಾನ್ ಅಂಶ’ ಚಲನಚಿತ್ರವು ಬಾಕ್ಸ್ ಆಫೀಸ್‌ನಲ್ಲಿ ಪವಾಡದ ರೀತಿಯಲ್ಲಿ ಗಳಿಕೆ ಮುಂದುವರಿಸಿದ್ದು, ಬಿಡುಗಡೆಯಾದ 46ನೇ ದಿನದಂದು ಜಾಗತಿಕವಾಗಿ 350 ಕೋಟಿ ರೂಪಾಯಿಗಳ ಭರ್ಜರಿ ಗಳಿಕೆ ಕಾಣುವ ಮೂಲಕ ಹೊಸ ಇತಿಹಾಸ ಸೃಷ್ಟಿಸಿದೆ. ವಿಶಾಲ್ ಚತುರ್ವೇದಿ ನಿರ್ದೇಶನದ ಮತ್ತು ನೀಮ್ ಕರೋಲಿ ಬಾಬಾ ಅವರ ಜೀವನದಿಂದ ಪ್ರೇರಿತವಾದ ಈ ಚಿತ್ರವು ಕೇವಲ 2 ಕೋಟಿ ರೂಪಾಯಿಗಳ ಸಣ್ಣ ಬಜೆಟ್‌ನಲ್ಲಿ ನಿರ್ಮಾಣಗೊಂಡು ಈಗ 350 ಕೋಟಿಯ ಗಡಿ ದಾಟಿರುವುದು ಚಿತ್ರರಂಗವನ್ನು ಬೆರಗುಗೊಳಿಸಿದೆ. ಭಾರತೀಯ ಬಾಕ್ಸ್ ಆಫೀಸ್‌ನಲ್ಲಿ 46ನೇ ದಿನದಂದು ಸಿನಿಮಾ 4 ಕೋಟಿ ರೂಪಾಯಿ ಗಳಿಸಿದ್ದು, ಇದರೊಂದಿಗೆ ದೇಶೀಯ ನೆಟ್ ಸಂಗ್ರಹ 275.88 ಕೋಟಿ ಹಾಗೂ ಜಾಗತಿಕ ಗಳಿಕೆ 352.30 ಕೋಟಿ ರೂಪಾಯಿಗೆ ತಲುಪಿದೆ. ಬಿಡುಗಡೆಯಾದ ಮೊದಲ ದಿನ ಕೇವಲ 10 ಲಕ್ಷ ರೂಪಾಯಿಗಳ ಸಾಧಾರಣ ಗಳಿಕೆ ಕಂಡಿದ್ದ ಈ ಸಿನಿಮಾ, ಪ್ರೇಕ್ಷಕರ ಅಪಾರ ಬೆಂಬಲ ಮತ್ತು ಸಕಾರಾತ್ಮಕ ಅಭಿಪ್ರಾಯಗಳಿಂದಾಗಿ 46ನೇ ದಿನವೂ ಅತಿ ಹೆಚ್ಚು ಗಳಿಕೆ ಮಾಡಿದ ಹೆಗ್ಗಳಿಕೆಗೆ ಪಾತ್ರವಾಗಿದೆ. 46ನೇ ದಿನದ ಗಳಿಕೆಯಲ್ಲಿ ಶಾರುಖ್ ಖಾನ್ ಅವರ 'ಜವಾನ್' (41 ಲಕ್ಷ) ಮತ್ತು ಬಿಗ್ ಬಜೆಟ್ ಚಿತ್ರ 'ಧುರಂಧರ್ 2' (1.57 ಕೋಟಿ) ಸಿನಿಮಾಗಳ ದಾಖಲೆಗಳನ್ನು 'ಹನುಮಾನ್ ಅಂಶ' ಹಿಂದಿಕ್ಕಿದೆ. ಶೋಭಿನವ್, ಚಂದನ್ ಆನಂದ್ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ ಈ ಆಧ್ಯಾತ್ಮಿಕ ಕಥಾಹಂದರದ ಚಿತ್ರವು ಪ್ರಾದೇಶಿಕ ಗಡಿಗಳನ್ನು ಮೀರಿ ಬ್ಲಾಕ್‌ಬಸ್ಟರ್ ಪ್ರದರ್ಶನ ಕಾಣುತ್ತಿದ್ದು, ಶೀಘ್ರದಲ್ಲೇ 400 ಕೋಟಿ ರೂಪಾಯಿಗಳ ಕ್ಲಬ್ ಸೇರುವತ್ತ ಧಾವಿಸುತ್ತಿದೆ.

# ದೇವಯ್ಯನಹುಂಡಿಯಲ್ಲಿ ಗಣೇಶೋತ್ಸವ ವಿಚಾರಕ್ಕೆ ಹೊಡೆದಾಟ: ಮಚ್ಚಿನಿಂದ ಹಲ್ಲೆ, ಓರ್ವನಿಗೆ ಗಾಯ

ಮೈಸೂರು, ಸೆ.22:– ಮೈಸೂರಿನ ಕುವೆಂಪುನಗರ ಠಾಣಾ ವ್ಯಾಪ್ತಿಯ ದೇವಯ್ಯನಹುಂಡಿಯಲ್ಲಿ ಗಣೇಶೋತ್ಸವ ವಿಚಾರವಾಗಿ ಎರಡು ಗುಂಪುಗಳ ನಡುವೆ ನಡೆದ ಮಾತಿನ ಚಕಮಕಿ ಹೊಡೆದಾಟಕ್ಕೆ ತಿರುಗಿ ವ್ಯಕ್ತಿಯೊಬ್ಬರ ಮೇಲೆ ಮಚ್ಚಿನಿಂದ ಹಲ್ಲೆ ನಡೆದಿದೆ.

ಭಾನುವಾರ ರಾತ್ರಿ ಗಣೇಶನ ವಿಚಾರವಾಗಿ ಎರಡು ಗುಂಪುಗಳ ನಡುವೆ ವಾಗ್ವಾದ ನಡೆದು ಜಗಳವಾಗಿದೆ. ಆ ವೇಳೆ ಸ್ಥಳೀಯರು ಮಧ್ಯಪ್ರವೇಶಿಸಿ ಎರಡೂ ಗುಂಪುಗಳನ್ನು ಸಮಾಧಾನಪಡಿಸಿ ಪರಿಸ್ಥಿತಿ ತಹಬದಿಗೆ ತಂದಿದ್ದರು.

ಬೆಳಗ್ಗೆ ಮತ್ತೆ ಗಲಾಟೆ ಶುರುವಾಗಿದೆ. ಒಂದು ಗುಂಪಿನವರು ಹೊರಗಿನಿಂದ ಯುವಕರನ್ನು ಕರೆಸಿಕೊಂಡು ಎದುರಿನ ಗುಂಪಿನ ಮೇಲೆ ದಾಳಿ ಮಾಡಿದ್ದಾರೆ ಎಂದು ಹೇಳಲಾಗಿದೆ. ಈ ವೇಳೆ ವ್ಯಕ್ತಿಯೊಬ್ಬರ ಮೇಲೆ ಮಾರಕಾಸ್ತ್ರದಿಂದ ಹಲ್ಲೆ ನಡೆದಿದ್ದು, ಅವರು ಗಾಯಗೊಂಡಿದ್ದಾರೆ.

ಸುದ್ದಿ ತಿಳಿದ ಕೂಡಲೇ ಕುವೆಂಪುನಗರ ಪೊಲೀಸರು ಸ್ಥಳಕ್ಕೆ ತೆರಳಿ ಪರಿಸ್ಥಿತಿಯನ್ನು ನಿಯಂತ್ರಿಸಿದ್ದಾರೆ. ಗಾಯಾಳುವನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆ ಸಂಬಂಧ ಓರ್ವ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಮುನ್ನೆಚ್ಚರಿಕಾ ಕ್ರಮವಾಗಿ ದೇವಯ್ಯನಹುಂಡಿ ಪ್ರದೇಶದಲ್ಲಿ ಪೊಲೀಸ್ ಬಂದೋಬಸ್ತ್ ಹೆಚ್ಚಿಸಲಾಗಿದ್ದು, ಸದ್ಯ ಪರಿಸ್ಥಿತಿ ಶಾಂತವಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

# ಮೈಸೂರಿನ ಹೃದಯಭಾಗದಲ್ಲೇ ಕೊಳಚೆ ದುರ್ನಾತ



ಮೈಸೂರು, ಸೆ.22: ಸಾಂಸ್ಕೃತಿಕ ನಗರಿ ಮೈಸೂರಿನ ಹೃದಯ ಭಾಗವಾದ ಜಗನ್ಮೋಹನ ಅರಮನೆ ಮುಂಭಾಗದ ಪರಕಾಲ ಮಠದ ಪಕ್ಕದ ದೀಕ್ಷಾಚಾರ್ ರಸ್ತೆಯಲ್ಲಿ ಒಳಚರಂಡಿ ಸಂಪೂರ್ಣ ಬಂದ್ ಆಗಿ ಕೊಳಚೆ ನೀರು ರಸ್ತೆಗೆ ಹರಿಯುತ್ತಿದ್ದರೂ ಮಹಾನಗರ ಪಾಲಿಕೆ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ 15 ದಿನಗಳಿಂದ ಚರಂಡಿ ಬ್ಲಾಕ್ ಆಗಿದ್ದು, ಚೇಂಬರ್‌ನಿಂದ ಮಲಮಿಶ್ರಿತ ನೀರು ಹೊರಬಂದು ರಸ್ತೆಯ ಮೇಲೆ ಹರಿಯುತ್ತಿದೆ. ದುರ್ನಾತದಿಂದ ಸಾರ್ವಜನಿಕರು, ವ್ಯಾಪಾರಿಗಳು ಮತ್ತು ದೇವಸ್ಥಾನಕ್ಕೆ ಬರುವ ಭಕ್ತರು ಪರದಾಡುವಂತಾಗಿದೆ.

ಈ ಬಗ್ಗೆ ನಗರ ಪಾಲಿಕೆಯ ಅಧಿಕಾರಿಗಳಿಗೆ ಅನೇಕ ಬಾರಿ ದೂರವಾಣಿ ಮೂಲಕ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ನಾಗರಿಕರು ದೂರಿದ್ದಾರೆ.

ಪ್ರವಾಸಿಗರು ಹೆಚ್ಚಾಗಿ ಓಡಾಡುವ ಪ್ರಮುಖ ರಸ್ತೆಯಲ್ಲಿ ಇಂತಹ ಅವ್ಯವಸ್ಥೆ ಇರುವುದು ಪಾಲಿಕೆಯ ಕಾರ್ಯವೈಖರಿಗೆ ಹಿಡಿದ ಕೈಗನ್ನಡಿಯಾಗಿದೆ. ದಸರಾ ಹಬ್ಬ ಸಮೀಪಿಸುತ್ತಿರುವಾಗಲೇ ಸ್ವಚ್ಛತೆಗೆ ಆದ್ಯತೆ ನೀಡಬೇಕಾದ ಪಾಲಿಕೆ ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿರುವುದು ನಾಚಿಕೆಗೇಡಿನ ಸಂಗತಿ. ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಚರಂಡಿಯನ್ನು ಸ್ವಚ್ಛಗೊಳಿಸಿ ಸಮಸ್ಯೆ ಬಗೆಹರಿಸಬೇಕು ಎಂದು ಸ್ಥಳೀಯರು ಪತ್ರಿಕೆಯ ಮೂಲಕ ಮನವಿ ಮಾಡಿದ್ದಾರೆ.

# ಪರೀಕ್ಷಾ ಕೊಠಡಿಯಿಂದ ಹೊರಹೋಗುವಂತೆ ಸಾಹಿಲ್‌ಗೆ ಸೂಚನೆ

ಮುಂಬೈ, ಸೆ.22– ಐಐಟಿ ಬಾಂಬೆಯ ದ್ವಿತೀಯ ವರ್ಷದ ಬಿ.ಟೆಕ್ ವಿದ್ಯಾರ್ಥಿ ಸಾಹಿಲ್ ವಾಕೋಡೆ ಆತ್ಮಹತ್ಯೆ ಪ್ರಕರಣದ ತನಿಖೆಯಲ್ಲಿ ಸಿಸಿಟಿವಿ ದೃಶ್ಯಗಳು ಪ್ರಮುಖ ಸಾಕ್ಷ್ಯವಾಗಿ ಹೊರಹೊಮ್ಮಿವೆ.

ಪರೀಕ್ಷೆಯ ವೇಳೆ ಚಾಟ್‌ಜಿಪಿಟಿ ಬಳಸುತ್ತಿದ್ದರೆಂಬ ಆರೋಪದ ಹಿನ್ನೆಲೆಯಲ್ಲಿ ಸಾಹಿಲ್ ಅವರನ್ನು ಪರೀಕ್ಷಾ ಕೊಠಡಿಯಿಂದ ಹೊರಗೆ ಕರೆದೊಯ್ಯಲಾಗಿತ್ತು ಎಂದು ತಿಳಿದುಬಂದಿದೆ. ಪ್ರಕರಣದ ತನಿಖೆ ನಡೆಸುತ್ತಿರುವ ಕ್ರೈಂ ಬ್ರಾಂಚ್ ತಂಡ, ಪರೀಕ್ಷಾ ಕೊಠಡಿಯಿಂದ ವಿದ್ಯಾರ್ಥಿಯ ಹಾಸ್ಟೆಲ್‌ವರೆಗಿನ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸುತ್ತಿದೆ.

ತನಿಖಾ ಮೂಲಗಳ ಪ್ರಕಾರ, ಘಟನೆಯ ದಿನ ಮಧ್ಯಾಹ್ನ 12 ಗಂಟೆ 30 ನಿಮಿಷದಿಂದ 12 ಗಂಟೆ 45 ನಿಮಿಷದವರೆಗೆ ಪರೀಕ್ಷಾ ಕೊಠಡಿಯಲ್ಲಿ ಸಾಹಿಲ್ ಅವರ ಚಲನವಲನಗಳು ಸಿಸಿಟಿವಿಯಲ್ಲಿ ದಾಖಲಾಗಿವೆ. ಪರೀಕ್ಷೆ ಮುಗಿಯಲು ಸುಮಾರು 15 ನಿಮಿಷಗಳು ಬಾಕಿ ಇದ್ದಾಗ, ಸಾಹಿಲ್ ಕೆಳಗೆ ಬಾಗಿ ತಮ್ಮ ಜೇಬಿನತ್ತ ನೋಡುತ್ತಿರುವುದು ದೃಶ್ಯಗಳಲ್ಲಿ ಕಂಡುಬಂದಿದೆ.

ಬಳಿಕ ಓರ್ವ ಪ್ರಾಧ್ಯಾಪಕರು ಸಾಹಿಲ್ ಅವರನ್ನು ಪ್ರಶ್ನಿಸುತ್ತಿರುವುದು ಮತ್ತು ಇತರ ವಿದ್ಯಾರ್ಥಿಗಳಿಂದ ದೂರಕ್ಕೆ ಕರೆದೊಯ್ಯುತ್ತಿರುವುದು ಸಿಸಿಟಿವಿಯಲ್ಲಿ ದಾಖಲಾಗಿದೆ.

ಪರೀಕ್ಷಾ ಕೊಠಡಿಯಿಂದ ಹೊರಬಂದ ಬಳಿಕ ಸಾಹಿಲ್ ಕ್ಯಾಂಪಸ್‌ನಲ್ಲಿ ನಡೆದುಕೊಂಡು ಹೋಗುತ್ತಿರುವುದು ಸಿಸಿಟಿವಿಯಲ್ಲಿ ಸೆರೆಯಾಗಿದೆ. ಬಳಿಕ ಮಧ್ಯಾಹ್ನ ಸುಮಾರು 1 ಗಂಟೆ 25 ನಿಮಿಷಕ್ಕೆ ಅವರು ತಮ್ಮ ಹಾಸ್ಟೆಲ್ ಕೊಠಡಿಗೆ ಪ್ರವೇಶಿಸಿರುವುದು ದಾಖಲಾಗಿದೆ.

ಆ ಬಳಿಕ ಸಾಹಿಲ್ ತಮ್ಮ ಕೊಠಡಿಯಿಂದ ಹೊರಬಂದಿಲ್ಲ ಎಂದು ಮೂಲಗಳು ತಿಳಿಸಿವೆ. ನಂತರ ಅವರ ಸಾವಿನ ಸುದ್ದಿ ಬೆಳಕಿಗೆ ಬಂದಿದೆ. ಪರೀಕ್ಷಾ ಕೊಠಡಿ, ಕ್ಯಾಂಪಸ್ ಹಾಗೂ ಹಾಸ್ಟೆಲ್‌ನ ಸಿಸಿಟಿವಿ ದೃಶ್ಯಗಳನ್ನು ಪರಸ್ಪರ ಹೊಂದಾಣಿಕೆ ಮಾಡುವ ಮೂಲಕ ಘಟನೆಯ ಸಂಪೂರ್ಣ ಸರಣಿಯನ್ನು ಪತ್ತೆಹಚ್ಚಲು ಕ್ರೈಂ ಬ್ರಾಂಚ್ ತನಿಖೆ ನಡೆಸುತ್ತಿದೆ ಎಂದು ಮೂಲಗಳು ತಿಳಿಸಿವೆ.

22 ವರ್ಷದ ಐಐಟಿ ಬಾಂಬೆ ವಿದ್ಯಾರ್ಥಿ ಸಾಹಿಲ್ ವಾಕೋಡೆ ಅವರ ಸಾವಿನ ಕುರಿತು ತನಿಖೆಯನ್ನು ಕ್ರೈಂ ಬ್ರಾಂಚ್ ವಹಿಸಿಕೊಂಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಐಐಟಿ ಬಾಂಬೆಯ ಓರ್ವ ಪ್ರಾಧ್ಯಾಪಕರು ಸೇರಿದಂತೆ ಇತರರನ್ನು ವಿಚಾರಣೆಗೆ ಕರೆಯುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಾಹಿಲ್ ವಾಕೋಡೆ ಅವರ ಕುಟುಂಬಸ್ಥರು, ವಿದ್ಯಾರ್ಥಿಗೆ ಸಂಸ್ಥೆಯ ಮಟ್ಟದಲ್ಲಿ ಕಿರುಕುಳ ಹಾಗೂ ಜಾತಿ ಆಧಾರಿತ ತಾರತಮ್ಯ ಎದುರಾಗಿತ್ತು ಎಂದು ಆರೋಪಿಸಿದ್ದಾರೆ.

ಈ ಆರೋಪಗಳ ಹಿನ್ನೆಲೆಯಲ್ಲಿ ಐಐಟಿ ಬಾಂಬೆ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆಗಳು ನಡೆದಿವೆ.

# 200 ಆಟೋಗಳು ಎಲೆಕ್ಟ್ರಿಕ್‌ಗೆ ಪರಿವರ್ತನೆ

ಬೆಂಗಳೂರು, ಸೆ.22: ಬೆಂಗಳೂರು ಮೂಲದ ಎಕ್ಸ್ಪೋನೆಂಟ್ ಎನರ್ಜಿ ಸಂಸ್ಥೆ ತನ್ನ ‘ಎಕ್ಸ್ಪೋನೆಂಟ್ OTO’ ವೇದಿಕೆಯಡಿ ನಾಲ್ಕು ತಿಂಗಳ ಪೈಲಟ್ ಯೋಜನೆಯಲ್ಲಿ 200 ಐಸಿಇ ಆಟೋರಿಕ್ಷಾಗಳನ್ನು ಎಲೆಕ್ಟ್ರಿಕ್ ವಾಹನಗಳಾಗಿ ರೆಟ್ರೋಫಿಟ್ ಮಾಡಿದೆ.

ರೆಟ್ರೋಫಿಟ್ ಮಾಡಿದ ವಾಹನಗಳು ಇದುವರೆಗೆ 15 ಲಕ್ಷಕ್ಕೂ ಹೆಚ್ಚು ಕಿ.ಮೀ. ಸಂಚರಿಸಿದ್ದು, 25 ಸಾವಿರಕ್ಕೂ ಅಧಿಕ ಚಾರ್ಜಿಂಗ್ ಸೆಷನ್‌ಗಳನ್ನು ಪೂರ್ಣಗೊಳಿಸಿವೆ.

ಬೆಂಗಳೂರಿನ ಎಲೆಕ್ಟ್ರಿಕ್ ಮೂರು–ಚಕ್ರ ವಾಹನ ಮಾರುಕಟ್ಟೆಯಲ್ಲಿ ಸಂಸ್ಥೆ ಸುಮಾರು 20% ಪಾಲು ಹೊಂದಿದೆ ಎಂದು ಕಂಪನಿ ತಿಳಿಸಿದೆ.

24 ಗಂಟೆಗಳಲ್ಲಿ ರೆಟ್ರೋಫಿಟ್ ಪೂರ್ಣಗೊಳಿಸುವ ವ್ಯವಸ್ಥೆ ಹೊಂದಿರುವ OTO, 15 ನಿಮಿಷಗಳಲ್ಲಿ 0–100% ಚಾರ್ಜಿಂಗ್ ಹಾಗೂ 140–150 ಕಿ.ಮೀ. ನೈಜ ವ್ಯಾಪ್ತಿ ನೀಡುತ್ತದೆ. ಬ್ಯಾಟರಿಗೆ 5 ವರ್ಷ ಅಥವಾ 3,000 ಚಾರ್ಜಿಂಗ್ ಸೈಕಲ್‌ಗಳ ವಾರಂಟಿ ನೀಡಲಾಗುತ್ತಿದೆ.

“ಈ 200 ರೆಟ್ರೋಫಿಟ್‌ಗಳು ಈಗಾಗಲೇ ರಸ್ತೆಯಲ್ಲಿರುವ ವಾಹನಗಳನ್ನೇ ವಿದ್ಯುದೀಕರಿಸುವ ಸಾಧ್ಯತೆಯನ್ನು ತೋರಿಸಿವೆ. ಚಾಲಕರು ತಾವು ಪರಿಚಿತರಾಗಿರುವ ವಾಹನ ಮತ್ತು ಸೇವಾ ವ್ಯವಸ್ಥೆಯನ್ನೇ ಮುಂದುವರಿಸಬಹುದು” ಎಂದು ಎಕ್ಸ್ಪೋನೆಂಟ್ ಎನರ್ಜಿಯ ವ್ಯವಹಾರ ಮುಖ್ಯಸ್ಥ ಆಯುಷ್ ಭಾರ್ಗವ ಹೇಳಿದರು.

ಮುಂದಿನ ಹಂತದಲ್ಲಿ ಪ್ರಮುಖ ನಗರಗಳಿಗೆ ರೆಟ್ರೋಫಿಟ್ ಸೇವೆ ವಿಸ್ತರಿಸುವ ಗುರಿಯನ್ನು ಕಂಪನಿ ಹೊಂದಿದೆ. ಎಕ್ಸ್ಪೋನೆಂಟ್ ONE ಮೂಲಕ ಔಖಿಔ ರೆಟ್ರೋಫಿಟ್ ಕಿಟ್‌ಗೆ ಹಣಕಾಸು ಸೌಲಭ್ಯವನ್ನೂ ಒದಗಿಸಲಾಗುತ್ತಿದೆ.

# ನಂಜನಗೂಡು ಸರ್ಕಾರಿ ಕಾಲೇಜಿನಲ್ಲಿ ಅವ್ಯವಸ್ಥೆ ಆರೋಪ

ಮೈಸೂರು.ಸೆ.22–ನಂಜನಗೂಡಿನ ಸರ್ಕಾರಿ ಆದರ್ಶ ಪದವಿಪೂರ್ವ ಕಾಲೇಜಿನಲ್ಲಿ ಮೂಲಸೌಕರ್ಯಗಳ ಕೊರತೆ ಹಾಗೂ ಕಾಲೇಜು ಅಭಿವೃದ್ಧಿ ಶುಲ್ಕ ಸಂಗ್ರಹಕ್ಕೆ ಸಂಬಂಧಿಸಿದಂತೆ ಹಲವು ಆರೋಪಗಳು ಕೇಳಿಬಂದಿವೆ.

ಕಾಲೇಜಿನಲ್ಲಿ ಸುಮಾರು 178 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿಲ್ಲ. ಶೌಚಾಲಯಗಳು ದುಸ್ಥಿತಿಯಲ್ಲಿದ್ದು, ಪ್ರಯೋಗಾಲಯದಲ್ಲಿ ಅಗತ್ಯ ಸಲಕರಣೆಗಳ ಕೊರತೆಯಿದೆ. ವಿದ್ಯಾರ್ಥಿಗಳ ಅಧ್ಯಯನಕ್ಕೆ ಅಗತ್ಯವಾದ ಸಮರ್ಪಕ ಗ್ರಂಥಾಲಯದ ಸೌಲಭ್ಯವೂ ಇಲ್ಲ ಎಂಬ ಆರೋಪ ಕೇಳಿಬಂದಿದೆ.

ಇದರ ನಡುವೆ ವಿದ್ಯಾರ್ಥಿಗಳಿಂದ ಕಾಲೇಜು ಅಭಿವೃದ್ಧಿ ಶುಲ್ಕವೆಂದು ತಲಾ 800 ಸಂಗ್ರಹಿಸಲಾಗಿದೆ ಎಂದು ಆರೋಪಿಸಲಾಗಿದೆ. ಆದರೆ ಕಾಲೇಜಿನಲ್ಲಿ ಅಭಿವೃದ್ಧಿ ಸಮಿತಿ ಇಲ್ಲದಿದ್ದರೂ ಶುಲ್ಕ ಸಂಗ್ರಹಿಸಿರುವುದು ಪ್ರಶ್ನೆಗೆ ಕಾರಣವಾಗಿದೆ.

ಸರ್ಕಾರದಿಂದ ಲಭ್ಯವಾಗುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿಲ್ಲ ಎಂಬ ಆರೋಪವೂ ಕೇಳಿಬಂದಿದೆ. ಕಾಲೇಜಿನ ಪ್ರಾಂಶುಪಾಲ ಕೆಂಡಗಣ್ಣಸ್ವಾಮಿ ಹೆಡಿಯಾಲ ಸರ್ಕಾರಿ ಪಿಯು ಕಾಲೇಜಿನ ಜವಾಬ್ದಾರಿಯ ಜೊತೆಗೆ ದೇಬೂರು ಸರ್ಕಾರಿ ಆದರ್ಶ ಪಿಯು ಕಾಲೇಜಿನ ಹೆಚ್ಚುವರಿ ಜವಾಬ್ದಾರಿಯನ್ನೂ ಹೊಂದಿದ್ದಾರೆ.

ಹೆಚ್ಚುವರಿ ಜವಾಬ್ದಾರಿಯಿಂದಾಗಿ ಆದರ್ಶ ಪಿಯು ಕಾಲೇಜಿಗೆ ಸಮರ್ಪಕವಾಗಿ ಭೇಟಿ ನೀಡುತ್ತಿಲ್ಲ ಎಂಬ ಆರೋಪವೂ ಕೇಳಿಬಂದಿದೆ. ಅಲ್ಲದೆ, ಅಭಿವೃದ್ಧಿ ಶುಲ್ಕದ ಹಣದ ಬಳಕೆಗೆ ಸಂಬಂಧಿಸಿದಂತೆ ಪ್ರಾಂಶುಪಾಲರ ವಿರುದ್ಧ ಹಣ ದುರ್ಬಳಕೆಯ ಆರೋಪವೂ ವ್ಯಕ್ತವಾಗಿದೆ.

ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು, ಸಂಗ್ರಹಿಸಿರುವ ಅಭಿವೃದ್ಧಿ ಶುಲ್ಕದ ಬಳಕೆ ಹಾಗೂ ಕಾಲೇಜಿಗೆ ಲಭ್ಯವಾಗಿರುವ ಸರ್ಕಾರಿ ಅನುದಾನ ಮತ್ತು ಸೌಲಭ್ಯಗಳ ಬಳಕೆಯ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಸಮಗ್ರ ತನಿಖೆ ನಡೆಸಿ ವಾಸ್ತವಾಂಶವನ್ನು ಬಹಿರಂಗಪಡಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಆರೋಪಗಳ ಕುರಿತು ಸಂಬಂಧಪಟ್ಟ ಕಾಲೇಜು ಆಡಳಿತ ಹಾಗೂ ಅಧಿಕಾರಿಗಳ ಸ್ಪಷ್ಟೀಕರಣ ದೊರೆತ ಬಳಿಕ ಮತ್ತಷ್ಟು ಮಾಹಿತಿ ಹೊರಬರಬೇಕಿದೆ.

# ಅಪ್ರಾಪ್ತರಿಗೆ ಕಿರುಕುಳ ಆರೋಪ: ಮೂವರ ಬಂಧನ

ಜಮುಯಿ, ಸೆ.22: ಬಿಹಾರದ ಜಮುಯಿಯಲ್ಲಿ ಇಬ್ಬರು ಅಪ್ರಾಪ್ತರಿಗೆ ಕಿರುಕುಳ ನೀಡಿದ ಆರೋಪದ ಘಟನೆಗೆ ಸಂಬಂಧಿಸಿದ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಏಳು ಮಂದಿ ವಿರುದ್ಧ ಪೋಕ್ಸೋ ಕಾಯ್ದೆ ಹಾಗೂ ಭಾರತೀಯ ನ್ಯಾಯ ಸಂಹಿತೆಯ ಸಂಬಂಧಿತ ಸೆಕ್ಷನ್‌ಗಳಡಿ ಎಫ್‌ಐಆರ್ ದಾಖಲಿಸಲಾಗಿದೆ. ಈ ಪೈಕಿ ಮೂವರನ್ನು ಪೊಲೀಸರು ಬಂಧಿಸಿದ್ದು, ಉಳಿದ ನಾಲ್ವರು ಆರೋಪಿಗಳಿಗಾಗಿ ಶೋಧ ಕಾರ್ಯ ಮುಂದುವರಿದಿದೆ.

ಪ್ರಕರಣದ ತನಿಖೆಗಾಗಿ ಜಮುಯಿ ಉಪವಿಭಾಗೀಯ ಪೊಲೀಸ್ ಅಧಿಕಾರಿ ದೀಪ್ತಿ ಮೊನಾಲಿ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ಎಸ್ ಐಟಿ ರಚಿಸಲಾಗಿದೆ. ವಿಡಿಯೊದಲ್ಲಿ ಅಪ್ರಾಪ್ತ ಬಾಲಕಿಗೆ ಅಸಭ್ಯವಾಗಿ ವರ್ತಿಸುತ್ತಿರುವಂತೆ ಕಂಡುಬಂದಿರುವ ವ್ಯಕ್ತಿಯನ್ನು ಪೊಲೀಸರು ಗುರುತಿಸಿದ್ದು, ಆತನ ಬಂಧನಕ್ಕೆ ಕ್ರಮ ಕೈಗೊಳ್ಳಲಾಗಿದೆ.

ಪೊಲೀಸರ ಪ್ರಕಾರ, ಸೆಪ್ಟೆಂಬರ್ 19ರ ಸಂಜೆ ಈ ಘಟನೆ ನಡೆದಿದೆ.

ಒಂದೇ ಕೋಚಿಂಗ್ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ಅಪ್ರಾಪ್ತ ಬಾಲಕ ಮತ್ತು ಬಾಲಕಿ ತರಗತಿ ಮುಗಿಸಿಕೊಂಡು ಮನೆಗೆ ಹಿಂದಿರುಗುತ್ತಿದ್ದ ವೇಳೆ, ಕೆಲ ಯುವಕರು ಅವರನ್ನು ತಡೆದಿದ್ದಾರೆ. ಇಬ್ಬರೂ ಆ ಪ್ರದೇಶದಲ್ಲಿ ಫೋಟೋ ತೆಗೆದುಕೊಳ್ಳಲು ನಿಂತಿದ್ದಾಗ, ಆರೋಪಿಗಳು ಅವರ ಮೇಲೆ ಹಲ್ಲೆ ನಡೆಸಿ ಕಿರುಕುಳ ನೀಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಾಲಕಿಗೆ ಅಸಭ್ಯವಾಗಿ ವರ್ತಿಸಿದ ಆರೋಪವೂ ಕೇಳಿಬಂದಿದ್ದು, ಬಾಲಕನ ಮೇಲೂ ಹಲ್ಲೆ ನಡೆಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಘಟನೆಯನ್ನು ವಿಡಿಯೊದಲ್ಲಿ ದಾಖಲಿಸಲಾಗಿದ್ದು, ಬಳಿಕ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದೆ.

ಆರಂಭದಲ್ಲಿ ಸಂತ್ರಸ್ತರು ಪೊಲೀಸರಿಗೆ ದೂರು ನೀಡಿರಲಿಲ್ಲ. ಆದರೆ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡಿದ ಬಳಿಕ ಪ್ರಕರಣ ಪೊಲೀಸರ ಗಮನಕ್ಕೆ ಬಂದಿದೆ. ವಿಡಿಯೊದಲ್ಲಿ ಕಾಣಿಸಿಕೊಂಡಿದ್ದ ವಾಹನದ ನೋಂದಣಿ ಸಂಖ್ಯೆಯ ಆಧಾರದ ಮೇಲೆ ಪೊಲೀಸರು ಅಪ್ರಾಪ್ತರನ್ನು ಪತ್ತೆಹಚ್ಚಿದ್ದಾರೆ.

ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಸುಮಾರು ಏಳು ಮಂದಿಯನ್ನು ಪೊಲೀಸರು ಗುರುತಿಸಿದ್ದಾರೆ. ಈ ಪೈಕಿ ಮೂವರನ್ನು ಬಂಧಿಸಲಾಗಿದ್ದು, ಉಳಿದ ಆರೋಪಿಗಳ ಪತ್ತೆಗಾಗಿ ವಿವಿಧೆಡೆ ದಾಳಿ ನಡೆಸಲಾಗುತ್ತಿದೆ.

ಪ್ರಕರಣದ ತನಿಖೆಯನ್ನು ಎಸ್‌ಡಿಪಿಒ ದೀಪ್ತಿ ಮೊನಾಲಿ ನೇತೃತ್ವದ ವಿಶೇಷ ತನಿಖಾ ತಂಡ ನಡೆಸುತ್ತಿದೆ. ಘಟನೆಯಲ್ಲಿ ಪ್ರತಿಯೊಬ್ಬ ಆರೋಪಿಯ ಪಾತ್ರವನ್ನು ಪರಿಶೀಲಿಸಲಾಗುತ್ತಿದ್ದು, ಉಳಿದ ಆರೋಪಿಗಳನ್ನು ಬಂಧಿಸಲು ಪೊಲೀಸರು ಕ್ರಮ ಕೈಗೊಂಡಿದ್ದಾರೆ.

# ‘ಟ್ರಂಪ್ ಟಿವಿ‘ ಆರಂಭಿಸಿದ ಶ್ವೇತಭವನ

ವಾಷಿಂಗ್ಟನ್, ಸೆ.22 : ಅಮೆರಿಕ ಅಧ್ಯಕ್ಷಡೊನಾಲ್ಡ್‌ಟ್ರಂಪ್ ಆಡಳಿತವು ಸಿಎನ್‌ಎನ್, ಎಂಎಸ್ ನೌ ಮತ್ತು ಪೊಲಿಟಿಕೊ ಸುದ್ದಿಸಂಸ್ಥೆಗಳೊಂದಿಗೆ ಸಂಘರ್ಷ ಎದುರಿಸುತ್ತಿರುವ ಬೆನ್ನಲ್ಲೇ, ಶ್ವೇತಭವನ ‘ಟ್ರಂಪ್ ಟಿವಿ: ದಿ ಎಸ್ಸೆನ್ಷಿಯಲ್ ಸ್ಟೇಷನ್’ ಎಂಬ ಹೆಸರಿನ 24 ಗಂಟೆಗಳ ಡಿಜಿಟಲ್ ವಿಡಿಯೋ ಸ್ಟ್ರೀಮ್ ಆರಂಭಿಸಿದೆ.

ಆಡಳಿತದ ಪ್ರಕಟಣೆಗಳು, ಅಧ್ಯಕ್ಷರ ಭಾಷಣಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳ ವಿಡಿಯ‘ಗಳನ್ನು ಈ ಡಿಜಿಟಲ್ ಸ್ಟ್ರೀಮ್‌ನಲ್ಲಿ ಪ್ರಸಾರ ಮಾಡಲಾಗುತ್ತದೆ. ಆಡಳಿತದ ಪ್ರಮುಖ ಕ್ಷಣಗಳನ್ನು ಒಂದೇ ವೇದಿಕೆಯಲ್ಲಿ ಒದಗಿಸುವ ಉದ್ದೇಶದಿಂದ ಈ ಸೇವೆ ಆರಂಭಿಸಲಾಗಿದ್ದು, ವಿಷಯಗಳನ್ನು ನೈಜ ಸಮಯದಲ್ಲಿ ನವೀಕರಿಸಲಾಗುತ್ತದೆ. ಅಮೆರಿಕದ ಪೂರ್ವ ಕರಾವಳಿ ಸಮಯದಂತೆ ಶ್ವೇತಭವನದ ಯೂಟ್ಯೂಬ್ ಚಾನೆಲ್‌ನಲ್ಲಿ ಸ್ಟ್ರೀಮ್ ಆರಂಭಿಸಲಾಯಿತು.

ಇದಕ್ಕೂ ಕೆಲವೇ ಗಂಟೆಗಳ ಮುನ್ನ ಸಿಎನ್ ಎನ್, ಎಂ.ಎಸ್ ನೌ ಮತ್ತು ಪೊಲಿಟಿಕೊ ಸಂಸ್ಥೆಗಳು ಟ್ರಂಪ್ ಆಡಳಿತದ ವಿರುದ್ಧ ಫೆಡರಲ್ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಿದ್ದವು. ಶ್ವೇತಭವನ ಪ್ರವೇಶವನ್ನು ಮರುಸ್ಥಾಪಿಸುವಂತೆ ಕೋರಿರುವ ಈ ಸಂಸ್ಥೆಗಳು, ತಮ್ಮ ಪತ್ರಕರ್ತರ ಪ್ರವೇಶ ಪತ್ರಗಳನ್ನು ರದ್ದುಗೊಳಿಸಿರುವ ಆಡಳಿತದ ಕ್ರಮವು ಅಮೆರಿಕ ಸಂವಿಧಾನದ ಮೊದಲ ತಿದ್ದುಪಡಿಯಡಿ ತಮ್ಮ ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ವಾದಿಸಿವೆ.

ಟ್ರಂಪ್ ಆಡಳಿತದ ನೀತಿಗಳ ವರದಿಗಾರಿಕೆಯನ್ನು ಟೀಕಿಸಿದ ಬಳಿಕ, ಈ ಮೂರು ಮಾಧ್ಯಮ ಸಂಸ್ಥೆಗಳ ಪತ್ರಕರ್ತರನ್ನು ಶ್ವೇತಭವನದಿಂದ ನಿರ್ಬಂಧಿಸಲಾಗಿತ್ತು. ಶನಿವಾರ ಅವರ ವರದಿಗಾರರಿಗೆ ಶ್ವೇತಭವನ ಆವರಣ ಪ್ರವೇಶ ನಿರಾಕರಿಸಲಾಗಿದ್ದು, ಪತ್ರಿಕಾ ಪ್ರವೇಶ ಪತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸಂಸ್ಥೆಗಳು ತಿಳಿಸಿವೆ.

ಇದರ ನಡುವೆ, ಸಿಎನ್‌ಎನ್ ಅನ್ನು ನಿಗದಿತ ಟೆಲಿವಿಷನ್ ಪೂಲ್ ಕರ್ತವ್ಯದಿಂದಲೂ ತೆಗೆದುಹಾಕಲಾಗಿತ್ತು. ಬಳಿಕ ಎಬಿಸಿ, ಸಿಬಿಎಸ್, ಫಾ–ಕ್ಸ್ ನ್ಯೂಸ್ ಮತ್ತು ಎನ್ ಬಿಸಿ ಸಂಸ್ಥೆಗಳು ಸಿಎನ್ ಎನ್ ಅನ್ನು ನಿಗದಿತ ಕರ್ತವ್ಯದಿಂದ ತೆಗೆದುಹಾಕಿದ ಕ್ರಮದ ಹಿನ್ನೆಲೆಯಲ್ಲಿ ಶ್ವೇತಭವನದ ಟೆಲಿವಿಷನ್ ಪೂಲ್‌ನಲ್ಲಿ ಭಾಗವಹಿಸುವುದನ್ನು ಸ್ಥಗಿತಗೊಳಿಸಿದವು.

ಅಧ್ಯಕ್ಷರ ಕಾರ್ಯಕ್ರಮಗಳ ವಿಡಿಯೋ ದೃಶ್ಯಗಳನ್ನು ವಿವಿಧ ಪ್ರಸಾರಕರು ಹಾಗೂ ಸುದ್ದಿ ಸಂಸ್ಥೆಗಳು ಹಂಚಿಕೊಳ್ಳಲು ಟೆಲಿವಿಷನ್ ಪೂಲ್ ವ್ಯವಸ್ಥೆ ನೆರವಾಗುತ್ತದೆ. ಈ ಪೂಲ್ ವ್ಯವಸ್ಥೆಯಲ್ಲಿ ವ್ಯತ್ಯಯ ಉಂಟಾದ ಹಿನ್ನೆಲೆಯಲ್ಲಿ, ಅಧ್ಯಕ್ಷರ ಕಾರ್ಯಕ್ರಮಗಳ ವಿಡಿಯೊ ದೃಶ್ಯಗಳಿಗೆ ಶ್ವೇತಭವನದ ಸ್ವಂತ ವಿಡಿಯೋ ಫೀಡ್ ಹೆಚ್ಚು ಪ್ರಮುಖ ಮೂಲವಾಗಿ ಪರಿಣಮಿಸಿದೆ.

ತಮ್ಮ ಆಡಳಿತದ ವಿರುದ್ಧ ಮಾಧ್ಯಮ ಸಂಸ್ಥೆಗಳು ಮೊಕದ್ದಮೆ ಹೂಡಿದ ಬಳಿಕ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ಸಾಮಾಜಿಕ ಜಾಲತಾಣದ ಪೋಸ್ಟ್ ಮೂಲಕ ಸಿಎನ್ ಎನ್, ಎಂ.ಎಸ್. ನೌ ಮತ್ತು ಪೊಲಿಟಿಕೊ ಸಂಸ್ಥೆಗಳನ್ನು ತೀವ್ರವಾಗಿ ಟೀಕಿಸಿದ್ದಾರೆ.

**ಟ್ರಂಪ್ ನೇರ ಪ್ರಸಾರ ಸ್ಥಗಿತ**

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ದೇಶದ ಪ್ರಮುಖ ಮಾಧ್ಯಮ ಸಂಸ್ಥೆಗಳ ನಡುವಿನ ಸಂಘರ್ಷ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಪ್ರಮುಖ ಟಿವಿ ಚಾನೆಲ್‌ಗಳು ಅಧ್ಯಕ್ಷರ ವೈಟ್‌ಹೌಸ್ ಕಾರ್ಯಕ್ರಮಗಳ ನೇರ ಪ್ರಸಾರವನ್ನು ಸ್ಥಗಿತಗೊಳಿಸಿವೆ.

**ಘಟನೆಯ ವಿವರ:**

ವೈಟ್‌ಹೌಸ್‌ನಲ್ಲಿ ಸುದ್ದಿ ವರದಿ ಮಾಡಲು ಪ್ರಮುಖ ಮಾಧ್ಯಮ ಸಂಸ್ಥೆಗಳಾದ ‘ಸಿಎನ್‌ಎನ್’, ‘ಎಮ್‌ಎಸ್‌ನೌ’ ಮತ್ತು ‘ಪಾಲಿಟಿಕೋ’ ಸಂಸ್ಥೆಗಳಿಗೆ ನಿರ್ಬಂಧ ವಿಧಿಸಿ ಟ್ರಂಪ್ ಆಡಳಿತ ಆದೇಶ ಹೊರಡಿಸಿತ್ತು. ಮಾಧ್ಯಮಗಳು ತಮ್ಮ ವಿರುದ್ಧ ಸುಳ್ಳು ಸುದ್ದಿಗಳನ್ನು ಬಿತ್ತರಿಸುತ್ತಿವೆ ಎಂದು ಆರೋಪಿಸಿ ಅವರ ಪ್ರವೇಶ ಪತ್ರಗಳನ್ನು ರದ್ದುಗೊಳಿಸಲಾಗಿತ್ತು.

# ಕಿಯೋನಿಕ್ಸ್ ಮೂಲಕ ಹಳ್ಳಿ ಮಕ್ಕಳಿಗೆ ತಂತ್ರಜ್ಞಾನ ತರಬೇತಿ: ಸಿಎಂ

ಬೆಂಗಳೂರು, ಸೆ.22: ಕಿಯೋನಿಕ್ಸ್ ಸಂಸ್ಥೆ ಎಐ ಆಧಾರಿತ ಕಿಯೋ ಕಂಪ್ಯೂಟರ್‌ಗಳ ಮೂಲಕ ತಂತ್ರಜ್ಞಾನವನ್ನು ಹಳ್ಳಿ ಮಕ್ಕಳಿಗೆ ನೀಡುವ ದೊಡ್ಡ ಪ್ರಯತ್ನಕ್ಕೆ ಮುಂದಾಗಿದೆ. ಭವಿಷ್ಯದ ಮಕ್ಕಳನ್ನು ತಯಾರು ಮಾಡುವ ಚಿಂತನೆಗೆ ಕಿಯೋನಿಕ್ಸ್ ಮುಂದಾಗಿರುವುದನ್ನು ಸ್ವಾಗತಿಸುತ್ತೇನೆ” ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಬೆಂಗಳೂರಿನ ಖಾಸಗಿ ಹೊಟೇಲ್‌ನಲ್ಲಿ ಮಂಗಳವಾರ ನಡೆದ ಕಿಯೋನಿಕ್ಸ್‌ನ 50ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಸಿಎಂ ಡಿ ಕೆ ಶಿವಕುಮಾರ್ ಅವರು ಚಾಲನೆ ನೀಡಿ ಮಾತನಾಡಿದರು.

“ಕಿಯೋನಿಕ್ಸ್ ಪಾಲಿಗೆ ಇದೊಂದು ಸುವರ್ಣ ದಿನ. ನಾನು ಶಾಲೆಯಲ್ಲಿ ಓದುವಾಗ ಕಿಯೋನಿಕ್ಸ್ ಆರಂಭವಾಗಿತ್ತು. ಆಗ ವೀರಪ್ಪ ಮೊಯ್ಲಿ ಅವರು ಕೈಗಾರಿಕಾ ಸಚಿವರಾಗಿದ್ದರು, ಎಸ್ ಎಂ ಕೃಷ್ಣ ಅವರು ಉಪ ಸಚಿವರಾಗಿದ್ದರು. ದೇವರಾಜ ಅರಸು ಅವರು ಸಿಎಂ ಆಗಿದ್ದರು. ಅವರುಗಳ ಅಲಂಕರಿಸಿದ ಸ್ಥಾನದಲ್ಲಿ ಇಂದು ನಾನು ಕೂತು ನಿಮ್ಮ ಮುಂದೆ ನಿಂತಿರುವುದು ನನ್ನ ಭಾಗ್ಯ” ಎಂದು ತಿಳಿಸಿದರು.

“ಇತ್ತೀಚೆಗೆ ಕಿಯೋನಿಕ್ಸ್ ಮೂಲಕ ಮಕ್ಕಳಿಗೆ ನೀಡುವ ಕಿಯೋ ಕಂಪ್ಯೂಟರ್ ಅನ್ನು ನನ್ನಿಂದಲೇ ಅನಾವರಣ ಮಾಡಿಸಿದರು. ಇಂದು ನಾವು ಭವಿಷ್ಯ ನಿರ್ಮಾಣ ಮಾಡುವ ಸಂದರ್ಭದಲ್ಲಿದ್ದೇವೆ. ಎಐ ಯುಗದ ಪ್ರವೇಶದಲ್ಲಿದ್ದು, ಕಿಯೋನಿಕ್ಸ್ ಹೊಸ ಸಾಧ್ಯತೆಗಳನ್ನು ಗುರುತಿಸಿ ಕಿಂ–ಯೋ ಅನ್ನು ತಯಾರಿಸಿದ್ದಾರೆ. ಆ ಮೂಲಕ ಕರ್ನಾಟಕವನ್ನು ಭವಿಷ್ಯಕ್ಕೆ ತಯಾರು ಮಾಡುತ್ತಿದೆ. ದೇವರಾಜ ಅರಸು ಅವರ ಕಾಲದಲ್ಲಿ ಇದನ್ನು ಸ್ಥಾಪಿಸಿದ್ದು, ಇದರಿಂದ ಸಾಕಷ್ಟು ಜನರಿಗೆ ಉದ್ಯೋಗ ಸಿಗುತ್ತಿದೆ. ತಂತ್ರಜ್ಞಾನ, ವಿಜ್ಞಾನ ಎಂದರೆ ಬೆಂಗಳೂರು” ಎಂದರು.

ಬಿಯಾಂಡ್ ಬೆಂಗಳೂರು ಮೂಲಕ ಹುಬ್ಬಳ್ಳಿ, ಶಿವಮೊಗ್ಗ, ಕಲಬುರ್ಗಿ, ಮಂಗಳೂರಿನಲ್ಲಿ ಐಟಿ ತಂತ್ರಜ್ಞಾನಕ್ಕೆ ಉತ್ತೇಜನ

“ಪ್ರಸ್ತುತ ಎಲ್ಲ ಕ್ಷೇತ್ರಗಳಲ್ಲೂ ತಂತ್ರಜ್ಞಾನದ ಸೇವೆ ಒದಗಿಸಲಾಗುತ್ತಿದೆ. ಬೆಂಗಳೂರಿನ ಆಸ್ತಿಗಳ ದಾಖಲೆ ಸರಿಪಡಿಸಲು ಹಾಗೂ ಜನರಿಗೆ ಖಾತಾ ವಿತರಣೆಗೆ ತಂತ್ರಜ್ಞಾನವನ್ನೇ ಬಳಸಲಾಗುತ್ತಿದೆ. ಬೆಂಗಳೂರಿನಲ್ಲಿ 40 ಲಕ್ಷ ಆಸ್ತಿಗಳಿಗೆ ಡಿಜಿಟಲ್ ಆಸ್ತಿ ದಾಖಲೆ ನೀಡಲು ಸರ್ಕಾರ ಮುಂದಾಗಿದೆ. ಜತೆಗೆ ಮನೆ ಮನೆಗೆ ದಾಖಲೆಗಳನ್ನು ನೀಡಲಾಗುವುದು. ಎಸ್‌ಐಆರ್ ಮುಗಿದ ಬಳಿಕ ನಗರದ ಸಾರ್ವಜನಿಕರಿಗೆ ಈ ದಾಖಲೆ ವಿತರಣೆ ಆರಂಭಿಸಲಾಗುವುದು ಎಂದರು.

ಬೆಂಗಳೂರಿನ ಜತೆಗೆ ಹುಬ್ಬಳ್ಳಿ, ಶಿವಮೊಗ್ಗ, ಕಲಬುರ್ಗಿ, ಮಂಗಳೂರಿನಲ್ಲಿ ಮಾಹಿತಿ ತಂತ್ರಜ್ಞಾನಕ್ಕೆ ಉತ್ತೇಜನ ನೀಡಲು ತೀರ್ಮಾನಿಸಿದ್ದು, ಬಿಯಾಂಡ್ ಬೆಂಗಳೂರು ಪರಿಕಲ್ಪನೆಯಲ್ಲಿ ಬೇರೆ ಜಿಲ್ಲೆಗಳಲ್ಲಿ ಉದ್ಯಮಗಳ ಪ್ರಗತಿಗೆ ಮುಂದಾಗಿದ್ದೇವೆ. ಸಮಸ್ಯೆ ಯಾವುದೇ ಆದರೂ ಸಕಾರಾತ್ಮಕವಾಗಿ ಆಲೋಚಿಸಿ ಪರಿಹಾರ ಕಂಡುಕೊಳ್ಳಬೇಕು. ಎಐ ತಂತ್ರಜ್ಞಾನ ಬಂದಿದ್ದು, ಎಲ್ಲರಿಗೂ ಇದು ಲಭ್ಯವಾಗುತ್ತಿದೆ. ಕಿಯೋನಿಕ್ಸ್ ಅವರು ಗ್ರಾಮೀಣ ಭಾಗದ ಶಾಲೆಗಳು ಹಾಗೂ ಸಣ್ಣ ಉದ್ಯಮಿಗಳಿಗೆ ಈ ತಂತ್ರಜ್ಞಾನ ತಲುಪಿಸುತ್ತಿರುವುದಕ್ಕೆ ಅಭಿನಂದಿಸುತ್ತೇನೆ” ಎಂದು ಹೇಳಿದರು.

ಮಕ್ಕಳಲ್ಲಿ ಕೌಶಲ್ಯ ವೃದ್ಧಿಗೆ ಉದ್ಯಮ ಆಧಾರಿತ ಪಠ್ಯಕ್ರಮಕ್ಕೆ ಆದ್ಯತೆ ನೀಡಲು ಸೂಚನೆ

“ನಮ್ಮಲ್ಲಿ 30 ಸಾವಿರ ಇಂಜಿನಿಯರಿಂಗ್ ಸೀಟುಗಳು ಖಾಲಿ ಉಳಿದಿದೆ. ಇಂಜಿನಿಯರಿಂಗ್ ವ್ಯಾಸಂಗ ಮಾಡಿದವರಿಗೆ ಕಡಿಮೆ ವೇತನ ಸಿಗುತ್ತಿದ್ದು, ಇದನ್ನು ಯಾವ ರೀತಿ ಬಗೆಹರಿಸಬೇಕು ಎಂದು ಆಲೋಚನೆ ಮಾಡಲಾಗುತ್ತಿದೆ. ಮಕ್ಕಳಲ್ಲಿ ಕೌಶಲ್ಯ ವೃದ್ಧಿಗೆ ಆದ್ಯತೆ ನೀಡಲು ಅವರ ಪಠ್ಯಕ್ರಮವನ್ನು ಉದ್ಯಮ ಆಧಾರಿತವನ್ನಾಗಿ ಪರಿವರ್ತಿಸಲು ಸೂಚಿಸಿದ್ದೇನೆ. ಕೆಲವು ವಿದೇಶಗಳಲ್ಲಿ ಉದ್ಯೋಗ ನೀಡುವಾಗ ಪದವಿಗಳನ್ನು ಕೇಳುವುದಿಲ್ಲ. ಆ ಉದ್ಯೋಗಕ್ಕೆ ಸೂಕ್ತವಾದ ಕೌಶಲ್ಯವಿದೆಯೇ ಎಂದಷ್ಟೇ ಕೇಳುತ್ತಾರೆ” ಎಂದರು.

“ನಮ್ಮ ಯುವಕರು ಉದ್ಯೋಗಿಗಳಾಗುವುದಕ್ಕಿಂತ ಉದ್ಯೋಗದಾತರಾಗಬೇಕು. ನಮ್ಮ ಸರ್ಕಾರವು ಉದ್ಯೋಗದಾತರ ಬಗ್ಗೆ ಹೆಚ್ಚಿನ ಕಾಳಜಿ ವಹಿಸುತ್ತಿದೆ. ಈ ಸಂಸ್ಥೆ ತಂತ್ರಜ್ಞಾನದ ಪರಂಪರೆಯನ್ನು ಮುಂದುವರಿಸುತ್ತಿದ್ದು, ಭವಿಷ್ಯದಲ್ಲಿ ಜಾಗದ ಅಗತ್ಯ ಇದ್ದರೆ ಹೇಳಿ, ನಮ್ಮ ಸರ್ಕಾರ ನಿಮ್ಮ ಬೆಂಬಲಕ್ಕೆ ನಿಲ್ಲಲಿದೆ. ಎಲೆಕ್ಟ್ರಾನಿಕ್ ಸಿಟಿಯಲ್ಲಿರುವವರು ಬೆಂಗಳೂರು ಹಾಗೂ ದೇಶದ ಪ್ರಗತಿಯ ಅಡಿಪಾಯ. ನಮ್ಮ ಸರ್ಕಾರ ಜನರ ಪರವಾದ ಸರ್ಕಾರ. ನಾವು ಎಲ್ಲಾ ಕ್ಷೇತ್ರಗಳಲ್ಲಿ ನಾಯಕರನ್ನು ತಯಾರು ಮಾಡಲು ಬಯಸುತ್ತೇವೆ. ನಮ್ಮ ಸರ್ಕಾರ ಸದಾ ಸಕಾರಾತ್ಮಕವಾಗಿ ಚಿಂತನೆ ಮಾಡಲಿದ್ದು, ನಾವೆಲ್ಲರೂ ಒಟ್ಟಾಗಿ ಕರ್ನಾಟಕದ ಭವಿಷ್ಯವನ್ನು ನಿರ್ಮಾಣ ಮಾಡೋಣ” ಎಂದು ಕರೆ ನೀಡಿದರು.

“ನಾನು ಇತ್ತೀಚೆಗೆ ಮೈಸೂರಿನಲ್ಲಿ ಪ್ರಧಾನಮಂತ್ರಿಗಳ ಕಾರ್ಯಕ್ರಮದಲ್ಲಿ ನಾನು ಅವರಿಗೆ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಸ್ಥಾಪನೆಯ ಬಗ್ಗೆ ಮಾಹಿತಿ ನೀಡಿದೆ. ಟಾಟಾ ಹಾಗೂ ಸ್ವಾಮಿ ವಿವೇಕಾನಂದ ಅವರು ಹಡಗಿನಲ್ಲಿ ಪ್ರಯಾಣ ಮಾಡುವಾಗ ಭಾರತಕ್ಕೆ ವಿಜ್ಞಾನದ ಅಗತ್ಯತೆ ಬಗ್ಗೆ ಚರ್ಚೆ ಮಾಡಿದರು. ಆಗ ಮೈಸೂರು ಮಹಾರಾಜರನ್ನು ಭೇಟಿ ಮಾಡಿ ಮನವಿ ಮಾಡಿದಾಗ ರಾಜರು 300 ಎಕರೆ ಜಮೀನು ಹಾಗೂ 5 ಲಕ್ಷ ಹಣವನ್ನು ಇದಕ್ಕಾಗಿ ನೀಡಿದರು. ಆಗ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಸ್ಥಾಪನೆಯಾಯಿತು. ಅಲ್ಲಿ ಆರಂಭವಾದ ವಿಜ್ಞಾನದ ಪ್ರಯಾಣ, ಇಂದು ಇಷ್ಟು ದೊಡ್ಡ ಪ್ರಮಾಣದಲ್ಲಿ 250ಕ್ಕೂ ಹೆಚ್ಚು ಇಂಜಿನಿಯರಿಂಗ್ ಕಾಲೇಜು, ಎಲೆಕ್ಟ್ರಾನಿಕ್ ಸಿಟಿಯಲ್ಲಿ ಲಕ್ಷಾಂತರ ಮಂದಿ ಉದ್ಯೋಗಿಗಳು ಇದ್ದಾರೆ” ಎಂದರು.

ಕಿಯಾನಿಕ್ಸ್– 50 ವರ್ಷಗಳ ಅನ್ವೇಷಣೆ, ತಂತ್ರಜ್ಞಾನ, ಪ್ರಗತಿಯ ಪಯಣ

“ಕಿಯೋನಿಕ್ಸ್ ಆರಂಭವಾದಾಗ ಬೆಂಗಳೂರಿನಲ್ಲಿ 20 ಲಕ್ಷ ಜನಸಂಖ್ಯೆ ಇತ್ತು. ಈಗ 1.40 ಕೋಟಿ ಜನ ಇದ್ದಾರೆ. ಕರ್ನಾಟಕ ಸರ್ಕಾರ ಆಗಲೇ ದೂರದೃಷ್ಟಿಯಿಂದ ತಂತ್ರಜ್ಞಾನ ಕ್ಷೇತ್ರ–ಕ್ಕೆ ದೊಡ್ಡ ಅಡಿಪಾಯ ಹಾಕಿತು. ಇದಕ್ಕಾಗಿ ದೇವರಾಜ ಅರಸು, ವೀರಪ್ಪ ಮೊಯ್ಲಿ ಅವರಿಗೆ ಧನ್ಯವಾದ ಅರ್ಪಿಸುತ್ತೇನೆ. ಇದು ಬೆಂಗಳೂರಿಗೆ ಮಾತ್ರ ಸೀಮಿತವಾಗಿಲ್ಲ. ಉತ್ಪಾದನಾ ವಲಯದಲ್ಲಿ ತನ್ನ ಕೊಡುಗೆ ನೀಡಿದೆ. 50 ವರ್ಷಗಳ ಅನ್ವೇಷಣೆ, ತಂತ್ರಜ್ಞಾನ, ಪ್ರಗತಿಯ ಪಯಣವಾಗಿದೆ” ಎಂದರು.

“ಕಿಯೋನಿಕ್ಸ್ ಸಂಸ್ಥೆಯ ಪ್ರಥಮ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಬಾಳಿಗ ಅವರ ಪುತ್ಥಳಿಯನ್ನು ನಿರ್ಮಿಸಿರುವುದು ಸಂತೋಷದ ವಿಚಾರ.

# 24 ರಾಜ್ಯಗಳಲ್ಲಿ ಭಾರೀ ಮಳೆ ನಿರೀಕ್ಷೆ

ನವದೆಹಲಿ, ಸೆ.22–ದೇಶಾದ್ಯಂತ ದಕ್ಷಿಣ–ಪಶ್ಚಿಮ ಮುಂಗಾರು (ನೈರುತ್ಯ ಮಾನ್ಸೂನ್) ನಿರ್ಗಮನ ಪ್ರಕ್ರಿಯೆ ಆರಂಭವಾಗುವ ಬೆನ್ನಲ್ಲೇ ಹವಾಮಾನ ವೈಪರೀತ್ಯ ಉಂಟಾಗಿದ್ದು, ದೇಶದ ವಿವಿಧ ಭಾಗಗಳಲ್ಲಿ ಹವಾಮಾನ ವ್ಯವಸ್ಥೆಯು ದಿಢೀರ್ ಬದಲಾಗಿದೆ. ಮುಂಗಾರು ಮಾರುತಗಳು ನಿರ್ಗಮಿಸುವ ಮುನ್ನ ದೇಶದ ಸುಮಾರು 24 ರಾಜ್ಯಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಗುಡುಗು, ಮಿಂಚು ಹಾಗೂ ಬಲವಾದ ಗಾಳಿ ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.



ಹವಾಮಾನ ಇಲಾಖೆಯ ವರದಿಯ ಪ್ರಕಾರ, ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತ ಮತ್ತು ವಿವಿಧ ಪ್ರದೇಶಗಳಲ್ಲಿ ಸಕ್ರಿಯವಾಗಿರುವ ಸೈಕ್ಲೋನಿಕ್ ಸರ್ಕ್ಯುಲೇಶನ್ ಪರಿಣಾಮವಾಗಿ ಈ ಮಳೆ ವಾತಾವರಣ ನಿರ್ಮಾಣವಾಗಿದೆ. ಪಶ್ಚಿಮ ರಾಜಸ್ಥಾನದ ಕಡೆಯಿಂದ ಮುಂಗಾರು ವಾಪಸಾತಿ ಪ್ರಕ್ರಿಯೆ ಪ್ರಗತಿಯಲ್ಲಿದ್ದರೂ, ಪೂರ್ವ ಮತ್ತು ದಕ್ಷಿಣ ಭಾರತದ ಕರಾವಳಿ ಭಾಗಗಳಲ್ಲಿ ತೀವ್ರವಾದ ಮಳೆ ಪ್ರಭಾವ ಮುಂದುವರಿಯಲಿದೆ. ಕರಾವಳಿ ತೀರದ ಪ್ರದೇಶಗಳಲ್ಲಿ ಗಂಟೆಗೆ 40 ರಿಂದ 60 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯಿದ್ದು, ಕಡಲತೀರದ ಜನರಿಗೆ ಹಾಗೂ ಮೀನುಗಾರರಿಗೆ ಜಾಗರೂಕರಾಗಿರಲು ಸೂಚಿಸಲಾಗಿದೆ.

ಉತ್ತರ ಪ್ರದೇಶ, ಬಿಹಾರ, ಜಾರ್ಖಂಡ್, ಒಡಿಶಾ, ಪಶ್ಚಿಮ ಬಂಗಾಳ, ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢ ಸೇರಿದಂತೆ ಮಧ್ಯ ಹಾಗೂ ಪೂರ್ವ ಭಾರತದ ರಾಜ್ಯಗಳಲ್ಲಿ ವ್ಯಾಪಕ ಮಳೆಯಾಗುವ ಮುನ್ಸೂಚನೆ ಇದೆ. ಅಷ್ಟೇ ಅಲ್ಲದೆ, ಈಶಾನ್ಯ ರಾಜ್ಯಗಳಾದ ಅಸ್ಸಾಂ, ಮೇಘಾಲಯ, ಅರುಣಾಚಲ ಪ್ರದೇಶ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರಾ ಮತ್ತು ಸಿಕ್ಕಿಂಗಳಲ್ಲಿಯೂ ಭಾರೀ ಮಳೆಯಾಗುವ ಎಚ್ಚರಿಕೆ ನೀಡಲಾಗಿದೆ. ದಕ್ಷಿಣ ಭಾರತದ ಕರ್ನಾಟಕ, ಕೇರಳ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಹಾಗೆಯೇ ಗುಜರಾತ್, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

ಹಿಮಾಚಲ ಪ್ರದೇಶ, ಉತ್ತರಾಖಂಡ ಹಾಗೂ ಜಮ್ಮು–ಕಾಶ್ಮೀರ ಮುಂತಾದ ಗುಡ್ಡಗಾಡು ಪ್ರದೇಶಗಳಲ್ಲಿಯೂ ಪಾಶ್ಚಾತ್ಯ ದಿಕ್ಚ್ಯುತಿ ಸಕ್ರಿಯವಾಗಿರುವುದರಿಂದ ಮಳೆಯ ಜೊತೆಗೆ ತಾಪಮಾನ ಕುಸಿಯುವ ಸಾಧ್ಯತೆಯಿದೆ. ದೆಹಲಿ–ಎನ್‌ಸಿಆರ್ ವ್ಯಾಪ್ತಿಯಲ್ಲಿ ಆಕಾಶವು ಭಾಗಶಃ ಮೋಡದಿಂದ ಕೂಡಿದ್ದು, ಕೆಲವು ಪ್ರದೇಶಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಬಹುದು ಎಂದು ಅಂದಾಜಿಸಲಾಗಿದೆ. ಮುಂಗಾರು ಅವಧಿಯ ಕೊನೆಯಲ್ಲಿ ಎದುರಾಗಿರುವ ಈ ದಿಢೀರ್ ಮಳೆಯಿಂದಾಗಿ ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಅಪಾಯವಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಇಲಾಖೆ ಸಲಹೆ ನೀಡಿದೆ.

# ಅಕ್ಕಿ ದರ ದುಬಾರಿ: ಗ್ರಾಹಕರು ಕಂಗಾಲು

ಬೆಂಗಳೂರು, ಸೆ. 22–ರಾಜ್ಯದಲ್ಲಿ ಮುಂಗಾರು ಮಳೆಯ ಕೊರತೆಯಿಂದಾಗಿ ಭತ್ತದ ಇಳುವರಿಯಲ್ಲಿ ತೀವ್ರ ಕುಸಿತ ಕಂಡಿದ್ದು, ಮಾರುಕಟ್ಟೆಯಲ್ಲಿ ಭತ್ತದ ಅಭಾವ ಸೃಷ್ಟಿಯಾಗಿದೆ. ಇದರ ನೇರ ಪರಿಣಾಮವಾಗಿ ರಾಜ್ಯಾದ್ಯಂತ ಅಕ್ಕಿ ದರದಲ್ಲಿ ಭಾರಿ ಏರಿಕೆಯಾಗಿದ್ದು, ಸಾಮಾನ್ಯ ಜನರ ಜೇಬಿಗೆ ದೊಡ್ಡ ಹೊಡೆತ ಬಿದ್ದಿದೆ. ಕೇವಲ ಮೂರು ತಿಂಗಳ ಅವಧಿಯಲ್ಲಿ ಸತತ ಮೂರನೇ ಬಾರಿಗೆ ಅಕ್ಕಿ ಬೆಲೆ ಏರಿಕೆಯಾಗುತ್ತಿರುವುದು ಗ್ರಾಹಕರನ್ನು ಚಿಂತೆಗೀಡುಮಾಡಿದೆ.

ಬೆಲೆ ಏರಿಕೆಗೆ ಪ್ರಮುಖ ಕಾರಣಗಳು:

ರಾಜ್ಯದ ಪ್ರಮುಖ ಕೃಷಿ ಪ್ರದೇಶಗಳಲ್ಲಿ ಕನಿಷ್ಠ ಮಳೆಯಾಗಿದ್ದು ಹಾಗೂ ಜಲಾಶಯಗಳಲ್ಲಿ ನೀರಿನ ಮಟ್ಟ ಕಡಿಮೆಯಾಗಿರುವುದು ಭತ್ತದ ಬೆಳೆಯ ಮೇಲೆ ತೀವ್ರ ಪರಿಣಾಮ ಬೀರಿದೆ. ರೈತರಿಗೆ ಅಗತ್ಯ ಪ್ರಮಾಣದಲ್ಲಿ ನೀರು ದೊರೆಯದೆ ಇಳುವರಿ ಕುಸಿದಿದೆ. ಇದರೊಂದಿಗೆ ರೈಸ್ ಮಿಲ್‌ಗಳಲ್ಲಿ ಹಳೆಯ ಭತ್ತದ ದಾಸ್ತಾನು ಖಾಲಿಯಾಗುತ್ತ ಬಂದಿರುವುದು ಹಾಗೂ ಸಾಗಾಣಿಕೆ ವೆಚ್ಚ (ರವಾಣೆ ವೆಚ್ಚ) ಗಣನೀಯವಾಗಿ ಹೆಚ್ಚಿರುವುದು ಮಾರುಕಟ್ಟೆಯಲ್ಲಿ ದರ ಏರಿಕೆಗೆ ಪ್ರಮುಖ ಕಾರಣವಾಗಿದೆ. ಮತ್ತೊಂದೆಡೆ, ಭಾರತೀಯ ಅಕ್ಕಿಗೆ ವಿದೇಶಿ ಮಾರುಕಟ್ಟೆಗಳಲ್ಲಿ ಭಾರಿ ಬೇಡಿಕೆ ಬಂದಿದ್ದು, ಹೆಚ್ಚಿನ ಪ್ರಮಾಣದಲ್ಲಿ ಅಕ್ಕಿ ರಫ್ತಾಗುತ್ತಿರುವುದರಿಂದ ಸ್ಥಳೀಯ ಮಾರುಕಟ್ಟೆಯಲ್ಲಿ ಪೂರೈಕೆ ಕೊರತೆ ಎದುರಾಗಿದೆ ಎಂದು ವ್ಯಾಪಾರಿಗಳು ತಿಳಿಸಿದ್ದಾರೆ.

**ಯಾವ ಯಾವ ಅಕ್ಕಿ ದರ ಎಷ್ಟಾಗಿದೆ?**

ಸಗಟು ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಾಲ್ ಅಕ್ಕಿಯ ಬೆಲೆಯಲ್ಲಿ ಸರಾಸರಿ 1,000 ರೂಪಾಯಿಯಷ್ಟು ಏರಿಕೆಯಾಗಿದೆ. ಮಾರುಕಟ್ಟೆಯಲ್ಲಿ ವಿಭಿನ್ನ ತಳಿಯ ಅಕ್ಕಿಗಳ ಪ್ರಸ್ತುತ ಸಗಟು ದರ ಹೀಗಿದೆ:

- **ಹಳೆ ಸೋನಾ ಮಸೂರಿ: ಕ್ವಿಂಟಾಲ್‌ಗೆ –6,600**
- **ಕಾವೇರಿ ಸೋನಾ: ಕ್ವಿಂಟಾಲ್‌ಗೆ –6,250**
- **ಆರ್.ಎನ್.ಆರ್ (ಖಓಖ) ಅಕ್ಕಿ: ಕ್ವಿಂಟಾಲ್‌ಗೆ –6,450**
- **ಕುಚ್ಚಲಕ್ಕಿ (Boiled Rice): ಕ್ವಿಂಟಾಲ್‌ಗೆ –6,100**
- **ಕೊಲ್ಲಂ ಅಕ್ಕಿ (Kollam): ಕ್ವಿಂಟಾಲ್‌ಗೆ ಅತ್ಯಂತ ದುಬಾರಿಯಾದ –7,500**
- **ತರಿ ಅಕ್ಕಿ/ನುಚ್ಚು (Broken Rice): ಹಳೆ ಸೋನಾ ನುಚ್ಚು ಕ್ವಿಂಟಾಲ್‌ಗೆ –3,600 ಹಾಗೂ ಹೊಸ ಸೋನಾ ನುಚ್ಚು –3,100 ರಷ್ಟಿದೆ.**

ಚಿಲ್ಲರೆ ಮಾರುಕಟ್ಟೆ ಹಾಗೂ ಚೀಲಗಳ ಬೆಲೆಯಲ್ಲಿ ಹೆಚ್ಚಳ:

ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಪ್ರಮುಖ ನಗರಗಳ ಚಿಲ್ಲರೆ ಮಾರುಕಟ್ಟೆಯಲ್ಲಿ ಸಗಟು ದರಕ್ಕಿಂತ ಹೆಚ್ಚಿನ ದರದಲ್ಲಿ ಅಕ್ಕಿ ಮಾರಾಟವಾಗುತ್ತಿದೆ. ಚಿಲ್ಲರೆ ಮಾರಾಟದಲ್ಲಿ ಪ್ರತಿ ಕೆಜಿ ಅಕ್ಕಿ ಬೆಲೆಯಲ್ಲಿ 5 ರಿಂದ 20 ರವರೆಗೆ ಏರಿಕೆಯಾಗಿದೆ. ಅಕ್ಕಿ ಚೀಲಗಳನ್ನು ಖರೀದಿಸುವ ಗ್ರಾಹಕರಿಗೆ 25/26 ಕೆಜಿಯ ಸಾಧಾರಣ ಅಕ್ಕಿ ಚೀಲದ ಮೇಲೆ 200 ಹಾಗೂ ಪ್ರೀಮಿಯಂ ತಳಿಯ ಅಕ್ಕಿ ಚೀಲದ ಮೇಲೆ 250 ರಿಂದ 300 ರವರೆಗೆ ಹೆಚ್ಚುವರಿ ಹಣ ತೆರಬೇಕಾಗಿದೆ.

ಮುಂದಿನ ದಿನಗಳಲ್ಲಿ ಮತ್ತಷ್ಟು ಬೆಲೆ ಏರಿಕೆ ಮುನ್ನೆಚ್ಚರಿಕೆ:



ಪ್ರಸ್ತುತ ಮಾರುಕಟ್ಟೆಗೆ ಆಗಮಿಸುತ್ತಿರುವ ಭತ್ತದ ಪ್ರಮಾಣ ತೀರಾ ಕಡಿಮೆಯಿದೆ. ರೈಸ್ ಮಿಲ್ ಮಾಲೀಕರು ಮತ್ತು ವರ್ತಕರು ನೆರೆ ರಾಜ್ಯಗಳಿಂದ ಹೆಚ್ಚಿನ ದರ ನೀಡಿ ಭತ್ತವನ್ನು ಆಮದು ಮಾಡಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಕ್ಟೋಬರ್ ತಿಂಗಳ ವೇಳೆಗೆ ಮಳೆಯ ಪರಿಸ್ಥಿತಿ ಸುಧಾರಿಸದೆ ಮತ್ತು ಭತ್ತದ ಆವಕ ಹೆಚ್ಚಾಗದಿದ್ದರೆ, ಅಕ್ಕಿ ದರದಲ್ಲಿ ಇನ್ನೂ ಶೇಕಡಾ 10 ರಿಂದ 15 ರಷ್ಟು ಏರಿಕೆಯಾಗುವ ಸಾಧ್ಯತೆಯಿದೆ ಎಂದು ವರ್ತಕರ ಸಂಘ ಎಚ್ಚರಿಸಿದೆ. ನಿರಂತರ ಬೆಲೆ ಏರಿಕೆಯಿಂದಾಗಿ ಕಂಗಾಲಾಗಿರುವ ಸಾರ್ವಜನಿಕರು ಹಾಗೂ ಮಧ್ಯಮ ವರ್ಗದ ಕುಟುಂಬಗಳು, ಬೆಲೆ ನಿಯಂತ್ರಣಕ್ಕೆ ಸರ್ಕಾರ ತಕ್ಷಣವೇ ಮಧ್ಯಪ್ರವೇಶಿಸಿ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.



ಒಕ್ಕಲಿಗರ ಸಂಸ್ಕೃತಿ, ಇತಿಹಾಸ ಅಧ್ಯಯನ ಪೀಠ ಪದಾಧಿಕಾರಿಗಳು , ಡಾ. ತಲಕಾಡು ಚಿಕ್ಕ ರಂಗೇಗೌಡ, ಸಂಶೋಧಕರು, ರಂಗ ನಿರ್ದೇಶಕ ಕೆಎಚ್ ಕುಮಾರ್, ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್ ಎನ್ ಮುಕುಂದರಾಜು, ನಾಡಪ್ರಭು ನಾಗರಾಜು, ಉಮಾ, ಭಾರತೀ ಜೈರಾಮ್, ರೂಪ ಸುರೇಶ್, ದೇವರಾಜ್ ಹಾಗೂ ಪುಟ್ಟೇಗೌಡ ಇವರುಗಳು ಗಂಗರ ಸಂಸ್ಕೃತಿ ಉತ್ಸವವನ್ನು ಏರ್ಪಡಿಸುವ ಬಗ್ಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಕೆಎಂವಸುಂದರವರನ್ನು ಭೇಟಿ ಮಾಡಿ ಚರ್ಚಿಸಿ ಗೌರವಿಸಲಾಯಿತು

ರೋಟರಿ ಬೆಂಗಳೂರು ಮಹಾಲಕ್ಷ್ಮಿ ಸೆಂಟರ್ ಮತ್ತು ರೋಟರಿ ಬೆಂಗಳೂರು ಹಲಸೂರು ಜಂಟಿಯಾಗಿ ಮೂರು ಸರ್ಕಾರಿ ಶಾಲೆಯ ಶಿಕ್ಷಕರುಗಳಾದ ಸುಜಾತಮ್ಮ, ಗೀತಾರಾಣಿ ಮತ್ತು ರಾಮಕೃಷ್ಣ.ಪಿ. ಅವರಿಗೆ ರಾಷ್ಟ್ರೀಯ ಬಿಲ್ಡರ್ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ರೋಟರಿ ಪದಾಧಿಕಾರಿಗಳು ಇದ್ದಾರೆ.



# ಸೆಟ್‌ಬ್ಯಾಕ್ ಬಿಡದ ಕಟ್ಟಡಗಳಿಗೆ ನೋಟೀಸ್; ತೆರವಿಗೆ ಮಹೇಶ್ವರ್ ರಾವ್ ಸೂಚನೆ

ಬೆಂಗಳೂರು, ಸೆ.22– ಕಟ್ಟಡ ನಿರ್ಮಾಣದ ವೇಳೆ ಕಡ್ಡಾಯವಾಗಿ ಬಿಡಬೇಕಾದ ಸೆಟ್‌ಬ್ಯಾಕ್ ಜಾಗವನ್ನು ಬಿಡದೆ ಕಾಮಗಾರಿ ನಡೆಸುತ್ತಿರುವ ಕಟ್ಟಡಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಜಿಬಿಎ ಮುಂದಾಗಿದೆ. ದೊಮ್ಮಲೂರು ಬಳಿ ಸೆಟ್‌ಬ್ಯಾಕ್ ಬಿಡದೆ ನಿರ್ಮಾಣ ಹಂತದಲ್ಲಿರುವ ಕಟ್ಟಡಕ್ಕೆ ಕೂಡಲೇ ನೋಟೀಸ್ ಜಾರಿಗೊಳಿಸಿ, ನಿಯಮಬಾಹಿರ ನಿರ್ಮಾಣ ತೆರವುಗೊಳಿಸುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಅಧಿಕಾರಿಗಳಿಗೆ ಈ ಸೂಚನೆ ನೀಡಿದರು.

ದೊಮ್ಮಲೂರಿನಲ್ಲಿ ಹಳೆಯ ಕಟ್ಟಡವನ್ನು ನೆಲಸಮಗೊಳಿಸಿ ಹೊಸ ಕಟ್ಟಡ ನಿರ್ಮಿಸಲಾಗುತ್ತಿದ್ದು, ಕಟ್ಟಡದ ನಾಲ್ಕೂ ಬದಿಗಳಲ್ಲೂ ಕಡ್ಡಾಯ ಸೆಟ್‌ಬ್ಯಾಕ್ ಬಿಡದೆ ಕಾಮಗಾರಿ ನಡೆಸುತ್ತಿರುವುದು ಪರಿಶೀಲನೆ ವೇಳೆ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಕಟ್ಟಡ ಮಾಲೀಕರಿಗೆ ತಕ್ಷಣ ನೋಟೀಸ್ ನೀಡಿ, ನಿಯಮಾನುಸಾರ ತೆರವು ಕಾರ್ಯಾಚರಣೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಅದೇ ಪ್ರದೇಶದಲ್ಲಿ ಸೆಟ್‌ಬ್ಯಾಕ್ ಬಿಡದೆ ನಿರ್ಮಿಸಿರುವ ವಾಣಿಜ್ಯ ಕಟ್ಟಡವನ್ನೂ ಪರಿಶೀಲಿಸಿದ ಅವರು, ಕಟ್ಟಡಕ್ಕೆ ನೀಡಿರುವ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವಂತೆ ಸೂಚಿಸಿದರು.

**ಪಾದಚಾರಿ ಮಾರ್ಗ ಅಭಿವೃದ್ಧಿಗೆ ಸೂಚನೆ**

ದೊಮ್ಮಲೂರು ಮುಖ್ಯರಸ್ತೆಯ ಬದಿಯಲ್ಲಿ ಪಾದಚಾರಿ ಮಾರ್ಗ ಸಾಕಷ್ಟು ವಿಸ್ತಾರವಾಗಿರುವುದನ್ನು ಗಮನಿಸಿದ ಮಹೇಶ್ವರ್ ರಾವ್, ಇಲ್ಲಿ ವೆಂಡಿಂಗ್ ಜೋನ್ ಅಥವಾ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲು ಸಾಧ್ಯವೇ ಎಂಬುದನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪಾದಚಾರಿ ಮಾರ್ಗದಲ್ಲಿರುವ ಗೋಡೆಗಳನ್ನು ತೆರವುಗೊಳಿಸಿ ಜನರು ಸುಗಮವಾಗಿ ಸಂಚರಿಸಲು ಅನುಕೂಲವಾಗುವಂತೆ ಫುಟ್‌ಪಾತ್ ಅಭಿವೃದ್ಧಿಪಡಿಸುವಂತೆಯೂ ನಿರ್ದೇಶನ ನೀಡಿದರು.

ಇಂದಿರಾನಗರ 80 ಅಡಿ ರಸ್ತೆಯ ದೊಮ್ಮಲೂರು ಜಂಕ್ಷನ್ ಅಭಿವೃದ್ಧಿಪಡಿಸುವ ಕಾರ್ಯ ಕೈಗೊಳ್ಳಬೇಕು. ರಸ್ತೆ ದುರಸ್ತಿ ಕಾರ್ಯವನ್ನು ಗುಣಮಟ್ಟದಿಂದ ನಡೆಸುವಂತೆ ಸೂಚಿಸಿದರು. ಸಾಯಿಬಾಬಾ ಟೆಂಪಲ್ ರಸ್ತೆ ಹದಗೆಟ್ಟಿರುವುದನ್ನು ಗಮನಿಸಿ, ತಕ್ಷಣ ಡಾಂಬರೀಕರಣ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ದೊಮ್ಮಲೂರು ಭಾಗದ ಹಲವು ರಸ್ತೆಗಳಲ್ಲಿ ಜಲಮಂಡಳಿಯಿಂದ ಸ್ಯಾನಿಟರಿ ಲೈನ್ ಕಾಮಗಾರಿ ಪೂರ್ಣಗೊಂಡಿದ್ದರೂ ರಸ್ತೆ ಪುನಶ್ಚೇತನಗೊಳಿಸದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಕಾಮಗಾರಿ ಪೂರ್ಣಗೊಂಡಿರುವ ರಸ್ತೆಗಳ ದುರಸ್ತಿ ಹಾಗೂ ಪುನಶ್ಚೇತನ ಕಾರ್ಯವನ್ನು ಕೂಡಲೇ ಕೈಗೊಳ್ಳುವಂತೆ ಸೂಚಿಸಿದರು. ಮಳೆ ಬಂದಾಗ ರಸ್ತೆಯ ಮೇಲೆ ಸಂಗ್ರಹವಾಗುವ ನೀರು ಚರಂಡಿಗೆ ಸರಾಗವಾಗಿ ಹರಿದುಹೋಗಲು ಅಗತ್ಯ ವ್ಯವಸ್ಥೆ ಕಲ್ಪಿಸುವಂತೆ ನಿರ್ದೇಶನ ನೀಡಿದರು.

**ಆಸ್ಪತ್ರೆಯಲ್ಲಿ ಸಿಸಿ ಕ್ಯಾಮೆರಾ**

ಕೋಡಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೂ ಭೇಟಿ ನೀಡಿದ ಮುಖ್ಯ ಆಯುಕ್ತರು, ಬಯೋಮೆಡಿಕಲ್ ತ್ಯಾಜ್ಯ ಸಂಗ್ರಹಿಸಲು ಪ್ರತ್ಯೇಕ ಕೊಠಡಿ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು. ಆಸ್ಪತ್ರೆಯ ಭದ್ರತೆಯ ದೃಷ್ಟಿಯಿಂದ ಸಿಸಿ ಕ್ಯಾಮೆರಾಗಳನ್ನು ಅಳವಡಿಸುವಂತೆಯೂ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನವೆಂಬರ್ ಅಂತ್ಯಕ್ಕೆ ವಿಂಡ್ ಟನಲ್ ಕೆಳಸೇತುವೆ

ವಿಂಡ್ ಟನಲ್ ಕೆಳಸೇತುವೆ ಕಾಮಗಾರಿಯನ್ನೂ ಪರಿಶೀಲಿಸಿದ ಅವರು, ಕಾಮಗಾರಿ ಶೇ.80ರಷ್ಟು ಪೂರ್ಣಗೊಂಡಿರುವುದನ್ನು ಗಮನಿಸಿದರು. ಬಾಕಿ ಇರುವ ಬಾಕ್ಸ್ ಪುಶಿಂಗ್ ಸೇರಿದಂತೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ, ನವೆಂಬರ್ ಅಂತ್ಯದೊಳಗೆ ಕೆಳಸೇತುವೆಯನ್ನು ಸಂಚಾರಕ್ಕೆ ಮುಕ್ತಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ನಗರ ಪಾಲಿಕೆ ಆಯುಕ್ತ ಜಿ. ಜಗದೀಶ್, ಅಪರ ಆಯುಕ್ತ ವೆಂಕಟಾಚಲಪತಿ, ಮುಖ್ಯ ಅಭಿಯಂತರರಾದ ಹೇಮಲತಾ, ಕಾರ್ಯಪಾಲಕ ಅಭಿಯಂತರರು ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾರು ಕಂದಕಕ್ಕೆ ಉರುಳಿ ನಾಲ್ವರ ಸಾವು



ಕುಲ್ಲು, ಸೆ.22–ಹಿಮಾಚಲ ಪ್ರದೇಶದ ಕುಲ್ಲು ಜಿಲ್ಲೆಯ ಅನಿ ಉಪವಿಭಾಗದಲ್ಲಿ ಸೋಮವಾರ ತಡರಾತ್ರಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ನಾಲ್ವರು ಸ್ಥಳದಲ್ಲೇ ಮೃತಪಟ್ಟು, ಒಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ರಾಷ್ಟ್ರೀಯ ಹೆದ್ದಾರಿ–305 ರ ಹರಿಪುರ–ನಾಗನ್ ಪ್ರದೇಶದ ಬಳಿ ಮಂಗಳವಾರ ಬೆಳಗಿನ ಜಾವ ಸುಮಾರು 3:30 ರ ವೇಳೆಗೆ ಚಾಲಕನ ನಿಯಂತ್ರಣ ತಪ್ಪಿದ ಕಾರು ರಸ್ತೆಯಿಂದ ಸುಮಾರು 200 ಮೀಟ–ರ್ ಆಳದ ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಈ ದುರಂತ ಸಂಭವಿಸಿದೆ.

ಕಾರಿನಲ್ಲಿದ್ದವರೆಲ್ಲರೂ ಕುಮಾರ್‌ಸೈನ್‌ನ ಬರಗಾಂವ್‌ನಲ್ಲಿ ನಡೆದ ಮದುವೆ ಸಮಾರಂಭದಲ್ಲಿ ಪಾಲ್ಗೊಂಡು ಸ್ವಗ್ರಾಮಕ್ಕೆ ಹಿಂತಿರುಗುತ್ತಿದ್ದಾಗ ಈ ದುರಂತ ಸಂಭವಿಸಿದೆ. ಅಪಘಾತಕ್ಕೀಡಾದ ಹುಂಡೈ ಕಾರಿನಲ್ಲಿ ಒಟ್ಟು ಐದು ಜನರಿದ್ದು, ಡಿಕ್ಕಿಯ ರಭಸಕ್ಕೆ ನಾಲ್ವರು ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ. ಮೃತರನ್ನು ಕುಲ್ಲು ಜಿಲ್ಲೆಯ ಅನಿ ತಾಲೂಕಿನ ಕರಣ ಅಂಚೆ ಕಚೇರಿ ವ್ಯಾಪ್ತಿಯ ಜಬೌನ್ ಗ್ರಾಮದ ನಿವಾಸಿಗಳಾದ ರಾಹುಲ್ ರಾಣಾ (25), ಬಾಲಕೃಷ್ಣ, ವಿಕಾಸ್ ಅಲಿಯಾಸ್ ವಿಕ್ಕಿ ಹಾಗೂ ಗುಂಜನ್ ಎಂದು ಗುರುತಿಸಲಾಗಿದೆ.

ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡ ಜಬೌನ್ ಗ್ರಾಮದ ಸುರೇಶ್ ಕುಮಾರ್ (29) ಅವರನ್ನು ತಕ್ಷಣವೇ ಅನಿ ಸಿವಿಲ್ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ನೀಡಲಾಯಿತು. ಬಳಿಕ ಅವರ ಪರಿಸ್ಥಿತಿ ಚಿಂತಾಜನಕವಾಗಿದ್ದರಿಂದ ಹೆಚ್ಚಿನ ಚಿಕಿತ್ಸೆಗಾಗಿ ರಾಂಪುರ ಆಸ್ಪತ್ರೆಗೆ ರವಾನಿಸಲಾಗಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಅನಿ ಪೊಲೀಸ್ ಠಾಣೆ ಸಿಬ್ಬಂದಿ, ಅಗ್ನಿಶಾಮಕ ದಳ, ಸ್ಥಳೀಯ ಪಂಚಾಯತ್ ಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಸ್ಥಳಕ್ಕಾಗಮಿಸಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ನಡೆಸಿದರು.

ಸ್ಥಳೀಯ ಶಾಸಕ ಲೋಕೇಂದ್ರ ಕುಮಾರ್ ಅವರೂ ಸಹ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಹಾರ ಕಾರ್ಯಾಚರಣೆಗೆ ನೆರವಾದರು. ಪೊಲೀಸರು ಮೃತದೇಹಗಳನ್ನು ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದು, ವಾಹನವು ರಸ್ತೆಯಿಂದ ಜಾರಲು ನಿಜವಾದ ಕಾರಣ ಏನೆಂಬುದರ ಕುರಿತು ತನಿಖೆ ಕೈಗೊಂಡಿದ್ದಾರೆ. ಈ ದುರಂತದಿಂದಾಗಿ ಜಬೌನ್–ಕರಣ ಪ್ರದೇಶ ಸೇರಿದಂತೆ ಇಡೀ ಅನಿ ಉಪವಿಭಾಗದಲ್ಲಿ ಶೋಕದ ವಾತಾವರಣ ಹರಡಿದೆ.

# ಆಸ್ಪತ್ರೆಗಳಿಗೆ 10 ಡಯಾಲಿಸಿಸ್ ಯಂತ್ರಗಳ ಕೊಡುಗೆ

ಬೆಂಗಳೂರು, ಸೆ.22: ಎಸ್‌ಬಿಐ ಫಂಡ್ಸ್ ಮ್ಯಾನೇಜ್‌ಮೆಂಟ್ ಲಿಮಿಟೆಡ್ (ಎಸ್‌ಬಿಐಎಫ್‌ಎಂಎಲ್) ತನ್ನ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ಕಾರ್ಯಕ್ರಮದಡಿ ತುಮಕೂರಿನ ಎರಡು ಪ್ರಮುಖ ಆಸ್ಪತ್ರೆಗಳಿಗೆ 10 ಆಧುನಿಕ ಹೀಮೋಡಯಾಲಿಸಿಸ್ ಯಂತ್ರಗಳನ್ನು ದೇಣಿಗೆಯಾಗಿ ನೀಡಿದೆ. ರೋಟರಿ ಬೆಂಗಳೂರು ಇಂದಿರಾನಗರದ ಮೂಲಕ ಈ ಉಪಕರಣಗಳನ್ನು ಒದಗಿಸಲಾಗಿದ್ದು, ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಹಾಗೂ ಟಿಎಚ್‌ಎಸ್ ಸೂಪರ್‌ಸ್ಪೆಷಾಲಿಟಿ ಆಸ್ಪತ್ರೆಗಳಿಗೆ ತಲಾ ಐದು ಯಂತ್ರಗಳನ್ನು ನೀಡಲಾಗಿದೆ. ಆರ್ಥಿಕವಾಗಿ ಹಿಂದುಳಿದ ಹಾಗೂ ಡಯಾಲಿಸಿಸ್ ಚಿಕಿತ್ಸೆಯ ಅಗತ್ಯವಿರುವ ರೋಗಿಗಳಿಗೆ ಇದರಿಂದ ಹೆಚ್ಚಿನ ನೆರವು ದೊರೆಯಲಿದೆ.



ಎಸ್‌ಬಿಐಎಫ್‌ಎಂಎಲ್ ದೇಶದ ವಿವಿಧ ಭಾಗಗಳಲ್ಲಿ ಎನ್‌ಜಿಒಗಳ ಸಹಯೋಗದೊಂದಿಗೆ ಒಟ್ಟು 30 ಹೀಮೋಡಯಾಲಿಸಿಸ್ ಯಂತ್ರಗಳನ್ನು ದೇಣಿಗೆಯಾಗಿ ನೀಡುತ್ತಿದೆ. ಕರ್ನಾಟಕಕ್ಕೆ 10, ಮಧ್ಯಪ್ರದೇಶಕ್ಕೆ 8 ಹಾಗೂ ತಮಿಳುನಾಡಿಗೆ 12 ಯಂತ್ರಗಳನ್ನು ಹಂಚಿಕೆ ಮಾಡಲಾಗಿದೆ. ಮಧ್ಯಪ್ರದೇಶದಲ್ಲಿ ವಿದಿಶಾದ ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಛತ್ತರ್‌ಪುರ ಹಾಗೂ ದಮೋಹ್ ಸರ್ಕಾರಿ ಜಿಲ್ಲಾ ಆಸ್ಪತ್ರೆಗಳಿಗೆ ಯಂತ್ರಗಳನ್ನು ಒದಗಿಸಲಾಗುತ್ತಿದೆ. ತಮಿಳುನಾಡಿನಲ್ಲಿ ರಾಮನಾಥಪುರಂ ಸರ್ಕಾರಿ ಆಸ್ಪತ್ರೆ, ವಿರುದುನಗರದ ಮದು ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆ ಮತ್ತು ಪನ್ರುತಿ ಸರ್ಕಾರಿ ಆಸ್ಪತ್ರೆಗೆ ನೆರವು ನೀಡಲಾಗುತ್ತಿದೆ.

ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಹೊಸ ಐದು ಯಂತ್ರಗಳ ಸೇರ್ಪಡೆಯೊಂದಿಗೆ ಒಟ್ಟು 18 ಹೀಮೋಡಯಾಲಿಸಿಸ್ ಯಂತ್ರಗಳು ಲಭ್ಯವಾಗಿವೆ. ಆಸ್ಪತ್ರೆಯಲ್ಲಿ ಮೂರು ಪಾಳಿಗಳಲ್ಲಿ ಡಯಾಲಿಸಿಸ್ ಸೇವೆ ನೀಡಲಾಗುತ್ತಿದ್ದು, ದಿನಕ್ಕೆ ಸುಮಾರು 54 ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಡಯಾಲಿಸಿಸ್ ಅಗತ್ಯವಿರುವ ರೋಗಿಯೊಬ್ಬರಿಗೆ ಸಾಮಾನ್ಯವಾಗಿ ವಾರಕ್ಕೆ ಮೂರು ಬಾರಿ ಚಿಕಿತ್ಸೆ ಅಗತ್ಯವಾಗುತ್ತದೆ. ಪ್ರತಿ ಡಯಾಲಿಸಿಸ್ ಅವಧಿ ಸುಮಾರು ನಾಲ್ಕು ಗಂಟೆಗಳದ್ದಾಗಿದ್ದು, ದೀರ್ಘಕಾಲದ ಮೂತ್ರಪಿಂಡ ಕಾಯಿಲೆ (ಸಿಕೆಡಿ) ಹೊಂದಿರುವವರಿಗೆ ದೀರ್ಘಾವಧಿಯಲ್ಲಿ ನಿರಂತರ ಡಯಾಲಿಸಿಸ್ ಅಗತ್ಯವಾಗಬಹುದು. ದೇಣಿಗೆಯಾಗಿ ನೀಡಿರುವ ಯಂತ್ರಗಳನ್ನು ಬಿಪಿಎಲ್, ಎಪಿಎಲ್ ಹಾಗೂ ಬಡ ಮತ್ತು ನಿರ್ಗತಿಕ ರೋಗಿಗಳ ಚಿಕಿತ್ಸೆಗೆ ಬಳಸಲಾಗುತ್ತದೆ. ಡಯಾಲಿಸಿಸ್ ಕೇಂದ್ರಗಳ ಸಾಮರ್ಥ್ಯ ಹೆಚ್ಚುವುದರಿಂದ ಚಿಕಿತ್ಸೆಗೆ ಕಾಯಬೇಕಾದ ರೋಗಿಗಳ ಸಂಖ್ಯೆಯನ್ನು ನಿರ್ವಹಿಸಲು ಹಾಗೂ ನಿಯಮಿತ ಚಿಕಿತ್ಸೆಯನ್ನು ಒದಗಿಸಲು ನೆರವಾಗಲಿದೆ.

ರೋಟರಿ ಬೆಂಗಳೂರು ಇಂದಿರಾನಗರದ ಅಧ್ಯಕ್ಷ ಗೋಪಿನಾಥ್ ನಾರಾಯಣನ್ ಅವರು ಡಯಾಲಿಸಿಸ್ ಸಾಮರ್ಥ್ಯ ಹೆಚ್ಚಿಸುವ ಪ್ರಯತ್ನಗಳಿಗೆ ಎಸ್‌ಬಿಐಎಫ್‌ಎಂಎಲ್ ನೀಡುತ್ತಿರುವ ಸಹಕಾರವನ್ನು ಸ್ವಾಗತಿಸಿದ್ದಾರೆ. ರೋಟರಿ ತುಮಕೂರು ಸೆಂಟ್ರಲ್ ಮತ್ತು ರೋಟರಿ ತುಮಕೂರು ಈಸ್ಟ್ ಸಂಸ್ಥೆಗಳು ಯೋಜನೆಯ ಅನುಷ್ಠಾನ ಮತ್ತು ಮೇಲ್ವಿಚಾರಣೆಯಲ್ಲಿ ಸಹಕರಿಸುತ್ತಿವೆ.

# ಭೀಕರ ಅಗ್ನಿ ದುರಂತ: ನವಜಾತ ಶಿಶು ಸಜೀವ ದಹನ

ಆದಿಲಾಬಾದ್, ಸೆ.22–ತೆಲಂಗಾಣದ ಆದಿಲಾಬಾದ್‌ನಲ್ಲಿರುವ ರಾಜೀವ್ ಗಾಂಧಿ ವೈದ್ಯಕೀಯ ವಿಜ್ಞಾನ ಸಂಸ್ಥೆ (ರಿಮ್ಸ್) ಆಸ್ಪತ್ರೆಯಲ್ಲಿ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಐದು ದಿನದ ನವಜಾತ ಶಿಶುವೊಂದು ದುರಂತವಾಗಿ ಕೊನೆಯುಸಿರೆಳೆದಿದೆ. ಆಸ್ಪತ್ರೆಯ ನವಜಾತ ಶಿಶುಗಳ ನಿಗಾ ಘಟಕದಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಈ ಬೆಂಕಿ ಕಾಣಿಸಿಕೊಂಡಿದೆ ಎಂದು ಶಂಕಿಸಲಾಗಿದೆ. ಘಟನೆ ನಡೆದ ತಕ್ಷಣವೇ ವಾರ್ಡ್‌ನಾದ್ಯಂತ ದಟ್ಟ ಹೊಗೆ ಆವರಿಸಿಕೊಂಡಿದ್ದರಿಂದ ಆಸ್ಪತ್ರೆಯ ಸಿಬ್ಬಂದಿ ಹಾಗೂ ರೋಗಿಗಳ ಸಂಬಂಧಿಕರಲ್ಲಿ ತೀವ್ರ ಆತಂಕ ಮತ್ತು ಗೊಂದಲದ ವಾತಾವರಣ ನಿರ್ಮಾಣವಾಯಿತು. ಪರಿಸ್ಥಿತಿಯನ್ನು ಗಮನಿಸಿದ ತಕ್ಷಣ ಕಾರ್ಯಾಚರಣೆಗೆ ಇಳಿದ ಆಸ್ಪತ್ರೆಯ ಸಿಬ್ಬಂದಿ ಮತ್ತು ರಕ್ಷಣಾ ತಂಡವು ವಾರ್ಡ್‌ನಲ್ಲಿದ್ದ ಇತರ ಹಲವಾರು ಶಿಶುಗಳನ್ನು ಸುರಕ್ಷಿತವಾಗಿ ಹೊರತೆಗೆದು ಬೇರೆ ವಾರ್ಡ್‌ಗಳಿಗೆ ಸ್ಥಳಾಂತರಿಸುವಲ್ಲಿ ಯಶಸ್ವಿಯಾದರು. ಆದರೆ, ದುರದೃಷ್ಟವಶಾತ್ ಈ ಬೆಂಕಿಯ ಕೆನ್ನಾಲಿಗೆಗೆ ಸಿಲುಕಿದ ಐದು ದಿನದ ಮಗು ತೀವ್ರವಾಗಿ ಗಾಯಗೊಂಡು ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆಯಿತು. ಘಟನಾ ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ ಬೆಂಕಿಯನ್ನು ಸಂಪೂರ್ಣವಾಗಿ ಹತೋಟಿಗೆ ತಂದಿದ್ದಾರೆ. ಈ ದುರಂತದ ಕುರಿತು ಸ್ಥಳೀಯ ಪೊಲೀಸರು ಹಾಗೂ ಆಸ್ಪತ್ರೆ ಆಡಳಿತ ಮಂಡಳಿಯು ಪ್ರಕರಣ ದಾಖಲಿಸಿಕೊಂಡಿದ್ದು, ಅಗ್ನಿ ಅವಘಡಕ್ಕೆ ನಿಖರ ಕಾರಣವೇನು ಎಂಬುದರ ಕುರಿತು ವಿಸ್ತೃತ ತನಿಖೆ ಆರಂಭಿಸಿದ್ದಾರೆ.

ಮಂಗಳವಾರ, ಸೆಪ್ಟೆಂಬರ್ 22, 2026




# ಜ್ವಾಲಾಮುಖಿಯ ರುದ್ರನರ್ತನ...

## ಆಗಸದೆತ್ತರಕ್ಕೆ ಚಿಮ್ಮಿದ ಲಾವಾ, ಜನರ ಪರದಾಟ...





### ♦ ಹಲವು ಜ್ವಾಲಾಮುಖಿ ಸಕ್ರಿಯ

ಜಾವಾ ದ್ವೀಪದ ಅತ್ಯಂತ ಎತ್ತರದ ಪರ್ವತವಾದ ಸೆಮೆರು 3,600 ಮೀ ಎತ್ತರವಿದ್ದು, 40,000 ಅಡಿ ಎತ್ತರದಲ್ಲಿ ಶನಿವಾರದಿಂದಲೇ ದಟ್ಟ ಹೊಗೆ, ದೂಳನ್ನು ಹೊರಸೂಸುತ್ತಿತ್ತು. ಸುಮೇರು ಇಂಡೋನೇಷ್ಯಾದ 130 ಸಕ್ರಿಯ ಜ್ವಾಲಾಮುಖಿಗಳಲ್ಲಿ ಒಂದು ಎಂದು ಗುರುತಿಸಿಕೊಂಡಿದೆ. ಕಳೆದ ಜನವರಿಯಲ್ಲಿ ಸೆಮೆರು ಪರ್ವತ ಸ್ಫೋಟಗೊಂಡಿತ್ತು. ಅದಕ್ಕೂ ಮುನ್ನ 2017 ಮತ್ತು 2019ರಲ್ಲಿ ಸ್ಫೋಟಗಳು ಸಂಭವಿಸಿದ್ದವು. ವರ್ಷಕ್ಕೆ ಎರಡು ಬಾರಿ ಸಿಡಿಯುವ ಈ ಪರ್ವತದಲ್ಲಿ ಇತ್ತೀಚೆಗೆ ವರ್ಷದಲ್ಲಿ ಹಲವು ಬಾರಿ ಜ್ವಾಲಾಮುಖಿ ಸ್ಫೋಟಗೊಳ್ಳುತ್ತಿದೆ. ಕನಿಷ್ಠವೆಂದರೂ ಎರಡು ಬಾರಿ ಅನಿಲ ಹಾಗೂ ಲಾವಾರಸ 800 ಮೀಟರ್‌ಗಳಷ್ಟು ದೂರ ಸಾಗಿ



ಸಮೀಪದ ನದಿ ನೀರಿಗೆ ಸೇರಿಕೊಂಡಿದೆ. ಈ ಅಗ್ನಿಪರ್ವತದಿಂದ ಐದು ಕಿಮೀ ದೂರ ಅಂತರ ಕಾಪಾಡಿಕೊಳ್ಳುವಂತೆ ಸಮೀಪದ ನಿವಾಸಿಗಳಿಗೆ ಸೂಚನೆ ನೀಡಲಾಗಿದೆ. ಜ್ವಾಲಾಮುಖಿ ಸ್ಫೋಟಗೊಂಡ ಬಳಿಕ ಭಾನುವಾರ ಇಂಡೋನೇಷ್ಯಾದ ಉತ್ತರ ಸುಲವೆಸಿ ಭಾಗದಲ್ಲಿ ಭೂಕಂಪ ಸಂಭವಿಸಿದೆ. ರಿಕ್ಟರ್ ಪಾಮಕದಲ್ಲಿ 6.2ರಷ್ಟು ತೀವ್ರತೆ ದಾಖಲಾಗಿದೆ.

ಇಂಡೋನೇಷ್ಯಾದ ಬೃಹತ್ ಸಜೀವ ಜ್ವಾಲಾಮುಖಿಗಳಲ್ಲಿ ಆಗರವನ್ನೇ ಹೊಂದಿದೆ. ನೂರಾರು ಸಜೀವ ಜ್ವಾಲಾಮುಖಿಗಳು ಆಗಾಗ ಸ್ಫೋಟಿಸುತ್ತಿದ್ದು ಈ ಭಾಗದಲ್ಲಿ ಬದುಕುವ ಮಂದಿ ಯಾವ ಕ್ಷಣದಲ್ಲಿ ಏನು ಎನ್ನುವ ಆತಂಕದಲ್ಲಿ ಹಿಡಿಜೀವ ಕೈಯಲ್ಲಿಡಿದು ಬದುಕುವ ಸ್ಥಿತಿ ನಿರ್ಮಾಣವಾಗಿದೆ. ಹೀಗಿದ್ದರೂ ಜನರು ಅದರ ಬಗ್ಗೆ ತಲೆ ಕೆಡಸಿಕೊಳ್ಳದೆ ನಿತ್ಯದ ಕಾಯಕದಲ್ಲಿ ನಿರತರಾಗಿದ್ದಾರೆ.

ಇಂಡೋನೇಷ್ಯಾ ಸುಮಾತ್ರದಲ್ಲಿ 121 ಸಕ್ರಿಯ ಜ್ವಾಲಾಮುಖಿಗಳನ್ನು ಹೊಂದಿದೆ. ಸೆಮೆರು ಪರ್ವತದಲ್ಲಿ ಆಗಾಗ ಸ್ಫೋಟ ಸಂಭವಿಸುತ್ತಿದೆ. ಜ್ವಾಲಾಮುಖಿಯ ಲಾವಾ, ಬಿಸಿ ಅನಿಲ ಮತ್ತು ಬೂದಿಯಿಂದಾಗಿ ಪ್ರತಿಭಾರೊಯೂ ಹತ್ತಾರು ಜನರು ಸಾವನ್ನಪ್ಪತ್ತಿದ್ದಾರೆ.

ಮೌಂಟ್ ಸೆಮೆರು ರಾಜಧಾನಿ ಜಕಾರ್ತಾದಿಂದ ಆಗ್ನೆಯಕ್ಕೆ 800 ಕಿಮೀ ದೂರದಲ್ಲಿದೆ. ಜಾವಾದಲ್ಲಿ ಅನೇಕ ಜ್ವಾಲಾಮುಖಿಗಳಿವೆ, ಅವು ಸಕ್ರಿಯವಾಗಿವೆ. ಆದರೆ ಮೌಂಟ್ ಸೆಮೆರು ಅತ್ಯಂತ ಅಪಾಯಕಾರಿ ಮತ್ತು ಅತಿ ಎತ್ತರದ ಜ್ವಾಲಾಮುಖಿಯಾಗಿದೆ. ಇಲ್ಲಿ ಬದುಕುವ ಮಂದಿಯ ಪಾಡು ಹೇಳತೀರದಾಗಿದೆ.

ಇಂಡೋನೇಷ್ಯಾದ ಸೆಮೆರು ಜ್ವಾಲಾಮುಖಿಯು ಅತ್ಯಂತ ಬಿಸಿ ಅನಿಲವನ್ನು ಮತ್ತು ಭಾರಿ ಪ್ರಮಾಣದ ಲಾವಾರಸ ಏಕಾಏಕಿ ಸ್ಫೋಟಿಸಿದೆ. ಇದರಿಂದ ಈ ಭಾಗದ ಜನರು ಸಮಸ್ಯೆಗೆ ಸಿಲಿಕಿದ್ದಾರೆ.ಹೀಗಿದ್ದರೂ ಅದನ್ನು ಲೆಕ್ಕಿಸದೆ ಮುನ್ನೆಚ್ಚರಿಕೆಯೊಂದಿಗೆ ನಿತ್ಯದ ಕೆಲಸದಲ್ಲಿ ತೊಡಗಿ-ಕೊಂಡಿದ್ದಾರೆ.

ಇಂಡೋನೇಷ್ಯಾದಲ್ಲಿ ನಡೆದ ಜ್ವಾಲಾಮುಖಿ ಸ್ಫೋಟದಲ್ಲಿ ನೂರಾರು ಬಲಿಯಾಗಿದ್ದಾರೆ-ಎಂದು ತಿಳಿದುಬಂದಿದೆ. ಜಾವಾ ದ್ವೀಪದ ಅತ್ಯಂತ ಎತ್ತರದ ಪರ್ವತವಾದ ಸೆಮೆರುನಲ್ಲಿ ಜ್ವಾಲಾಮುಖಿ ಸ್ಫೋಟಿಸಿದೆ. ಇದು ಇತ್ತೀಚಿನ ದಿನಗಳಲ್ಲಿ ನಡೆದ ಅತಿ ದೊಡ್ಡ ಸ್ಫೋಟ ಎಂದು ಪರಿಗಣಿಸಲಾಗಿದ್ದು, ಜ್ವಾಲಾಮುಖಿಯಿಂದಾಗಿ ಆಗಸದೆತ್ತರ ದಟ್ಟ ಹೊಗೆ ಆವರಿಸಿದೆ.

ಜ್ವಾಲಾಮುಖಿ ಸ್ಫೋಟಗೊಳ್ಳುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ವಿಪತ್ತು ನಿರ್ವಹಣಾ ತಂಡ ನೂರಾರು ಮಂದಿಯನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರ ಮಾಡಿ ರಕ್ಷಣೆ ಮಾಡಿದ್ದಾರೆ. ಘಟನೆಯಲ್ಲಿ ಹಲವರು ಕಣ್ಮರೆಯಾಗಿದ್ದು, ಹುಡುಕಾಟ ನಡೆ-ಯುತ್ತಿದೆ ಎಂದು ವರದಿ ತಿಳಿಸಿದೆ. ಗಂಭೀರವಾಗಿ ಗಾಯಗೊಂಡಿರುವವರನ್ನು ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ನೀಡಲಾಗುತ್ತಿದೆ.

ಸೆಮೇರು ಪರ್ವತದಲ್ಲಿ ಜ್ವಾಲಾಮುಖಿ ಸ್ಫೋಟಗೊಂಡ ಬಳಿಕ ಲಾವಾ ರಸವು ಹತ್ತಿರದಲ್ಲಿದ್ದ ಪೂರ್ವ ಜಾವಾ ಪ್ರಾಂತ್ಯದ ಹಳ್ಳಿಗಳನ್ನು ಆವರಿಸಿದ್ದು ಜನರು ಭಯಭೀತರಾಗಿ ಓಡಿ ಹೋಗಿದ್ದಾರೆ. ಜನರು ಪ್ರಾಣಾಪಾಯದಿಂದ ಪಾರಾಗುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿವೆ.

ಜ್ವಾಲಾಮುಖಿ ಸ್ಫೋಟದಿಂದಾಗಿ ಜಾವಾ ಪ್ರಾಂತ್ಯದ ಹತ್ತಿರದ ನಗರಗಳಾದ ಲಮಾಂಗ್ ಮತ್ತು ಮಲಂಗ್ ನಡುವಿನ ಸೇತುವೆ ಕುಸಿತಗೊಂಡಿದೆ. ಸೇತುವೆ ಕುಸಿದಿದ್ದರಿಂದ ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗಿದೆ. ಎಂದು ತಿಳಿದುಬಂದಿದೆ.

ಇತ್ತೀಚೆಗೆ ಸಂಭವಿಸಿದ ದುರಂತದಲಿ ಸಾವನ್ನಪ್ಪಿದ್ದ 13 ಮಂದಿಯಲ್ಲಿ ಇಬ್ಬರನ್ನು ಮಾತ್ರ ಈವರೆಗೆ ಗುರುತಿಸಲಾಗಿದೆ.

, ಇಬ್ಬರು ಗರ್ಭಿಣಿಯರು ಸೇರಿದಂತೆ ತೊಂಬತ್ತೆಂಟು ಜನರು ಗಾಯಗೊಂಡಿದ್ದು, 50ಕ್ಕೂ ಹೆಚ್ಚು ಮಂದಿಗೆ ಗಂಭೀರ ಸುಟ್ಟ ಗಾಯಗಳಾಗಿವೆ ಮತ್ತು 902 ಜನರನ್ನು ಸ್ಥಳಾಂತರಿಸಲಾಗಿದೆ ಎಂದು ವಿಪತ್ತು ನಿರ್ವಹಣಾ ತಂಡದ ಅಧಿಕಾರಿ ಅಬ್ದುಲ್ ಮುಹಾರಿ ತಿಳಿಸಿದ್ದಾರೆ

### ♦ ಆಗಸದೆತ್ತರಕ್ಕೆ ಚಿಮ್ಮಿದ ಲಾವಾ

ಜ್ವಾಲಾಮುಖಿ ಭೂಮಿಯ ಮೇಲ್ಮೈ ಅಥವಾ ಚಿಪ್ಪಿನಲ್ಲಿರುವ ಒಂದು ಬಿರುಕು. ಇಂತಹ ಬಿರುಕಿನ ಮೂಲಕ ಭೂಗರ್ಭದಿಂದ ಕುದಿಯುವ ದ್ರವರೂಪದಲ್ಲಿನ ಕಲ್ಲುಗಳು, ಬೂದಿ ಮತ್ತು ಇತರ ಅನಿಲಗಳು ಹೊರಗೆ ಚಿಮ್ಮುತ್ತವೆ. ಸಾಮಾನ್ಯವಾಗಿ ಘನರೂಪದಲ್ಲಿ ಅಥವಾ ದ್ರವರೂಪದಲ್ಲಿರುವ ಕಲ್ಲುಗಳನ್ನು ಹೊರ ಉಗುಳುವ ಇಂತಹ ಜ್ವಾಲಾಮುಖಿಗಳು ಪರ್ವತದ ಶಿಖರಭಾಗದಲ್ಲಿರುತ್ತವೆ. ಈ ಜ್ವಾಲಾಮುಖಿಗಳ ರೂಪುಗೊಳ್ಳುವಿಕೆ ಬಲು ದೀರ್ಘ ಕಾಲದ ಪ್ರಕ್ರಿಯೆ. ಜ್ವಾಲಾಮುಖಿಯನ್ನು ವಲ್ಕನೋಗಳೆಂದೂ ಕರೆಯುತ್ತಾರೆ. ಭೂಮಿಯ ತಳಭಾಗದಿಂದ ದೊಡ್ಡ ಬಿರುಕುಗಳ ಮೂಲಕ, ಕಾದು ಕರಗಿರುವ ಪದಾರ್ಥಗಳನ್ನು ಉಗುಳುವ ಪರ್ವತಗಳೇ ಅಗ್ನಿಪರ್ವತಗಳು ಸ್ಫೋಟಗೊಂಡು ಲಾವಾರಸ ಆಗಸದೆತ್ತರಕ್ಕೆ ಚುಮ್ಮುತ್ತವೆ.ಇದರಿಂದ ಈ ಭಾಗದ ಜನರು ಕಷ್ಟ ಪಡಪಾಟಲು ಹೇಳತೀರದಾಗಿದೆ.

### ♦ ಪ್ರತಿಬಾರಿಯೂ ಅನೇಕರು ಕಣ್ಮರೆ

ಇಂಡೋನೇಷ್ಯಾದ ಅತಿ ಎತ್ತರದ ಜ್ವಾಲಾಮುಖಿ ಮೌಂಟ್ ಸೆಮೆರು ಇದ್ದಕ್ಕಿದ್ದಂತೆ ಸ್ಫೋಟಿಸುತ್ತದೆ. ಈ ವೇಳೆ ಸುಮಾರು 12 ಸಾವಿರ ಅಡಿ ಎತ್ತರದ ಪರ್ವತದ ತುದಿಯಿಂದ ಲಾವಾ, ಬಿಸಿ ಬೂದಿ ಮತ್ತು ಅನಿಲ ಹೊರಬರಲಾರಂಭಿಸಿತು. ಇದರಿಂದ ಸುತ್ತಮುತ್ತಲ ಕೆಲ ಹಳ್ಳಿ ಕಣ್ಮರೆಯಾಗಿದ್ದು, ಅನೇಕರು ಸಾವನ್ನಪ್ಪಿದ್ದಾರೆ. ಮಾಹಿತಿಯ ಪ್ರಕಾರ, ಈ ಜ್ವಾಲಾಮುಖಿಯ ಸ್ಫೋಟದಿಂದ ಹೊರಬಂದ ಬೂದಿ, ಬಿಸಿ ಅನಿಲ ಮತ್ತು ಲಾವಾ ನದಿಗಳು ಪರ್ವತದ ಕೆಳಗೆ 8 ಕಿಲೋಮೀಟರ್‌ವರೆಗೂ ವ್ಯಾಪಿಸಿತ್ತು. ಸದ್ಯ ಸಮೀಪದಲ್ಲಿ ವಾಸಿ
ಸುವ ಜನರನ್ನು 20 ಕಿಲೋಮೀಟರ್ ದೂರದಲ್ಲಿರುವ ಶಾಲೆಯಲ್ಲಿ ಇರಿಸ ಲಾಗಿದೆ. ಹೊಗೆ ಮತ್ತು ಬೂದಿಯಿಂದ ಆಕಾಶವು ಕಪ್ಪು ಬಣ್ಣಕ್ಕೆ ತಿರುಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಜನರು ಹಗಲು ಹೊತ್ತಿನಲ್ಲಿಯೂ ಲೈಟ್‌ಗಳನ್ನು ಹಾಕಬೇಕಾದ ಪರಿಸ್ಥಿತಿ ಇದೆ.



### ♦ 74 ಸಾವಿರ ವರ್ಷಗಳ ಇತಿಹಾಸ



ಜ್ವಾಲಾಮುಖಿಗೆ ಸುಮಾರು 74,000 ವರ್ಷಗಳ ಇತಿಹಾಸವಿದೆ. ಇಂಡೋನೇಷ್ಯಾದ ಸುಮಾತ್ರಾ ದ್ವೀಪದಲ್ಲಿ ನಡೆದ ಜ್ವಾಲಾಮುಖಿ ಸ್ಫೋಟವನ್ನು 'ಟೋಬಾ ಜ್ವಾಲಾಮುಖಿ ಸ್ಫೋಟ' ಎಂದು ಕರೆಯಲಾಗುತ್ತದೆ. ಇದು ಭೂಮಿಯ ಇತಿಹಾಸದಲ್ಲೇ ಅತ್ಯಂತ ಭೀಕರ ಹಾಗೂ ವಿನಾಶಕಾರಿ ಜ್ವಾಲಾಮುಖಿ ಸ್ಫೋಟಗಳಲ್ಲಿ ಒಂದಾಗಿದೆ. ಇಂಡೋನೇಷ್ಯಾದ ಸುಮಾತ್ರಾ ದ್ವೀಪದಲ್ಲಿದ್ದ ಮೌಂಟ್ ಟೋಬಾ ಆ ಜಾಗದಲ್ಲಿ ಒಂದು ದೊಡ್ಡ ಸರೋವರವಿದೆ, ಅದನ್ನೇ ಈಗ ಟೋಬಾ ಸರೋವರ ಎಂದು ಕರೆಯಲಾಗುತ್ತದೆ. ಈ ಸೂಪರ್-ಜ್ವಾಲಾಮುಖಿ ಸ್ಫೋಟ ಸಾಮಾನ್ಯ ಜ್ವಾಲಾಮುಖಿಗಳಿಗಿಂತ ಸಾವಿರಾರು ಪಟ್ಟು ದೊಡ್ಡದಾಗಿತ್ತು. ಈ ಸುಮಾರು 2,800 ಘನ ಕಿಲೋಮೀಟರ್‌ನಷ್ಟು ಬೂದಿ ಮತ್ತು ಲಾವಾರಸವನ್ನು ವಾತಾವರಣಕ್ಕೆ ಚಿಮ್ಮಿಸಿತ್ತು. ಇದು ಇಂದಿಗೂ ಮುಂದುವರಿದಿದೆ. ಜ್ವಾಲಾಮುಖಿ ಸ್ಫೋಟದಿಂದ ಹೊರಬಂದ ದಟ್ಟವಾದ ಬೂದಿ ಮತ್ತು ಅನಿಲಗಳು ಆಕಾಶವನ್ನು ಆವರಿಸಿದ್ದರಿಂದ ಸೂರ್ಯನ ಕಿರಣಗಳು ಭೂಮಿಗೆ ತಲುಪದಂತಾಯಿತು. ಇದರಿಂದಾಗಿ ಭೂಮಿಯ ಮೇಲೆ ಸುಮಾರು 6 ರಿಂದ 10 ವರ್ಷಗಳ ಕಾಲ ತೀವ್ರವಾದ ಚಳಿಗಾಲ ಉಂಟಾಯಿತು ಮತ್ತು ಮುಂದಿನ ಒಂದು ಸಾವಿರ ವರ್ಷಗಳವರೆಗೆ ಜಾಗತಿಕ ತಾಪಮಾನವು ತೀವ್ರವಾಗಿ ಕುಸಿಯಿತು.







### ♦ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರ

ಜ್ವಾಲಾಮುಖಿ ಸ್ಫೋಟದ ಘಟನೆಯ ನಂತರ, ಇಂಡೋನೇಷ್ಯಾದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಏಜೆನ್ಸಿಯ ವಕ್ತಾರ ಅಬ್ದುಲ್ ಮುಹಾರಿ, ಜ್ವಾಲಾಮುಖಿಯ ಸುತ್ತಲಿನ ಅನೇಕ ಹಳ್ಳಿಗಳನ್ನು ಬೂದಿಯ ರಾಶಿಯಲ್ಲಿ ಮರೆಮಾಡಿದೆ. ಈ ಹಿನ್ನೆಲೆಯಲ್ಲಿ ಹಲವು ಮಂದಿಯನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ ಮಾಡಲಾಗಿದೆ ಎಂದು ಹೇಳಿದ್ದಾರೆ. ಮಳೆ ಬಂದ ಕಾರಣ ಜ್ವಾಲಾಮುಖಿಯ ಚಟುವಟಿಕೆ ತಗ್ಗಿತು. ಹಲವಾರು ಗ್ರಾಮಗಳು ಬೂದಿಯಿಂದ ಮುಚ್ಚಿ ಹೋಗಿದ್ದವು. ಹೊಗೆಯ ಕಾರಣ ಸೂರ್ಯ ಕಿರಣಗಳು ಭೂಮಿಗೆ ಬೀಳಲಿಲ್ಲ. ಹಲವು ಗ್ರಾಮಸ್ಥರು ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆದರು. ಯಾವುದೇ ಪ್ರಾಣಹಾನಿ ವರದಿಯಾಗಿಲ್ಲ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ

### ♦ ಮನುಷ್ಯರ ಮೇಲೆ ಪರಿಣಾಮ

ಭೀಕರ ನೈಸರ್ಗಿಕ ವಿಕೋಪದಿಂದಾಗಿ ಜಗತ್ತಿನಾದ್ಯಂತ ಇದ್ದ ಬಹುತೇಕ ಆದಿ ಮಾನವರು ಮತ್ತು ಪ್ರಾಣಿ ಸಂಕುಲ ನಾಶವಾಯಿತು. ಮಾನವನ ಜನಸಂಖ್ಯೆಯು ತೀವ್ರವಾಗಿ ಕುಸಿದು, ನಮ್ಮ ಪೂರ್ವಜರು ಅಳಿವಿನ ಅಂಚಿಗೆ ತಲುಪಿದ್ದರು ಎಂದು ವಿಜ್ಞಾನಿಗಳು ನಂಬುತ್ತಾರೆ. ಈ ಸ್ಫೋಟದ ಬೂದಿಯು ಸಾವಿರಾರು ಮೈಲಿ ದೂರದ ಭಾರತದ ಉಪಖಂಡದ ಮೇಲೆಯೂ ಸುಮಾರು 5 ಸೆಂಟಿಮೀಟರ್‌ನಷ್ಟು ದಪ್ಪಗೆ ಆವರಿಸಿತ್ತು. ಭಾರತದಲ್ಲೂ ಇದು ಭಾರಿ ಹವಾಮಾನ ವೈಪರೀತ್ಯ ಹಾಗೂ ಕಾಡುಗಳ ನಾಶಕ್ಕೆ ಕಾರಣವಾಗಿತ್ತು ಎಂದು ಹೇಳಲಾಗಿದೆ. ಜ್ವಾಲಾಮುಖಿಯ ರುದ್ರ ನರ್ತನ ಮತ್ತು ಅದರಿಂದಾಗುವ ಪರಿಣಮಗಳಿಗೆ ಸುಮಾತ್ರ ಸೇರಿದಂತೆ ಸುತ್ತ ಮುತ್ತಲ ಭಾಗದ ಜನರು ತೀವ್ರ ಸಂಕಷ್ಟ ಎದುರಿಸುವ ಸ್ಥಿತಿ ನಿರ್ಮಾಣವಾಗಿದೆ.

# ಸೆ.28ರಿಂದ 'ರೈತ ಸ್ವಾಭಿಮಾನ ಯಾತ್ರೆ' ನಿಖಿಲ್

ಬೆಂಗಳೂರು, ಸೆ.22: ರಾಜ್ಯದಲ್ಲಿ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದು, ಬೆಳೆ ನಷ್ಟ, ಸಾಲದ ಹೊರೆ ಹಾಗೂ ವಿದ್ಯುತ್ ಸಮಸ್ಯೆಯಿಂದ ರೈತರ ಬದುಕು ದುಸ್ತರವಾಗಿದೆ. ಸರ್ಕಾರ ಕೂಡಲೇ ರೈತರ ನೆರವಿಗೆ ಧಾವಿಸಬೇಕು ಎಂದು ಜೆಡಿಎಸ್ ಯುವ ಘಟಕದ ಮುಖಂಡ ನಿಖಿಲ್ ಕುಮಾರಸ್ವಾಮಿ ಒತ್ತಾಯಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ 3,515ಕ್ಕೂ ಹೆಚ್ಚು ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಹೇಳಿದರು. ರೈತರು ಬೆಳೆ ಕಳೆದುಕೊಂಡಿರುವುದಲ್ಲದೆ, ಬೀಜ, ಗೊಬ್ಬರ, ಕೃಷಿ ಕೂಲಿ ಸೇರಿದಂತೆ ದಿನನಿತ್ಯದ ಖರ್ಚುಗಳನ್ನು ಭರಿಸಲಾಗದ ಸ್ಥಿತಿಯಲ್ಲಿದ್ದಾರೆ. ಬೆಳೆ ನಷ್ಟದ ಜೊತೆಗೆ ಸಾಲದ ಹೊರೆ ಕೂಡ ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ತಕ್ಷಣ ಸ್ಪಂದಿಸಬೇಕಿತ್ತು ಎಂದು ಹೇಳಿದರು.

**234 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿ**

ಸರ್ಕಾರ ಈಗ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಆದರೆ ರಾಜ್ಯದ ಹಲವು ಭಾಗಗಳಲ್ಲಿ ಮಳೆ ಕೊರತೆಯಾಗಿದ್ದು, ಮಲೆನಾಡು ಪ್ರದೇಶದಲ್ಲಿಯೂ ವಾಡಿಕೆಯಂತೆ ಮಳೆಯಾಗಿಲ್ಲ. ಆದ್ದರಿಂದ ಒಟ್ಟು 234 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು ಎಂದು ನಿಖಿಲ್ ಆಗ್ರಹಿಸಿದರು.

ಸರ್ಕಾರದ ಪಕ್ಷದ ಶಾಸಕರೇ ಬರ ಘೋಷಣೆ ವಿಚಾರದಲ್ಲಿ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಮಾಜಿ ಸಚಿವ ಎಚ್.ಕೆ. ಪಾಟೀಲ್ ಅವರು ತಮ್ಮ ಗದಗ ಜಿಲ್ಲೆಯ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸದಿರುವ ಬಗ್ಗೆ




ಅಸಮಾಧಾನ ವ್ಯಕ್ತಪಡಿಸಿರುವುದನ್ನೂ ಅವರು ಉಲ್ಲೇಖಿಸಿದರು.

"ರೈತರ ಬದುಕಿನ ಮೇಲೆ ರಾಜಕಾರಣ ಮಾಡುತ್ತೇನೆ ಎಂದು ಹೇಳುವುದರಿಂದ ರೈತರ ಸಮಸ್ಯೆ ಬಗೆಹರಿಯುವುದಿಲ್ಲ. ಭಾಷಣ ಮತ್ತು ಹೇಳಿಕೆಗಳಿಂದ ರೈತರ ಬದುಕು ಬದಲಾಗುವುದಿಲ್ಲ. ಎಂದು ಹೇಳಿದರು.

**ಎಕರೆಗೆ 25 ಸಾವಿರ ಪರಿಹಾರ ನೀಡಿ**

ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸರ್ಕಾರ ಎಕರೆಗೆ 25 ಸಾವಿರ ಪರಿಹಾರ ಘೋಷಿಸಬೇಕು ಎಂದು ನಿಖಿಲ್ ಒತ್ತಾಯಿಸಿದರು. ಸರ್ಕಾರದ ಖಜಾನೆಯಲ್ಲಿ ಹಣದ ಕೊರತೆಯಿದ್ದರೆ ಅದನ್ನು ಬಹಿರಂಗವಾಗಿ ಒಪ್ಪಿಕೊಳ್ಳಲಿ. ಬೇರೆ ಯೋಜನೆಗಳಿಗೆ ಹಣ ಮೀಸಲಿಟ್ಟಿದ್ದರೆ ಅದರ ಬಗ್ಗೆಯೂ ಸ್ಪಷ್ಟಪಡಿಸಲಿ ಎಂದು ಆಗ್ರಹಿಸಿದರು.

ಸರ್ಕಾರ ರೈತರ ಪರವಾಗಿ ನಿಲ್ಲದಿದ್ದರೆ ರೈತ ವಿರೋಧಿ ಸರ್ಕಾರ ಎಂಬ ಆರೋಪ ಎದುರಿಸಬೇಕಾಗುತ್ತದೆ ಎಂದು ಅವರು ಹೇಳಿದರು.

**ಪಂಪ್‌ಸೆಟ್‌ಗಳಿಗೆ ಕನಿಷ್ಠ 8 ಗಂಟೆ ವಿದ್ಯುತ್**

ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಆಗುತ್ತಿಲ್ಲ. ಏಕಾಏಕಿ ಲೋಡ್‌ಶೆಡ್ಡಿಂಗ್ ಮಾಡಲಾಗುತ್ತಿದ್ದು, ಇದರಿಂದ ಬೆಳೆಗಳಿಗೆ ನೀರುಣಿಸಲು ರೈತರಿಗೆ ತೊಂದರೆಯಾಗಿದೆ. ಕೃಷಿ ಪಂಪ್‌ಸೆಟ್‌ಗಳಿಗೆ ಕನಿಷ್ಠ 8 ಗಂಟೆ ವಿದ್ಯುತ್ ಪೂರೈಸಬೇಕು ಎಂದು ನಿಖಿಲ್ ಆಗ್ರಹಿಸಿದರು.

**ಸೆ.28ರಿಂದ 'ರೈತ ಸ್ವಾಭಿಮಾನ ಯಾತ್ರೆ'**

ರೈತರ ಸಮಸ್ಯೆಗಳನ್ನು ನೇರವಾಗಿ ಆಲಿಸುವ ಉದ್ದೇಶದಿಂದ ಸೆಪ್ಟೆಂಬರ್ 28ರಿಂದ 'ರೈತ ಸ್ವಾಭಿಮಾನ ಯಾತ್ರೆ' ಆರಂಭಿಸಲು ಜೆಡಿಎಸ್ ನಿರ್ಧರಿಸಿದೆ ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ನಡೆಯಲಿರುವ ಯಾತ್ರೆ ರಾಜ್ಯದ ವಿವಿಧ ಜಿಲ್ಲೆಗಳಿಗೆ ತೆರಳಲಿದೆ. ರೈತರೊಂದಿಗೆ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಲಾಗುವುದು. ಸರ್ಕಾರದ ಮೇಲೆ ಹೇಗೆ ಒತ್ತಡ ಹೇರಬೇಕು ಎಂಬುದರ ಕುರಿತು ರೈತರೊಂದಿಗೆ ಚರ್ಚಿಸಲಾಗುವುದು ಎಂದು ಹೇಳಿದರು.

ಯಾತ್ರೆಯ ಪ್ರಮುಖ ಉದ್ದೇಶಗಳು

- **ಪ್ರತಿ ಜಿಲ್ಲೆಗೆ ಭೇಟಿ**
- **ರೈತರೊಂದಿಗೆ ನೇರ ಸಂವಾದ**
- **ಬೆಳೆ ನಷ್ಟ ಮತ್ತು ಬರ ಪರಿಸ್ಥಿತಿ ಪರಿಶೀಲನೆ**
- **ರೈತರ ಸಮಸ್ಯೆಗಳ ಸಂಗ್ರಹ**
- **ಸರ್ಕಾರದ ಮೇಲೆ ಪರಿಹಾರಕ್ಕಾಗಿ ಒತ್ತಡ**
- **ರಾಜ್ಯ ಸರ್ಕಾರದ ವೈಫಲ್ಯಗಳ ಬಗ್ಗೆ ಜನರ ಗಮನ ಸೆಳೆಯುವುದು**

**ಘೋಷಣೆಗಳು ಕಾರ್ಯರೂಪಕ್ಕೆ ಬರಲಿ**

ಚನ್ನಪಟ್ಟಣ ಅಭಿವೃದ್ಧಿಗೆ 500 ಕೋಟಿ ನೀಡುವುದಾಗಿ ಸರ್ಕಾರ ಘೋಷಿಸಿದೆ. ಕಲಬುರಗಿಯಲ್ಲಿ ಹಲವು ವಿಶೇಷ ಘೋಷಣೆಗಳನ್ನು ಮಾಡಲಾಗಿದೆ. ಮಂಗಳೂರಿಗೆ 34 ಸಾವಿರ ಕೋಟಿ ನೀಡುವುದಾಗಿ ಹೇಳಲಾಗಿದೆ. ಆದರೆ ಕೇವಲ ಘೋಷಣೆಗಳು ಘೋಷಣೆಗಳಾಗಿಯೇ ಉಳಿಯಬಾರದು; ಅವು ಕಾರ್ಯರೂಪಕ್ಕೆ ಬರಬೇಕು ಎಂದು ನಿಖಿಲ್ ಹೇಳಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ರೈತರ ಸಮಸ್ಯೆಗಳ ಕುರಿತು ಚರ್ಚಿಸಲಾಗಿದೆ. ಕೇಂದ್ರದಿಂದ ರೈತರಿಗೆ ಸಿಗಬೇಕಾದ ಪರಿಹಾರ ಹಾಗೂ ನೆರವು ದೊರಕಿಸಲು ಅವರು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ ಎಂದು ನಿಖಿಲ್ ತಿಳಿಸಿದರು.

"ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದಾಗ 25 ಸಾವಿರ ಕೋಟಿ ಸಾಲಮನ್ನಾ ಮಾಡಿದ್ದರು. ರೈತರ ಪರವಾಗಿ ನಾವು ಸದಾ ನಿಲ್ಲುತ್ತೇವೆ. ಈಗಲೂ ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರಕ್ಕಾಗಿ ಹೋರಾಟ ನಡೆಸುತ್ತೇವೆ" ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು.

# 191 ಔಷಧಗಳ ಗುಣಮಟ್ಟ ಕಳಪೆ

ಬೆಂಗಳೂರು,ಸೆ. 22– ದೇಶದಲ್ಲಿ ಔಷಧಿಗಳ ಗುಣಮಟ್ಟದ ಕುರಿತು ಆತಂಕ ಮೂಡಿಸುವ ಮಾಹಿತಿ ಹೊರಬಿದ್ದಿದ್ದು,ಕಳೆದ ಆಗಸ್ಟ್ ತಿಂಗಳಲ್ಲಿ ನಡೆಸಲಾದ ಔಷಧ ಗುಣಮಟ್ಟ ಪರೀಕ್ಷೆಯಲ್ಲಿ 220 ಔಷಧ ಮಾದರಿಗಳು ನಿಗದಿತ ಗುಣಮಟ್ಟದ ಮಾನದಂಡಗಳನ್ನು ಪೂರೈಸಿಲ್ಲ ಎಂದು ಕೇಂದ್ರ ಔಷಧ ನಿಯಂತ್ರಣ ಸಂಸ್ಥೆ ವರದಿ ತಿಳಿಸಿದೆ.

ಕೇಂದ್ರ ಮತ್ತು ರಾಜ್ಯ ಮಟ್ಟದ ಡ್ರಗ್ ತಪಾಸಣಾ ಪ್ರಯೋಗಾಲಯಗಳಲ್ಲಿ ನಡೆಸಿದ ಪರೀಕ್ಷೆಗಳ ಆಧಾರದ ಮೇಲೆ ವರದಿ ಸಿದ್ಧಪಡಿಸಲಾಗಿದೆ. ಕೇಂದ್ರ ಔಷಧ ಪ್ರಯೋಗಾಲಯಗಳಲ್ಲಿ ಪರೀಕ್ಷಿಸಲಾದ 29 ಔಷಧ ಮಾದರಿಗಳು ಗುಣಮಟ್ಟದ ಮಾನದಂಡಗಳನ್ನು ಪೂರೈಸದಿರುವುದು ಪತ್ತೆಯಾಗಿದ್ದರೆ, ರಾಜ್ಯ ಔಷಧ ಪರೀಕ್ಷಾ ಪ್ರಯೋಗಾಲಯಗಳಲ್ಲಿ 191 ಔಷಧ ಮಾದರಿಗಳು ಎನ್ ಎಸ್ ಕ್ಯೂ ಎಂದು ಗುರುತಿಸಲಾಗಿದೆ.

**ಎನ್ ಎಸ್ ಕ್ಯೂ ಎಂದರೇನು:**

ಔಷಧ ಮಾದರಿಯು ನಿಗದಿಪಡಿಸಲಾದ ಗುಣಮಟ್ಟದ ಮಾನದಂಡಗಳಲ್ಲಿನ ಒಂದು ಅಥವಾ ಹೆಚ್ಚಿನ ಪರೀಕ್ಷೆಗಳಲ್ಲಿ ವಿಫಲವಾದಾಗ ಅದನ್ನು 'ನಿಗದಿತ ಗುಣಮಟ್ಟಕ್ಕೆ ಹೊಂದಿಕೆಯಾಗಿಲ್ಲ' ಎಂದು ಗುರುತಿಸಲಾಗುತ್ತದೆ.

ಈ ವೈಫಲ್ಯವು ಸರ್ಕಾರಿ ಪ್ರಯೋಗಾಲಯದಲ್ಲಿ ಪರೀಕ್ಷಿಸಲಾದ ನಿರ್ದಿಷ್ಟ ಔಷಧದ ನಿರ್ದಿಷ್ಟ ಬ್ಯಾಚ್‌ಗೆ ಮಾತ್ರ ಅನ್ವಯಿಸುತ್ತದೆ ಎಂದು ಕೇಂದ್ರ ಔಷಧ ನಿಯಂತ್ರಣ ಸಂಸ್ಥೆ ಸ್ಪಷ್ಟಪಡಿಸಿದೆ.

ಹೀಗಾಗಿ ಮಾರುಕಟ್ಟೆಯಲ್ಲಿ ಲಭ್ಯವಿರುವ ಇತರೆ ಬ್ಯಾಚ್‌ಗಳ ಅಥವಾ ಇತರೆ ಔಷಧ ಉತ್ಪನ್ನಗಳ ಬಗ್ಗೆ ಸಾಮಾನ್ಯವಾಗಿ ಆತಂಕಪಡುವ ಅಗತ್ಯವಿಲ್ಲ ಎಂದು ಸಂಸ್ಥೆ ತಿಳಿಸಿದೆ.

**ಒಂದು ಔಷಧ ನಕಲಿ ಎಂದು ಪತ್ತೆ:**

ಇದೇ ವೇಳೆ, ಎನ್‌ಸಿಟಿ ದೆಹಲಿಯಲ್ಲಿ ಪರೀಕ್ಷಿಸಲಾದ ಒಂದು ಔಷಧ ಮಾದರಿಯನ್ನು 'ನಕಲಿ ಔಷಧ' ಎಂದು ಗುರುತಿಸಲಾಗಿದೆ. ಮತ್ತೊಂದು ಕಂಪನಿಯ ಮಾಲೀಕತ್ವದಲ್ಲಿರುವ ಬ್ರ್ಯಾಂಡ್ ಹೆಸರನ್ನು ಬಳಸಿಕೊಂಡು, ಅನುಮತಿ ಇಲ್ಲದ ತಯಾರಕರು ಈ ಔಷಧವನ್ನು ತಯಾರಿಸಿರುವುದು ಪತ್ತೆಯಾಗಿದೆ ಎಂದು ವರದಿ ತಿಳಿಸಿದೆ.

ಈ ಪ್ರಕರಣದ ಕುರಿತು ತನಿಖೆ ಮುಂದುವರಿದಿದ್ದು, ಸಂಬಂಧಿತ ಕಾಯ್ದೆ ಮತ್ತು ನಿಯಮಗಳ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಕೇಂದ್ರ ಔಷಧ ನಿಯಂತ್ರಣ ಸಂಸ್ಥೆ ತಿಳಿಸಿದೆ.

# ದೆಹಲಿಯಲ್ಲಿ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ

ನವದೆಹಲಿ,ಸೆ.22– ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಮತ್ತೊಂದು ಸಾಮೂಹಿಕ ಅತ್ಯಾಚಾರ ಪ್ರಕರಣ ಬೆಳಕಿಗೆ ಬಂದಿದ್ದು,ಪೊಲೀಸರ ಸೋಗಿನಲ್ಲಿ ಬಂದ ಮೂವರು ಅಪರಿಚಿತರು 17 ವರ್ಷದ ಬಾಲಕಿಯ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಘಟನೆ ನಡೆದಿದೆ.

ಬಾಲಕಿ ತನ್ನ ಸ್ನೇಹಿತನೊಂದಿಗೆ ದೆಹಲಿಯ ಕಲ್ಕಾಜಿ ಮಂದಿರಕ್ಕೆ ಭೇಟಿ ನೀಡಿದ್ದ ವೇಳೆ ಈ ಘಟನೆ ನಡೆದಿದ್ದು, ಕಲ್ಕಾಜಿ ಮಂದಿರದಲ್ಲಿ ದರ್ಶನ ಪಡೆದ ನಂತರ ಇಬ್ಬರೂ ಸಂಜೆ 7:30ರ ಸುಮಾರಿಗೆ ದೇವಾಲಯದ ಬಳಿಯ ಉದ್ಯಾನವನಕ್ಕೆ ತೆರಳಿದ್ದರು. ಈ ವೇಳೆ 25 ರಿಂದ 30 ವರ್ಷ ವಯಸ್ಸಿನ ಮೂವರು ಅಪರಿಚಿತರು ಅವರನ್ನು ಹಿಂಬಾಲಿಸಿಕೊಂಡು ಬಂದಿದ್ದಾರೆ. ಯುವಕರು ತಾವು ಪೊಲೀಸರೆಂದು ಹೇಳಿ ಇಬ್ಬರನ್ನು ಬೆದರಿಸಿ, ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ್ದಾರೆ.

ಆರೋಪಿಗಳಲ್ಲಿ ಒಬ್ಬನು ಬಂದೂಕು ಮತ್ತು ಚಾಕುವಿನಿಂದ ಬೆದರಿಸಿ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದನು. ನಂತರ, ಇತರ ಇಬ್ಬರು ಆರೋಪಿಗಳು ಕೂಡ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ್ದಾರೆ. ಬಳಿಕ ಆರೋಪಿಗಳು ಸಂತ್ರಸ್ತೆ ಮತ್ತು ಆಕೆಯ ಸ್ನೇಹಿತನಿಗೆ ಬೆದರಿಕೆ ಹಾಕಿದರು ಎಂದು ಪೊಲೀಸರು ತಿಳಿಸಿದ್ದಾರೆ.

ದೆಹಲಿ ನಿವಾಸಿಯಾಗಿರುವ ಸಂತ್ರಸ್ತೆಯನ್ನ ವೈದ್ಯಕೀಯ ಪರೀಕ್ಷೆಗೆ ಕರೆದೊಯ್ಯಲಾಗಿದೆ. ಆಕೆಯ ಹೇಳಿಕೆಯ ಆಧಾರದ ಮೇಲೆ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳ ಹುಡುಕಾಟದಲ್ಲಿರುವ ಪೊಲೀಸರು, ಘಟನೆ ನಡೆದ ಸುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದಾರೆ. ಪೋಕ್ಸೊ ಕಾಯ್ದೆ ಸೇರಿದಂತೆ ಸಂಬಂಧಿತ ಕಾನೂನಿನ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ತನಿಖೆಯ ಸಮಯದಲ್ಲಿ, ಪ್ರಕರಣದ ಆರೋಪಿಗಳನ್ನು ಪತ್ತೆಹಚ್ಚಲು ವಿವಿಧ ತಂಡಗಳನ್ನು ರಚಿಸಲಾಯಿತು. ತಂಡವೊಂದಕ್ಕೆ ಅಮರ್ ಕಾಲೋನಿಯ ಡಿಎಂ ಕಚೇರಿ ರಸ್ತೆಯ ಬಳಿ ಆರೋಪಿಗಳಲ್ಲಿ ಒಬ್ಬನ ಚಲನವಲನದ ಬಗ್ಗೆ ನಿರ್ದಿಷ್ಟ ಮಾಹಿತಿ ಲಭ್ಯವಾಯಿತು, ಅಲ್ಲಿ ಪೊಲೀಸ್ ತಂಡವು ಆತನನ್ನು ಬಂಧಿಸಿತ್ತು.

# ಸಚಿವರ ಗೈರು ಮೇಲ್ಮನೆಯಲ್ಲಿ ವಾಗ್ವಾದ

ಬೆಂಗಳೂರು,ಸೆ.22–ವಿಧಾನ ಮಂಡಲದ ವಿಶೇಷ ಅಧಿವೇಶನ ಅಂಗವಾಗಿ ನಡೆಯುತ್ತಿರುವ ಮೇಲ್ಮನೆಯ ಕಲಾಪದಲ್ಲಿ ರಾಜ್ಯದಲ್ಲಿ ಉಂಟಾಗಿರುವ ಭೀಕರ ಬರ ಪರಿಸ್ಥಿತಿಯ ಚರ್ಚೆ ಆರಂಭಕ್ಕೂ ಮುನ್ನವೇ ಸದನದಲ್ಲಿ ಸಚಿವರ ಗೈರುಹಾಜರಿ ವಿಚಾರವಾಗಿ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ತೀವ್ರ ವಾಗ್ವಾದ ನಡೆಯಿತು.

ಬರದ ಕುರಿತು ಚರ್ಚೆ ನಡೆಯುತ್ತಿರುವ ಸಂದರ್ಭದಲ್ಲಿ ಹೆಚ್ಚಿನ ಸಚಿವರು ಸದನದಲ್ಲಿ ಹಾಜರಿ ಇಲ್ಲದಿರುವುದನ್ನ ವಿಪಕ್ಷ ಸದಸ್ಯರು ಪ್ರಶ್ನಿಸಿದರು. "ಬರದ ಬಗ್ಗೆ ಚರ್ಚೆಗೆ ಸಚಿವರ ಬರ ಇದೆ. ಮಂತ್ರಿಗಳಿಗೆ ಬರ ಬಂದಿದೆ" ಎಂದು ಸಿಟಿ ರವಿ, ಭೋಜೇಗೌಡ ಹಾಗೂ ರವಿಕುಮಾರ್ ಸೇರಿದಂತೆ ವಿಪಕ್ಷ ಸದಸ್ಯರು ಆಡಳಿತ ಪಕ್ಷವನ್ನು ತರಾಟೆಗೆ ತೆಗೆದುಕೊಂಡರು.

ಸದನದಲ್ಲಿ 15 ಸಚಿವರು ಇರಬೇಕಿತ್ತು. ಆದರೆ, ಕೇವಲ ಮೂವರು ಸಚಿವರು ಮಾತ್ರ ಹಾಜರಿದ್ದಾರೆ ಎಂದು ವಿಪಕ್ಷ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಭಾಪತಿ ಸಲೀಂ ಅಹಮದ್ ಅವರು ಗೈರಾಗಿರುವ ಸಚಿವರನ್ನ ಸದನಕ್ಕೆ ಕರೆಸುವುದಾಗಿ ತಿಳಿಸಿದರು.

ಇದೇ ವೇಳೆ ಬಿಜೆಪಿ ಸದಸ್ಯ ರವಿಕುಮಾರ್ ಸೇರಿದಂತೆ ಕೆಲ ಸದಸ್ಯರು ತೃತೀಯ ಭಾಷೆ ಸೇರಿದಂತೆ ಇತರ ವಿಷಯಗಳ ಚರ್ಚೆಗೆ ಅವಕಾಶ ನೀಡುವಂತೆ ಒತ್ತಾಯಿಸಿದರು. ಆದರೆ, ಪ್ರಸ್ತುತ ಅಧಿವೇಶನವನ್ನ ಬರದ ಪರಿಸ್ಥಿತಿ ಕುರಿತು ಚರ್ಚಿಸಲು ಕರೆಯಲಾಗಿದೆ.

# ಮಹಿಳಾ ಪಿಎಸ್‌ಐಗೆ ಕಪಾಳಮೋಕ್ಷ ಶಾಸಕರ ಪುತ್ರಿ ಬಹಿರಂಗ ಕ್ಷಮೆ

ಮಂಡ್ಯ,ಸೆ.22–ಮಹಿಳಾ ಪೊಲೀಸ್ ಸಬ್ ಇನ್ಸ್ ಪೆಕ್ಟರ್( ಪಿಎಸ್‌ಐ)ಗೆ ಕಪಾಳಮೋಕ್ಷ ಮಾಡಿದ ಪ್ರಕರಣದ ಸಂಬಂಧ ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡ ಅವರ ಪುತ್ರಿ ಐಶ್ವರ್ಯ ಗೌಡ ಅವರು ಬಹಿರಂಗ ಕ್ಷಮೆಯಾಚಿಸಿದ್ದಾರೆ.

ಸುರೇಶ್‌ಗೌಡ ಅವರ ಪುತ್ರಿ ಐಶ್ವರ್ಯ ಗೌಡಅವರು ಪಿಎಸ್‌ಐ ಸವಿತಾ ಪಾಟೀಲ್ ಅವರಿಗೆ ವೀಡಿಯೋ ಮೂಲಕ ಬೇಷರತ್ ಕ್ಷಮೆ ಕೋರಿದ್ದಾರೆ.

ಕಳೆದ ಆಗಸ್ಟ್ 12ರಂದು ಭೀಮನ ಅಮಾವಾಸ್ಯೆ ಹಿನ್ನೆಲೆಯಲ್ಲಿ ಐಶ್ವರ್ಯ ಗೌಡ ಅವರು ತಮ್ಮ ಇಬ್ಬರು ಮಕ್ಕಳೊಂದಿಗೆ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಆರತಿ ಉಕ್ಕಡಮ್ಮ ದೇವಸ್ಥಾನಕ್ಕೆ ತೆರಳಿದ್ದರು. ಈ ವೇಳೆ ದೇವರ ದರ್ಶನಕ್ಕೆ ಗರ್ಭಗುಡಿಗೆ ತೆರಳುವ ವಿಚಾರದಲ್ಲಿ ಭದ್ರತಾ ಕರ್ತವ್ಯದಲ್ಲಿದ್ದ ಮಹಿಳಾ ಪಿಎಸ್‌ಐ ಸವಿತಾ ಪಾಟೀಲ್ ಅವರೊಂದಿಗೆ ಮಾತಿನ ಚಕಮಕಿ



ನಡೆದಿತ್ತು.

ಮಾತಿನ ಚಕಮಕಿ ವೇಳೆ ಐಶ್ವರ್ಯ ಅವರು ಪಿಎಸ್‌ಐ ಸವಿತಾ ಪಾಟೀಲ್ ಅವರಿಗೆ ಕಪಾಳಮೋಕ್ಷ ಮಾಡಿದ್ದರು ಎನ್ನಲಾಗಿದ್ದು, ಘಟನೆ ಸಂಬಂಧ ಕ್ಯಾತನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ಕ್ಷಮೆಯಾಚಿಸುವಂತೆ ಕೋರ್ಟ್ ತಾಕೀತು ಮಾಡಿದ್ದ ಹಿನ್ನೆಲೆಯಲ್ಲಿ ಇದೀಗ ಐಶ್ವರ್ಯ ಗೌಡ ಅವರು ವೀಡಿಯೋ ಮೂಲಕ ಬಹಿರಂಗವಾಗಿ ಕ್ಷಮೆಯಾಚಿಸಿದ್ದಾರೆ.

**ಐಶ್ವರ್ಯ ಹೇಳಿದ್ದೇನು:**

"ಆಗಸ್ಟ್ 12ರಂದು ಭೀಮನ ಅಮಾವಾಸ್ಯೆಯಂದು ನಾನು ಮತ್ತು ನನ್ನ ಇಬ್ಬರು ಮಕ್ಕಳು ಪಾಂಡವಪುರದ ಉಕ್ಕಡಮ್ಮ ದೇವಸ್ಥಾನಕ್ಕೆ ತೆರಳಿದ್ದೆವು. ಅಂದು ದೇಗುಲದಲ್ಲಿ ಹೆಚ್ಚಿನ ಜನಸಂದಣಿ ಇದ್ದಿದ್ದರಿಂದ ಹಾಗೂ ನನ್ನ ಮಕ್ಕಳಿಗೆ ಅಮ್ಮ ಆಗಿದ್ದ ಕಾರಣ ದೇವರ ದರ್ಶನ ಪಡೆಯುವ ಸಂದರ್ಭದಲ್ಲಿ ನನ್ನ ಮತ್ತು ಮಹಿಳಾ ಪಿಎಸ್‌ಐ ನಡುವೆ ಸಣ್ಣ ಮಾತಿನ ಚಕಮಕಿ ನಡೆಯಿತು.

ಉದ್ವೇಗದಿಂದ ಅಹಿತಕರ ಘಟನೆ ನಡೆದಿದೆ. ಈ ಘಟನೆ ನಡೆಯಬಾರದಿತ್ತು. ಈ ಘಟನೆ ಬಗ್ಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಕರ್ತವ್ಯದಲ್ಲಿದ್ದ ಪಿಎಸ್‌ಐ ಸವಿತಾ ಪಾಟೀಲ್ ಅವರಿಗೆ ಇದರಿಂದ ನೋವಾಗಿದ್ದರೆ, ನಾನು ಬೇಷರತ್ ಆಗಿ ಕ್ಷಮೆಯಾಚಿಸುತ್ತೇನೆ" ಎಂದು ಐಶ್ವರ್ಯ ಗೌಡ ಹೇಳಿದ್ದಾರೆ.

# ನೌಕರರ ಗಡುವು ರಾತ್ರಿ ಅಂತ್ಯ
# 108 ಆಂಬುಲೆನ್ಸ್ ಸೇವೆ ಬಂದ್ ಆತಂಕ

ಬೆಂಗಳೂರು, ಸೆ.22–ರಾಜ್ಯದ ಜನರಿಗೆ ತುರ್ತು ಆರೋಗ್ಯ ಸೇವೆ ಒದಗಿಸುವ 108 ಆಂಬ್ಯುಲೆನ್ಸ್ ಸೇವೆಗೆ ಇದೀಗ ಮುಷ್ಕರದ ಬಿಸಿ ತಟ್ಟುವ ಆತಂಕ ಎದುರಾಗಿದೆ. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ 108 ಆಂಬ್ಯುಲೆನ್ಸ್ ನೌಕರರು ಸರ್ಕಾರಕ್ಕೆ ನೀಡಿದ್ದ 15 ದಿನಗಳ ಗಡುವು ಇಂದು ರಾತ್ರಿ 8 ಗಂಟೆಗೆ ಮುಕ್ತಾಯಗೊಳ್ಳಲಿದ್ದು, ಅಷ್ಟರೊಳಗೆ ಸಮಸ್ಯೆ ಬಗೆಹರಿಯದಿದ್ದರೆ ಸೇವೆ ಸ್ಥಗಿತಗೊಳಿಸಿ ಸಾಮೂಹಿಕ ರಾಜೀನಾಮೆ ನೀಡುವ ಎಚ್ಚರಿಕೆಯನ್ನು ನೌಕರರು ನೀಡಿದ್ದಾರೆ.

ಆರೋಗ್ಯ ಇಲಾಖೆ ಹಾಗೂ 108 ಆಂಬ್ಯುಲೆನ್ಸ್ ಸೇವೆ ನಿರ್ವಹಿಸುತ್ತಿರುವ ವ್ಯವಸ್ಥೆಯ ವಿರುದ್ಧ ನೌಕರರು ಅಸಮಾಧಾನ ವ್ಯಕ್ತಪಡಿಸಿದ್ದು, ಹಲವು ವರ್ಷಗಳಿಂದ ತಮ್ಮ ಬೇಡಿಕೆಗಳು ಬಾಕಿ ಉಳಿದಿವೆ ಎಂದು ಆರೋಪಿಸಿದ್ದಾರೆ. ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಸೂಕ್ತ ಸ್ಪಂದನೆ ಸಿಕ್ಕಿಲ್ಲ. ಹೀಗಾಗಿ ಹೋರಾಟ ತೀವ್ರಗೊಳಿಸಲು ನಿರ್ಧರಿಸಿರುವುದಾಗಿ ಸಂಘದ ಮುಖಂಡರು ತಿಳಿಸಿದ್ದಾರೆ.

**ರಾತ್ರಿ 8ರ ಬಳಿಕ ಸೇವೆಗೆ ಬ್ರೇಕ್**

15 ದಿನಗಳ ಗಡುವು ಮುಕ್ತಾಯವಾಗುವ ಮುನ್ನ ಸರ್ಕಾರ ಮಧ್ಯಪ್ರವೇಶಿಸಿ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲವಾದರೆ ರಾತ್ರಿ 8 ಗಂಟೆಯ ಬಳಿಕ ರಾಜ್ಯಾದ್ಯಂತ 108 ಸೇವೆಗೆ ಅಡ್ಡಿಯಾಗುವ ಸಾಧ್ಯತೆ ಇದೆ ಎಂದು ನೌಕರರು ಎಚ್ಚರಿಸಿದ್ದಾರೆ.

ಒಂದೊಮ್ಮೆ ಸೇವೆ ಸ್ಥಗಿತಗೊಂಡರೆ ಅಪಘಾತ ಸಂತ್ರಸ್ತರು, ಗರ್ಭಿಣಿಯರು, ತುರ್ತು ಚಿಕಿತ್ಸೆ ಅಗತ್ಯವಿರುವವರು ಹಾಗೂ ಗ್ರಾಮೀಣ ಪ್ರದೇಶದ ರೋಗಿಗಳಿಗೆ ತಕ್ಷಣದ ಸಾರಿಗೆ ವ್ಯವಸ್ಥೆ ಸಿಗುವುದರಲ್ಲಿ ಸಮಸ್ಯೆ ಎದುರಾಗುವ ಆತಂಕವಿದೆ.

**ಏನೇನು ಬೇಡಿಕೆ?**

108 ಆಂಬ್ಯುಲೆನ್ಸ್ ನೌಕರರ ಸಂಘ ಹಲವು ಬೇಡಿಕೆಗಳನ್ನು ಮುಂದಿಟ್ಟಿದೆ.

ಪ್ರತಿ ವರ್ಷ ವಾರ್ಷಿಕ ವೇತನ ಹೆಚ್ಚಳದ ಜತೆಗೆ ವೇತನ ಪರಿಷ್ಕರಣೆ ಮಾಡಬೇಕು.

ಮೂರು ಪಾಳಿಯಲ್ಲಿ ಕರ್ತವ್ಯ ನಿರ್ವಹಿಸಲು ಅಗತ್ಯವಿರುವಷ್ಟು ವಾಹನಗಳ ವ್ಯವಸ್ಥೆ ಮಾಡಬೇಕು.

ವಲಯವಾರು ವೇತನ ಪದ್ಧತಿ ರದ್ದುಪಡಿಸಿ ರಾಜ್ಯಾದ್ಯಂತ ಏಕರೂಪ ವೇತನ ಜಾರಿಗೊಳಿಸಬೇಕು.

ಜೇಷ್ಠತೆಯ ಆಧಾರದ ಮೇಲೆ ಸಿಬ್ಬಂದಿಗೆ ವೇತನ ನಿಗದಿಪಡಿಸಬೇಕು.

ಅಪಘಾತದಲ್ಲಿ ಮೃತಪಟ್ಟ ಸಿಬ್ಬಂದಿಯ ಕುಟುಂಬಕ್ಕೆ 50 ಲಕ್ಷ ಪರಿಹಾರ ನೀಡಬೇಕು.

ಸಿಬ್ಬಂದಿಗೆ ಸೂಕ್ತ ವಿಶ್ರಾಂತಿ ಕೊಠಡಿಗಳ ವ್ಯವಸ್ಥೆ ಮಾಡಬೇಕು.

ಶಿಫ್ಟ್ ಸಮಯವನ್ನು ಪರಿಷ್ಕರಿಸಿ ಸಿಬ್ಬಂದಿಗೆ ಅನುಕೂಲವಾಗುವ ರೀತಿಯಲ್ಲಿ ಕರ್ತವ್ಯ ವ್ಯವಸ್ಥೆ ಮಾಡಬೇಕು.

ಸರ್ಕಾರದ ಮಧ್ಯಪ್ರವೇಶಕ್ಕೆ ಒತ್ತಾಯ ಈ ಕುರಿತು ಮಾತನಾಡಿರುವ 108 ಆಂಬ್ಯುಲೆನ್ಸ್ ನೌಕರರ ಸಂಘದ ಅಧ್ಯಕ್ಷ ಪರಮಶಿವಯ್ಯ, ಹಲವು ವರ್ಷಗಳಿಂದ ಬಾಕಿ ಉಳಿದಿರುವ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಆದರೆ ಇದುವರೆಗೆ ನಿರೀಕ್ಷಿತ ಸ್ಪಂದನೆ ಸಿಕ್ಕಿಲ್ಲ. ಹೀಗಾಗಿ ಅನಿವಾರ್ಯ ಪರಿಸ್ಥಿತಿಯಲ್ಲಿ ಸೇವೆ ಸ್ಥಗಿತಗೊಳಿಸಿ ಸಾಮೂಹಿಕ ರಾಜೀನಾಮೆ ನೀಡುವ ನಿರ್ಧಾರ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ರಾಜ್ಯದ ತುರ್ತು ಆರೋಗ್ಯ ಸೇವೆಯ ಪ್ರಮುಖ ಕೊಂಡಿಯಾಗಿರುವ 108 ಆಂಬ್ಯುಲೆನ್ಸ್ ಸೇವೆ ಸ್ಥಗಿ–ತಗೊಂಡರೆ ಸಾರ್ವಜನಿಕರಿಗೆ ನೇರ ಹೊಡೆತ ಬೀಳುವ ಸಾಧ್ಯತೆ ಇದೆ. ಹೀಗಾಗಿ ಆರೋಗ್ಯ ಇಲಾಖೆ ಹಾಗೂ ಸಂಬಂಧಪಟ್ಟ ಸಂಸ್ಥೆ ತಕ್ಷಣ ನೌಕರರೊಂದಿಗೆ ಮಾತುಕತೆ ನಡೆಸಿ ಬಿಕ್ಕಟ್ಟು ಬಗೆಹರಿಸುತ್ತದೆಯೇ ಎಂಬುದು ಇದೀಗ ಕುತೂಹಲ ಮೂಡಿಸಿದೆ.

# ಆನೇಕಲ್‌ನಲ್ಲಿ ಅಕ್ರಮ ಗನ್ ಮಾರಾಟ 7 ಮಂದಿ ಸೆರೆ

ಬೆಂಗಳೂರು,ಸೆ.22–ನಗರದ ಹೊರವಲಯದ ಆನೇಕಲ್ ನಲ್ಲಿ ಅಕ್ರಮವಾಗಿ ಗನ್ ಡೀಲಿಂಗ್ ನಡೆಸುತ್ತಿದ್ದ 6 ಮಂದಿ ರೌಡಿಗಳು ಸೇರಿ ಏಳು ಮಂದಿಯನ್ನು ಗ್ರಾಮಾಂತರ ಪೊಲೀಸರು ಬಂಧಿಸಿದ್ದಾರೆ.

ಮನೋಜ್ ಅಲಿಯಾಸ್ ಜಾಕಿ, ರಿಜ್ವಾನ್ ಪಾಷ ಅಲಿಯಾಸ್ ಕುಳ್ಳ ರಿಜ್ವಾನ್, ನಂಜಪ್ಪ ಅಲಿಯಾಸ್ ಡೆಡ್ಲಿ ನಂಜ, ವೆಂಕಟರಾಜು ಅಲಿಯಾಸ್ ತುಕಡಿ, ಗೋಪಿ ಅಲಿಯಾಸ್ ಸುಣವಾರ ಗೋಪಿ,ಪ್ರದೀಪ್ ರಮೇಶ್, ಹಾಗೂ ಶಿವರಾಜ್ ಬಂಧಿತ ಆರೋಪಿಗಳಾಗಿದ್ದಾರೆ.

ಬಂಧಿತರಲ್ಲಿ ಆರು ಮಂದಿ ರೌಡಿ ಶೀಟರ್‌ಗಳಾಗಿದ್ದು, ಅವರಿಂದ ಐದು ಕಂಟ್ರಿ ಮೇಡ್ ಪಿಸ್ತೂಲ್ ಹಾಗೂ 10 ಜೀವಂತ ಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಆನೇಕಲ್ ಠಾಣಾ ಇನ್ಸ್‌ಪೆಕ್ಟರ್ ಪ್ರಕಾಶ್ ನೇತೃತ್ವದ ತಂಡವು ಕಳೆದ ತಿಂಗಳ 14ರಂದು ಆನೇಕಲ್ ಸಮೀಪದ ಹಾಲ್ಲೇನಹಳ್ಳಿ ರೈಲ್ವೆ ಬಳಿ ಪೊಲೀಸರು ಗಸ್ತು ತಿರುಗುತ್ತಿದ್ದ ವೇಳೆ ಬ್ಯಾಗ್ ಹಿಡಿದು ಅನುಮಾನಾಸ್ಪದವಾಗಿ ನಿಂತಿದ್ದ ಕೆಲವರನ್ನು ತಡೆದು ವಿಚಾರಣೆ ನಡೆಸಿದ್ದರು.

ಬ್ಯಾಗ್ ಪರಿಶೀಲಿಸಿದಾಗ ಮೂರು ಕಂಟ್ರಿ ಮೇಡ್ ಪಿಸ್ತೂಲ್ ಹಾಗೂ 10 ಗುಂಡುಗಳು ಪತ್ತೆಯಾಗಿದ್ದವು. ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಬೆಂಗಳೂರಿನಲ್ಲಿ ನಡೆಯುತ್ತಿದ್ದ ಅಕ್ರಮ ಗನ್ ಮಾರಾಟ ಜಾಲದ ಬಗ್ಗೆ ಮಾಹಿತಿ ಲಭ್ಯವಾಗಿದೆ. ಬಳಿಕ ತನಿಖೆ ವಿಸ್ತರಿಸಿದ ಪೊಲೀಸರು ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತಷ್ಟು ಆರೋಪಿಗಳನ್ನು ಬಂಧಿಸಿದ್ದಾರೆ.

ಮಧ್ಯಪ್ರದೇಶದಿಂದ ಸಾಗಾಣೆ:

ತನಿಖೆ ವೇಳೆ ಮಧ್ಯಪ್ರದೇಶದ ಬೇಡ ಘಾಟ್ ಗ್ರಾಮದ ದಾವೂದ್ ಎಂಬಾತ ಈ ಅಕ್ರಮ ದಂಧೆಯ ಪ್ರಮುಖ ಕಿಂಗ್‌ಪಿನ್ ಎನ್ನಲಾಗಿದೆ. ದಾವೂದ್, ಪ್ರದೀಪ್ ರಮೇಶ್ ಮೂಲಕ ರೈಲಿನಲ್ಲಿ ಆನೇಕಲ್‌ಗೆ



ಗನ್‌ಗಳನ್ನು ಕಳುಹಿಸಿದ್ದ ಎಂಬ ಮಾಹಿತಿ ಪೊಲೀಸರ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಆನೇಕಲ್‌ಗೆ ಗನ್‌ಗಳನ್ನು ತಂದಿದ್ದ ಪ್ರದೀಪ್ ರಮೇಶ್ ಅವುಗಳನ್ನು ಡೆಲಿವರಿ ಮಾಡಲು ಕಾಯುತ್ತಿದ್ದ ವೇಳೆ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ ಎಂದು ತಿಳಿದುಬಂದಿದೆ.

**ರೌಡಿಗಳಿಗೆ ಮಾರಾಟ:**

ತನಿಖೆ ಮುಂದುವರಿಸಿದಾಗ ಎರಡು ಕಂಟ್ರಿ ಮೇಡ್ ಪಿಸ್ತೂಲ್‌ಗಳನ್ನು ಮಾರಾಟ ಮಾಡಿರುವ ಬಗ್ಗೆಯೂ ಮಾಹಿತಿ ಲಭ್ಯವಾಗಿದೆ. ಕೆ.ಜಿ.ಹಳ್ಳಿ ನಿವಾಸಿ ರೌಡಿ ಶೀಟರ್ ಕುಳ್ಳ ರಿಜ್ವಾನ್ ಹಾಗೂ ಮತ್ತೊಬ್ಬ ರೌಡಿ ಶೀಟರ್ ಮನೋಜ್ ಅಲಿಯಾಸ್ ಜಾಕಿಗೆ ತಲಾ ಒಂದೊಂದು ಪಿಸ್ತೂಲ್ ಮಾರಾಟ ಮಾಡಿರುವುದು ತನಿಖೆಯಿಂದ ತಿಳಿದುಬಂದಿದೆ. ಬಳಿಕ ಆರೋಪಿಗಳ ಬಳಿಯಿದ್ದ ಆ ಎರಡು ಪಿಸ್ತೂಲ್‌ಗಳನ್ನೂ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಅಕ್ರಮ ಗನ್ ದಂಧೆಯ ಹಿಂದೆ ಪ್ರಭಾವಿ ರಾಜಕಾರಣಿಗಳು ಹಾಗೂ ರಿಯಲ್ ಎಸ್ಟೇಟ್ ಉದ್ಯಮಿಗಳ ಸಂಪರ್ಕವಿದೆಯೇ ಎಂಬ ಬಗ್ಗೆಯೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಗನ್ ಸಾಗಾಣೆದಾರರ ಜೊತೆ ಸಂಪರ್ಕ ಹೊಂದಿರುವ ಹಲವು ಆರೋಪಿಗಳ ಪತ್ತೆಗೆ ಪೊಲೀಸರು ಶೋಧ ಮುಂದುವರಿಸಿದ್ದಾರೆ.

# ಇ–ಆಸ್ತಿ 2.0ಗೆ ಚಾಲನೆ: ಒಂದೇ ವೇದಿಕೆಯಲ್ಲಿ ಆಸ್ತಿ ವಿಭಜನೆ ಸೇರಿ ಹಲವು ಸೇವೆಗಳು

ಬೆಂಗಳೂರು, ಸೆ.22– ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ ಆಸ್ತಿ ದಾಖಲೆಗಳು ಹಾಗೂ ಇ–ಖಾತಾ ನಿರ್ವಹಣಾ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ನಿಟ್ಟಿನಲ್ಲಿ ಇ–ಆಸ್ತಿ 2.0 ತಂತ್ರಾಂಶಕ್ಕೆ ಇಂದು ಬೆಂಗಳೂರು ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಚಾಲನೆ ನೀಡಿದರು.

ನಾಗರಿಕರಿಗೆ ಆಸ್ತಿ ಸಂಬಂಧಿತ ಸೇವೆಗಳನ್ನು ಸುಲಭವಾಗಿ, ವೇಗವಾಗಿ ಹಾಗೂ ಪಾರದರ್ಶಕವಾಗಿ ಒದಗಿಸುವ ಉದ್ದೇಶದಿಂದ ಈ ನೂತನ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದೆ.

ಹಿಂದಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅಕ್ಟೋಬರ್ 2024ರಲ್ಲಿ ಇ–ಆಸ್ತಿ 1.0 ತಂತ್ರಾಂಶವನ್ನು ಜಾರಿಗೊಳಿಸಲಾಗಿತ್ತು. ಇದರಡಿ ಸುಮಾರು 25 ಲಕ್ಷ ಆಸ್ತಿ ದಾಖಲೆಗಳನ್ನು ಸ್ಕ್ಯಾನ್ ಮಾಡಿ, ಗಣಕೀಕರಣಗೊಳಿಸಿ ಆನ್‌ಲೈನ್‌ನಲ್ಲಿ ಲಭ್ಯವಾಗುವಂತೆ ಮಾಡಲಾಗಿತ್ತು. ತಂತ್ರಜ್ಞಾನ ಆಧಾರಿತ ಹಾಗೂ ನಾಗರಿಕ ಕೇಂದ್ರಿತ ಸೇವೆಗಳಿಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ, ಈ ಯೋಜನೆಗೆ ಭಾರತ ಸರ್ಕಾರದ ರಾಷ್ಟ್ರೀಯ ಇ–ಆಡಳಿತ ಚಿನ್ನದ ಪ್ರಶಸ್ತಿ–2025 ದೊರೆತಿತ್ತು.

ಇದೀಗ ಅದರ ಮುಂದುವರಿದ ಭಾಗವಾಗಿ ಜಿಬಿಎಯ ಆಂತರಿಕ ಮಾಹಿತಿ ತಂತ್ರಜ್ಞಾನ ತಂಡವು ಇ–ಆಸ್ತಿ 2.0 ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ. ಸುಧಾರಿತ ತಂತ್ರಜ್ಞಾನ, ಉತ್ತಮ ಬಳಕೆದಾರ ಅನುಭವ, ಸ್ವಯಂಚಾಲಿತ ಕಾರ್ಯವಿಧಾನ, ದತ್ತಾಂಶ ಸುರಕ್ಷತೆ ಹಾಗೂ ಇತರ ಸರ್ಕಾರಿ ವ್ಯವಸ್ಥೆಗಳೊಂದಿಗೆ ಸಮನ್ವಯಕ್ಕೆ ಆದ್ಯತೆ ನೀಡಲಾಗಿದೆ.

**ಕಚೇರಿಗಳಿಗೆ ಅಲೆದಾಟ ತಪ್ಪಿಸಲು ಕ್ರಮ:**

ನೂತನ ವ್ಯವಸ್ಥೆಯ ನಾಗರಿಕ ಮಾಡ್ಯೂಲ್ ಮೂಲಕ ಸಾರ್ವಜನಿಕರು ಇ–ಖಾತಾ ಹಾಗೂ ಆಸ್ತಿ ಸಂಬಂಧಿತ ವಿವಿಧ ಸೇವೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯ ಸ್ಥಿತಿಗತಿಯನ್ನು ಪರಿಶೀಲಿಸಲು ಹಾಗೂ ಪ್ರಕ್ರಿಯೆಯ ಪ್ರಗತಿಯನ್ನು ಗಮನಿಸಲು ಸಹ ಅವಕಾಶ ಕಲ್ಪಿಸಲಾಗಿದೆ. ಇದ–ರಿಂದ ಕಚೇರಿಗಳಿಗೆ ಖುದ್ದಾಗಿ ಭೇಟಿ ನೀಡುವ ಅಗತ್ಯ ಕಡಿಮೆಯಾಗಲಿದೆ ಎಂದು ಜಿಬಿಎ ತಿಳಿಸಿದೆ.

ಕರಡು ಇ–ಖಾತಾವನ್ನು ಅಗತ್ಯ ಪರಿಶೀಲನೆಗಳ ಬಳಿಕ ಅಂತಿಮ ಇ–ಖಾತಾವಾಗಿ ಪರಿವರ್ತಿಸುವ ವ್ಯವಸ್ಥೆಯೂ ಇರಲಿದೆ. ಜತೆಗೆ, ಆಸ್ತಿ ಮಾಲೀಕತ್ವ ಬದಲಾವಣೆಗಳಿಗೆ ಸಂಬಂಧಿಸಿದ ಖಾತಾ ವರ್ಗಾವಣೆ ಅಥವಾ ಮ್ಯುಟೇಷನ್ ಸೇವೆಗಳನ್ನು ಸಹ ನೂತನ ವ್ಯವಸ್ಥೆಯಡಿ ನಿರ್ವಹಿಸಬಹುದಾಗಿದೆ.

**ಬಹುಮಹಡಿ ಕಟ್ಟಡಗಳಿಗೂ ಹೊಸ ಸೌಲಭ್ಯ**

ಹೊಸ ಖಾತಾ ಹಾಗೂ ಬಹುಮಹಡಿ ಕಟ್ಟಡಗಳಲ್ಲಿನ ಫ್ಲ್ಯಾಟ್‌ಗಳು ಮತ್ತು ಇತರ ಘಟಕಗಳಿಗೆ ಸಂಬಂಧಿಸಿದ ಬಹು–ಘಟಕಗಳ ಹೊಸ ಖಾತಾ ಅರ್ಜಿಗಳನ್ನು ಸಲ್ಲಿಸಲು ಹಾಗೂ ವಿಲೇವಾರಿ ಮಾಡಲು ವ್ಯವಸ್ಥೆ ರೂಪಿಸಲಾಗಿದೆ.

ಅಲ್ಲದೆ, ಬಿಡಿಎ, ಬಿಎಂಐಸಿ,ಎಪಿಎ ಸೇರಿದಂತೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದಿಸಲಾದ ನಿವೇಶನ ವಿಭಜನೆ, ಅಂತಿಮ ಬಹುಮಹಡಿ ವಾಣಿಜ್ಯ ಘಟಕಗಳ ಎ–ಖಾತಾ ವಿಭಜನೆ ಹಾಗೂ ಅನ್ವಯವಾಗುವ ಇತರ ಆಸ್ತಿ ವಿಭಜನೆ ಪ್ರಕರಣಗಳಿಗೂ ಅವಕಾಶ ಕಲ್ಪಿಸಲಾಗುತ್ತಿದೆ.

ಅರ್ಹ ಆಸ್ತಿಗಳನ್ನು ನಿಗದಿತ ಆನ್‌ಲೈನ್ ಕಾರ್ಯಹರಿವಿನ ಮೂಲಕ ಒಂದುಗೂಡಿಸುವ ಅಮಾಲ್ಗಮೇಷನ್ ಮಾಡ್ಯೂಲ್‌ನ್ನೂ ಪರಿಚಯಿಸಲಾಗುತ್ತಿದೆ. ಇದರಿಂದ ಸಂಕೀರ್ಣ ಆಸ್ತಿ ವ್ಯವಹಾರಗಳನ್ನು ನಿರ್ವಹಿಸಲು ಅನುಕೂಲವಾಗಲಿದೆ.

**ಕಾವೇರಿ, ಬೆಸ್ಕಾಂ, ಬಿಡಬ್ಲ್ಯುಎಸ್‌ಎಸ್‌ಬಿ ಜತೆ ಸಮನ್ವಯ :**

ಇ–ಆಸ್ತಿ 2.0ರ ಪ್ರಮುಖ ಅಂಶಗಳಲ್ಲಿ ಕಾವೇರಿ, ಬೆಸ್ಕಾಂ ಹಾಗೂ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯುಎಸ್‌ಎಸ್‌ಬಿ) ಸೇರಿದಂತೆ ಇತರ ಸರ್ಕಾರಿ ವ್ಯವಸ್ಥೆಗಳೊಂದಿಗೆ ಸಮನ್ವಯವೂ ಸೇರಿದೆ.

ಇ–ಖಾತಾ ಹಾಗೂ ಆಸ್ತಿ ಸಂಬಂಧಿತ ಮಾಹಿತಿಯ ವಿನಿಮಯದ ಮೂಲಕ ವಿವಿಧ ಇಲಾಖೆಗಳ ದಾಖಲೆಗಳನ್ನು ಸಮನ್ವಯಗೊಳಿಸುವ ಗುರಿ ಹೊಂದಲಾಗಿದೆ. ಅರ್ಜಿಗಳ ಸ್ಥಿತಿಗತಿ, ಬಾಕಿ ಪ್ರಕರಣಗಳು ಹಾಗೂ ವಿಲೇವಾರಿ ಪ್ರಕ್ರಿಯೆಯ ಮೇಲ್ವಿಚಾರಣೆಯನ್ನು ಸುಧಾರಿಸಲು ಅಧಿಕಾರಿಗಳಿಗೂ ಪ್ರತ್ಯೇಕ ಇಲಾಖಾ ಮಾಡ್ಯೂಲ್ ಒದಗಿಸಲಾಗುತ್ತಿದೆ.

ಈ ಹಂತ ಹಂತದ ಅನುಷ್ಠಾನದಿಂದ ಸೇವೆಗಳ ನಿರಂತರತೆ ಕಾಪಾಡುವುದರ ಜತೆಗೆ, ತಂತ್ರಾಂಶದ ಪರೀಕ್ಷೆ, ಸಿಬ್ಬಂದಿಗೆ ತರಬೇತಿ ಹಾಗೂ ಕಾರ್ಯಾಚರಣಾ ಸಿದ್ಧತೆಗಳನ್ನು ಸಮರ್ಪಕವಾಗಿ ಕೈಗೊಳ್ಳಲು ಸಾಧ್ಯವಾಗಲಿದೆ ಎಂದು ಸಚಿವರು ತಿಳಿಸಿದರು.

**ಸಮಗ್ರ ಆಸ್ತಿ ನಿರ್ವಹಣೆಗೆ ವೇದಿಕೆ :**

ಜಿಬಿಎ ಹಾಗೂ ಬೆಂಗಳೂರಿನ ಐದು ಮಹಾನಗರ ಪಾಲಿಕೆಗಳ ಅಗತ್ಯಗಳನ್ನು ಪೂರೈಸುವ ರೀತಿಯಲ್ಲಿ ಇ–ಆಸ್ತಿ 2.0 ಅನ್ನು ರೂಪಿಸಲಾಗಿದೆ. ಭವಿಷ್ಯದಲ್ಲಿ ಹೊಸ ಸೇವೆಗಳು ಹಾಗೂ ಮಾಡ್ಯೂಲ್‌ಗಳನ್ನು ತ್ವರಿತವಾಗಿ ಅಳವಡಿಸಲು ಅನುಕೂಲವಾಗುವ ತಾಂತ್ರಿಕ ವಾಸ್ತುಶಿಲ್ಪವನ್ನು ಹೊಂದಿದೆ.

ಡಿಜಿಟಲೀಕರಿಸಿದ ಹಾಗೂ ಭೌಗೋಳಿಕವಾಗಿ ಗುರುತಿಸಲಾದ ಆಸ್ತಿ ದಾಖಲೆಗಳು, ಆಸ್ತಿ ತೆರಿಗೆ ವ್ಯವಸ್ಥೆ, ನಗರ ಯೋಜನೆ ಮತ್ತು ಕಟ್ಟಡ ನಕ್ಷೆ ಅನುಮೋದನೆಗಳು, ಡಿಜಿಟಲ್ ಭೂನಕ್ಷೆಗಳು ಹಾಗೂ ಇತರ ಇಲಾಖೆಗಳ ದತ್ತಾಂಶಗಳ ಸಮನ್ವಯಕ್ಕೆ ಈ ವೇದಿಕೆ ಪೂರಕವಾಗಲಿದೆ. ಇದ–ರಿಂದ ಬೆಂಗಳೂರಿನಲ್ಲಿ ತಂತ್ರಜ್ಞಾನ ಆಧಾರಿತ, ಪಾರದರ್ಶಕ ಹಾಗೂ ನಾಗರಿಕ ಕೇಂದ್ರಿತ ಆಸ್ತಿ ನಿರ್ವಹಣಾ ವ್ಯವಸ್ಥೆಗೆ ಮತ್ತಷ್ಟು ಬಲ ಸಿಗುವ ನಿರೀಕ್ಷೆಯಿದೆ ಎಂದು ಕೃಷ್ಣ ಬೈರೇಗೌಡ ತಿಳಿಸಿದರು.

**ಹಂತ ಹಂತವಾಗಿ ಸೇವೆಗಳ ಕಾರ್ಯಾರಂಭ**

**ಇ–ಆಸ್ತಿ 2.0ರ ವಿವಿಧ ಮಾಡ್ಯೂಲ್‌ಗಳನ್ನು ಹಂತ ಹಂತವಾಗಿ ಜಾರಿಗೊಳಿಸಲು ವೇಳಾಪಟ್ಟಿ ರೂಪಿಸಲಾಗಿದೆ.**

**ದಿನಾಂಕ ಕಾರ್ಯಾರಂಭಗೊಳ್ಳುವ ಸೇವೆ:**

**ಸೆ.21, 2026 ನಾಗರಿಕ ಮಾಡ್ಯೂಲ್ ಹಾಗೂ ಇಲಾಖಾ ಮಾಡ್ಯೂಲ್ (ಬ್ಯಾಕ್‌ಆಫೀಸ್).**

**ಸೆ.25, 2026: ಅಂತಿಮ ಇ–ಖಾತಾ ತಿದ್ದುಪಡಿ, ಹೊಸ ಖಾತಾ ಹಾಗೂ ಬಹು–ಘಟಕಗಳ ಹೊಸ ಖಾತಾ ನಾಗರಿಕ ಮಾಡ್ಯೂಲ್.**

**ಸೆ.30, 2026: ಅಂತಿಮ ಇ–ಖಾತಾ ತಿದ್ದುಪಡಿ ಇಲಾಖಾ ಮಾಡ್ಯೂಲ್.**

**ಅ.5, 2026: ಅಂತಿಮ ವಾಣಿಜ್ಯ ಬಹುಮಹಡಿ ಘಟಕಗಳ ಎ–ಖಾತಾ ವಿಭಜನೆ.**

**ಅ.10, 2026 : ಆಸ್ತಿ ವಿಭಜನೆ ಹಾಗೂ ಉಪ–ವಿಭಜನೆ.**

**ಅ.15, 2026: ಆಸ್ತಿಗಳ ಒಂದುಗೂಡಿಸುವಿಕೆ (ಅಮಾಲ್ಗಮೇಷನ್).**




ವಿಧಾನಸೌಧದ ಕೊಠಡಿ ಸಂಖ್ಯೆ 318ರಲ್ಲಿ ಇಂದು ನಡೆದ 'ಇ-ಆಸ್ತಿ 2.0" ಆಸ್ತಿ ದಾಖಲೆ ನಿರ್ವಹಣಾ ವ್ಯವಸ್ಥೆಯನ್ನು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸಚಿವ ಕೃಷ್ಣಬೈರೇಗೌಡರವರು ಲೋಕಾರ್ಪಣೆ ಮಾಡಿದರು. ಜಿಬಿಎ ಆಯುಕ್ತ ಮಹೇಶ್ವರರಾವ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.